VOLUME: 16 | 26 JUNE 2026 | ಶುಕ್ರವಾರ | RS: 2 | PAGE: 06 ISSUE: 136 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com



'ಕನ್ನಡ ಚಿತ್ರರಂಗಕ್ಕೆ ದೇಶ ಹಾಗೂ ಜಾಗತಿಕ ಮಟ್ಟದಲ್ಲಿ ಇಂತಹದೊಂದು ಮನ್ನಣೆ ಸಿಗಲು ಇದು ಸೂಕ್ತ ಸಮಯ. ಕನ್ನಡ ಸಿನಿಮಾವನ್ನು ಜಾಗತಿಕ ಮಟ್ಟಕ್ಕೆ ಕೊಂಡೊಯ್ಯಲು ಯಶ್ ಅವರಿಗಿಂತ ಅತ್ಯುತ್ತಮ ಮಾರ್ಗದರ್ಶಕ ಮತ್ತೊಬ್ಬರಿಲ್ಲ. ಒಬ್ಬ ನಟನಾಗಿ ಅವರು ಎಲ್ಲರಿಗೂ ತುಂಬಾನೇ ಸ್ಫೂರ್ತಿ ನೀಡುತ್ತಾರೆ' ಎಂದು ಪ್ರಿಯಾ ಆನಂದ್ ಯಶ್ ಅವರನ್ನು ಹಾಡಿ ಹೊಗಳಿದ್ದಾರೆ.

BHARATHA SARATHI
KANNADA DAILY NEWS PAPER

# ಭಾರತ ಸಾರಥಿ

CALL 9740160669
RNI KARKAN2011/44806
prabhavaa.com
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



## ಸಿಲಿಂಡರ್ ಮೇಲಿನ ನಿರ್ಬಂಧ ಸಂಪೂರ್ಣ ತೆರವು

ನವದೆಹಲಿ: ಹೋಟೆಲ್‌ಗಳು, ರೆಸ್ಟೋರೆಂಟ್‌ಗಳು, ಕ್ಯಾಟರಿಂಗ್ ಸೇವೆಗಳು ಹಾಗೂ ಸಣ್ಣ ಕೈಗಾರಿಕೆಗಳಿಗೆ ಕೇಂದ್ರ ಸರ್ಕಾರ ಮಹತ್ವದ ಪರಿಹಾರ ಘೋಷಿಸಿದೆ. ವಾಣಿಜ್ಯ ಬಳಕೆಯ ಎಲ್‌ಪಿಜಿ ಸಿಲಿಂಡರ್‌ಗಳ ಸರಬರಾಜಿನ ಮೇಲಿದ್ದ ಎಲ್ಲ ನಿರ್ಬಂಧಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ಸಂಪೂರ್ಣವಾಗಿ ಹಿಂಪಡೆಯಲಾಗಿದೆ. ಪಶ್ಚಿಮ ಏಷ್ಯಾದಲ್ಲಿ ಉಂಟಾಗಿದ್ದ ಉದ್ವಿಗ್ನತೆ ಕ್ರಮೇಣ ಶಮನವಾಗುತ್ತಿರುವುದು ಹಾಗೂ ಜಾಗತಿಕ ತೈಲ ಮತ್ತು ಅನಿಲ ಪೂರೈಕೆ ಸರಪಳಿ ಸಾಮಾನ್ಯ ಸ್ಥಿತಿಗೆ ಮರಳುತ್ತಿರುವ ಹಿನ್ನೆಲೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ತಿಳಿಸಿದೆ.

> ಪಶ್ಚಿಮ ಏಷ್ಯಾದಲ್ಲಿ ಉಂಟಾಗಿದ್ದ ಉದ್ವಿಗ್ನತೆ ಕ್ರಮೇಣ ಶಮನವಾಗುತ್ತಿರುವುದು ಹಾಗೂ ಜಾಗತಿಕ ತೈಲ ಮತ್ತು ಅನಿಲ ಪೂರೈಕೆ ಸರಪಳಿ ಸಾಮಾನ್ಯ ಸ್ಥಿತಿಗೆ ಮರಳುತ್ತಿರುವ ಹಿನ್ನೆಲೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ತಿಳಿಸಿದೆ.

ಕಳೆದ ಕೆಲವು ತಿಂಗಳುಗಳಿಂದ ಪಶ್ಚಿಮ ಏಷ್ಯಾದ ಸಂಘರ್ಷಗಳು ಜಾಗತಿಕ ಇಂಧನ ಮಾರುಕಟ್ಟೆಯ ಮೇಲೆ ಪರಿಣಾಮ ಬೀರಿದ್ದವು. ಕಚ್ಚಾ ತೈಲ ಹಾಗೂ ಎಲ್‌ಪಿಜಿ ಆಮದಿನಲ್ಲಿ ವ್ಯತ್ಯಯ ಉಂಟಾಗುವ ಸಾಧ್ಯತೆಯನ್ನು ಮನಗಂಡು ದೇಶೀಯ ಮಾರುಕಟ್ಟೆಯಲ್ಲಿ ಕೊರತೆ ಎದುರಾಗದಂತೆ ತಡೆಯಲು ಕೇಂದ್ರ ಸರ್ಕಾರ ವಾಣಿಜ್ಯ ಬಳಕೆಯ ಗ್ಯಾಸ್ ವಿತರಣೆಯ ಮೇಲೆ ಕೆಲವು ನಿರ್ಬಂಧಗಳನ್ನು ವಿಧಿಸಿತ್ತು.

ಆದರೆ ಇತ್ತೀಚೆಗೆ ನಡೆದ ಶಾಂತಿ ಮಾತುಕತೆಗಳ ಪರಿಣಾಮವಾಗಿ ಪರಿಸ್ಥಿತಿ ಸುಧಾರಿಸಿದ್ದು, ತೈಲ ಮತ್ತು ಅನಿಲ ಸಾಗಣೆಯ ಪ್ರಮುಖ ಸಮುದ್ರ ಮಾರ್ಗಗಳು ಸುರಕ್ಷಿತವಾಗಿವೆ. ಭಾರತಕ್ಕೆ ಆಗಮಿಸುವ ಎಲ್‌ಪಿಜಿ ಮತ್ತು ತೈಲದ ಪೂರೈಕೆ ಸಹ ಸಾಮಾನ್ಯ ಮಟ್ಟಕ್ಕೆ ಮರಳಿದೆ.

ಈ ಹಿನ್ನೆಲೆಯಲ್ಲಿ ನಿರ್ಬಂಧಗಳನ್ನು ಮುಂದುವರಿಸುವ ಅಗತ್ಯವಿಲ್ಲ ಎಂದು ಸರ್ಕಾರ ತೀರ್ಮಾನಿಸಿದೆ.

ಹೊಸ ಆದೇಶದಂತೆ, ಇಂಡಿಯನ್ ಆಯಿಲ್, ಭಾರತ್ ಪೆಟ್ರೋಲಿಯಂ ಹಾಗೂ ಹಿಂದೂಸ್ತಾನ್ ಪೆಟ್ರೋಲಿಯಂ ಸೇರಿದಂತೆ ತೈಲ ಮಾರಾಟ ಕಂಪನಿಗಳು ವಾಣಿಜ್ಯ ಬಳಕೆದಾರರಿಗೆ ಯಾವುದೇ ಪ್ರಮಾಣದ ಮಿತಿಯಿಲ್ಲದೆ ಎಲ್‌ಪಿಜಿ ಸಿಲಿಂಡರ್‌ಗಳನ್ನು ಪೂರೈಸಬಹುದಾಗಿದೆ.



## ತುಂಗಭದ್ರಾಗೆ ಗೇಟ್‌ಗಳ ಅಳವಡಿಕೆ ಪೂರ್ಣ

"ತುಂಗಭದ್ರಾ ಅಣೆಕಟ್ಟು ರಕ್ಷಣೆ ಮಾಡಲಾಗಿದೆ. ಇತಿಹಾಸ ಮರೆತವ ಇತಿಹಾಸ ಸೃಷ್ಟಿಸಲಾರ ಎಂಬ ಮಾತಿದೆ. ಇಂದು ಸಿ.ಆರ್ ಪಾಟೀಲ್ ಅವರ ನೇತೃತ್ವದಲ್ಲಿ ಚಂದ್ರಬಾಬು ನಾಯ್ಡು, ರೇವಂತ್ ರೆಡ್ಡಿ ಅವರು ಸೇರಿದಂತೆ ಮೂರು ರಾಜ್ಯಗಳ ಮುಖ್ಯಮಂತ್ರಿಗಳು ಇತಿಹಾಸ ನಿರ್ಮಿಸಿದ್ದೇವೆ. ನಾವು ಇತಿಹಾಸ ಓದುವುದು ಹಾಗೂ ಸ್ಮರಿಸುವುದಕ್ಕಿಂತ ಇತಿಹಾಸ ಸೃಷ್ಟಿಸುವುದು ನಮ್ಮ ಗುರಿ. ಜತೆಗೂಡುವುದು ಆರಂಭ, ಜತೆಗೂಡಿ ಚರ್ಚಿಸುವುದು ಪ್ರಗತಿ, ಜತೆಗೂಡಿ ಕೆಲಸ ಮಾಡುವುದು ಯಶಸ್ಸು ಎಂದು ನಾನು ಹೇಳುತ್ತಿರುತ್ತೇನೆ.

ಕೊಪ್ಪಳ: "ತುಂಗಭದ್ರಾ ನದಿ ಪಾತ್ರದ ರೈತರ ಹಿತರಕ್ಷಣೆಗೆ ಕರ್ನಾಟಕ, ಆಂಧ್ರ ಪ್ರದೇಶ ಹಾಗೂ ತೆಲಂಗಾಣ ಮೂರೂ ರಾಜ್ಯಗಳು ಸೇರಿ ಒಮ್ಮತದ ಐತಿಹಾಸಿಕ ತೀರ್ಮಾನ ಕೈಗೊಳ್ಳಲಾಗಿದೆ" ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಹೇಳಿದರು.

ಕೊಪ್ಪಳ ಜಿಲ್ಲೆ ಮುನಿರಾಬಾದ್ ಸರಕಾರಿ ಹೈಸ್ಕೂಲ್ ಮೈದಾನದಲ್ಲಿ ತುಂಗಭದ್ರಾ ಅಣೆಕಟ್ಟೆಯ 33 ಸ್ಪಿಲ್ ವೇ ಗೇಟುಗಳ ಉದ್ಘಾಟನೆ ಕಾರ್ಯಕ್ರಮದಲ್ಲಿ ಶಿವಕುಮಾರ್ ಅವರು ಗುರುವಾರ ಮಾತನಾಡಿದರು.



"ಇದು ದಕ್ಷಿಣ ಭಾರತದ ಐತಿಹಾಸಿಕ ಕಾರ್ಯಕ್ರಮ. 19ನೇ ಗೇಟ್ ತುಂಡರಿಸಿದಾಗ ಈ ಜಿಲ್ಲೆಯ ಉಸ್ತುವಾರಿ ಮಂತ್ರಿಗಳಾದ ಶಿವರಾಜ್ ತಂಗಡಗಿ ಹಾಗೂ ಅಧಿಕಾರಿಗಳು ಮಧ್ಯರಾತ್ರಿ ನನಗೆ ಕರೆ ಮಾಡಿ, ಅಣೆಕಟ್ಟು ನಡುಗುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದರು. ನಾನು ಅಂದು ಬೆಳಗ್ಗೆ 8 ಗಂಟೆಗೆ ಸ್ಥಳಕ್ಕೆ ಭೇಟಿ ನೀಡಿದೆವು. ತಕ್ಷಣವೇ ಏನು ಮಾಡಬೇಕು ಎಂದು ತಜ್ಞರೊಂದಿಗೆ ಚರ್ಚಿಸಿ ಒಂದೇ ವಾರದಲ್ಲಿ ಗೇಟ್ ಬದಲಾವಣೆ ಮಾಡಲಾಯಿತು. ಆಮೂಲಕ ಈ ಭಾಗದ ರೈತರನ್ನು ರಕ್ಷಣೆ ಮಾಡಲಾಯಿತು" ಎಂದು ತಿಳಿಸಿದರು.

"ಗೇಟ್ ತುಂಡರಿಸಿದಾಗ ವಿರೋಧ ಪಕ್ಷಗಳು ಟೀಕೆಗಳನ್ನು ಮಾಡಿದರು. ಶಾರದ ದೇವಿ, ಹುಲಿಗೆಮ್ಮ ಹಾಗೂ ಹುಚ್ಚರಾಯಸ್ವಾಮಿಯ ಆಶೀರ್ವಾದ, ಅಜ್ಜಯ್ಯ ಅವರ ಪವಾಡ, ಹಂಪಿ ವಿರೂಪಾಕ್ಷನ ಕೃಪೆ, ರಾಘವೇಂದ್ರ ಸ್ವಾಮಿಯ ಶಕ್ತಿಯಿಂದಾಗಿ ಇಂತಹ ಮಹತ್ವದ ಕಾರ್ಯಕ್ರಮ ಮಾಡಲು ಸಾಧ್ಯವಾಯಿತು. ನಮ್ಮ ಸರ್ಕಾರ 33 ಗೇಟ್ ಬದಲಾಯಿಸಲು ತೀರ್ಮಾನಿಸಿ ಈ ಮೂರು ರಾಜ್ಯಗಳ ರೈತರ ರಕ್ಷಣೆಗೆ ಭಗವಂತ ನಮಗೆ ಅವಕಾಶ ಮಾಡಿಕೊಟ್ಟಿದ್ದಾರೆ. ಅಂದು ನಾನು ನೀರಾವರಿ ಸಚಿವನಾಗಿದ್ದೆ. ಇಂದು ಮುಖ್ಯಮಂತ್ರಿಯಾಗಿದ್ದೇನೆ. ಆದರೂ ನಾನು ನಿಮ್ಮ ಸೇವಕ ಹಾಗೂ ನಿಮ್ಮ ಬಂಧು" ಎಂದರು.

"ತುಂಗಭದ್ರಾ ಅಣೆಕಟ್ಟು ರಕ್ಷಣೆ ಮಾಡಲಾಗಿದೆ. ಇತಿಹಾಸ ಮರೆತವ ಇತಿಹಾಸ ಸೃಷ್ಟಿಸಲಾರ ಎಂಬ ಮಾತಿದೆ. ಇಂದು ಸಿ.ಆರ್ ಪಾಟೀಲ್ ಅವರ ನೇತೃತ್ವದಲ್ಲಿ ಚಂದ್ರಬಾಬು ನಾಯ್ಡು, ರೇವಂತ್ ರೆಡ್ಡಿ ಅವರು ಸೇರಿದಂತೆ ಮೂರು ರಾಜ್ಯಗಳ ಮುಖ್ಯಮಂತ್ರಿಗಳು ಇತಿಹಾಸ ನಿರ್ಮಿಸಿದ್ದೇವೆ. ನಾವು ಇತಿಹಾಸ ಓದುವುದು ಹಾಗೂ ಸ್ಮರಿಸುವುದಕ್ಕಿಂತ ಇತಿಹಾಸ ಸೃಷ್ಟಿಸುವುದು ನಮ್ಮ ಗುರಿ.

ಜತೆಗೂಡುವುದು ಆರಂಭ, ಜತೆಗೂಡಿ ಚರ್ಚಿಸುವುದು ಪ್ರಗತಿ, ಜತೆಗೂಡಿ ಕೆಲಸ ಮಾಡುವುದು ಯಶಸ್ಸು ಎಂದು ನಾನು ಹೇಳುತ್ತಿರುತ್ತೇನೆ. ಸಿ.ಆರ್ ಪಾಟೀಲ್ ಅವರ ನೇತೃತ್ವದಲ್ಲಿ ಮೂರು ರಾಜ್ಯಗಳ ಮುಖ್ಯಮಂತ್ರಿಗಳು ಒಟ್ಟಾಗಿ ಸೇರಿ ಮೂರು ರಾಜ್ಯಗಳ ರಕ್ಷಣೆ ಮಾಡಿದ್ದೇವೆ" ಎಂದು ತಿಳಿಸಿದರು.

"ಈ ಅಣೆಕಟ್ಟಿನ 33 ಟಿಎಂಸಿ ನೀರನ್ನು ಉಳಿಸುವ ಬಗ್ಗೆ ರೈತ ಮುಖಂಡರು ಸಲ್ಲಿಸಿರುವ ಮನವಿ ಸೇರಿದಂತೆ ಯಾವ ರೀತಿ ರಕ್ಷಿಸಿ, ರೈತ ಕುಟುಂಬಗಳನ್ನು ಕಾಪಾಡಬೇಕು ಎಂದು ನಾವು ಚರ್ಚೆ ಮಾಡಿದ್ದೇವೆ. ನವಲಿ ಸಮನಾಂತರ ಜಲಾಶಯ, ಹೂಳೆತ್ತುವ ವಿಚಾರ ಸೇರಿದಂತೆ ಎಲ್ಲಾ ಅವಕಾಶಗಳ ಬಗ್ಗೆ ಸುದೀರ್ಘ ಚರ್ಚೆ ಮಾಡಿ ನಾವೆಲ್ಲರೂ ಒಮ್ಮತದ ಅಭಿಪ್ರಾಯಕ್ಕೆ ಬಂದಿದ್ದೇವೆ. ಈ ತೀರ್ಮಾನವನ್ನು ಕೇಂದ್ರ ಸಚಿವರೇ ಪ್ರಕಟಿಸಲಿದ್ದಾರೆ.

ಇಂದು ನಾವು ಒಂದು ತಾಸುಗಳ ಕಾಲ ಮಾಡಿರುವ ಚರ್ಚೆ ದೇಶದ ನೀರಾವರಿ ಹಾಗೂ ಒಕ್ಕೂಟ ವ್ಯವಸ್ಥೆಯಲ್ಲಿ ಇತಿಹಾಸದ ಪುಟಕ್ಕೆ ಸೇರಲಿದೆ. ನಮ್ಮ ನೀರು, ನಮ್ಮ ಹಕ್ಕು ಆಶಯದ ಅಡಿ ಮೂರು ರಾಜ್ಯಗಳ ರೈತರ ರಕ್ಷಣೆಗೆ ನಾವು ಐತಿಹಾಸಿಕ ತೀರ್ಮಾನ ಕೈಗೊಂಡಿದ್ದೇವೆ.

ತುಂಗಭದ್ರಾ ನದಿಗೆ ಜಲಾಶಯ ನಿರ್ಮಿಸುವ ಆಲೋಚನೆಗೆ 1860 ರಲ್ಲೇ ಬ್ರಿಟಿಷ್ ಇಂಜಿನಿಯರ್ ಸರ್ ಆರ್ಥರ್ ಕಾಟನ್ ಅವರು ನಾಂದಿ ಹಾಡಿದ್ದರು. ತದನಂತರ 1949 ರಲ್ಲಿ ಇದರ ಕಾಮಗಾರಿ ಆರಂಭಗೊಂಡು ಪೂರ್ಣಗೊಳ್ಳುವ ಹೊತ್ತಿಗೆ ಅನೇಕ ಮಹನೀಯರು ಇದಕ್ಕೆ ಸಾಕ್ಷಿಯಾಗಿದ್ದಾರೆ.

ದೇವರು ನಮಗೆ ಎರಡು ಆಯ್ಕೆ ಕೊಟ್ಟಿದ್ದಾನೆ. ಒಂದು ಕೊಟ್ಟು ಹೋಗುವುದು, ಮತ್ತೊಂದು ಬಿಟ್ಟು ಹೋಗುವುದು. ದೇವರು ವರ ಹಾಗೂ ಶಾಪ ನೀಡುವುದಿಲ್ಲ. ನಮಗೆ ಸಿಕ್ಕ ಅವಕಾಶದಲ್ಲಿ ನಿಮ್ಮ ಸೇವೆ ಮಾಡುತ್ತಿದ್ದೇವೆ.

ನಾನು ಸಿಎಂ ಆದ ಬಳಿಕ ಇದು ಎರಡನೇ ಸಾರ್ವಜನಿಕ ಕಾರ್ಯಕ್ರಮ. ರೈತನಿಗೆ ಸಂಬಳವಿಲ್ಲ, ಬಡ್ತಿ ಇಲ್ಲ, ಪಿಂಚಣಿ ಇಲ್ಲ, ರಜೆಯೂ ಇಲ್ಲ ಹಾಗೂ ನಿವೃತ್ತಿಯೂ ಇಲ್ಲ. ಇಂತಹ ಕಷ್ಟದ ಪರಿಸ್ಥಿತಿಯಲ್ಲೂ ದೇಶಕ್ಕೆ ಅನ್ನ ನೀಡುವ ರೈತನ ಬದುಕನ್ನು ಉಳಿಸಬೇಕು ಮತ್ತು ಈ ಭಾಗದ ಭತ್ತದ ಕಣಜವನ್ನು ಕಾಪಾಡಬೇಕು ಎಂಬ ದೃಢ ತೀರ್ಮಾನವನ್ನು ನಿಮ್ಮೆಲ್ಲರ ಆಶೀರ್ವಾದದೊಂದಿಗೆ ನಾವು ತೆಗೆದುಕೊಂಡಿದ್ದೇವೆ" ಎಂದರು.

## ನಟಿ ಕೃಷಿ ತಾಪಂಡ ನಿವಾಸದಲ್ಲಿ ಉದ್ಯಮಿ ಆತ್ಮಹತ್ಯೆ

ಬೆಂಗಳೂರು: ರಾಜರಾಜೇಶ್ವರಿ ನಗರ (ಆರ್.ಆರ್. ನಗರ) ವ್ಯಾಪ್ತಿಯಲ್ಲಿರುವ ನಟಿ ಕೃಷಿ ತಾಪಂಡ ಅವರ ಅಪಾರ್ಟ್‌ಮೆಂಟ್ ನಿವಾಸದಲ್ಲಿ ಉದ್ಯಮಿ ವೈಶಾಖ್ ಮೃತ ಸ್ಥಿತಿಯಲ್ಲಿ ಪತ್ತೆಯಾಗಿರುವ ಘಟನೆ ನಗರದಲ್ಲಿ ಚರ್ಚೆಗೆ ಗ್ರಾಸವಾಗಿದೆ. ಘಟನೆ ಕುರಿತು ಮಾಹಿತಿ ಪಡೆದ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಪ್ರಕರಣದ ವಿವಿಧ ಆಯಾಮಗಳ ಕುರಿತು ತನಿಖೆ ಆರಂಭಿಸಿದ್ದಾರೆ.

ಮೂಲಗಳ ಪ್ರಕಾರ, ವೈಶಾಖ್ ಆಟೊಮೊಬೈಲ್ ಹಾಗೂ ಗ್ಯಾರೇಜ್ ಉದ್ಯಮದಲ್ಲಿ ತೊಡಗಿಸಿಕೊಂಡಿದ್ದರು. ಅವರಿಗೆ ಸುಮಾರು 15 ವರ್ಷಗಳ ಹಿಂದೆ ವಿವಾಹವಾಗಿದ್ದು, ಪತ್ನಿ ಮತ್ತು 14 ವರ್ಷದ ಮಗನಿದ್ದಾರೆ. ಕುಟುಂಬದವರು ಹಾಗೂ ಆಪ್ತರು ಅವರ ಅಕಾಲಿಕ ನಿಧನಕ್ಕೆ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ಪೊಲೀಸ್ ಮೂಲಗಳ ಮಾಹಿತಿ ಪ್ರಕಾರ, ವೈಶಾಖ್ ಇತ್ತೀಚಿನ ದಿನಗಳಲ್ಲಿ ವೈಯಕ್ತಿಕ ಮತ್ತು ಕಾನೂನು ಸಂಬಂಧಿತ ಕೆಲವು ಸವಾಲುಗಳನ್ನು ಎದುರಿಸುತ್ತಿದ್ದರು ಎನ್ನಲಾಗಿದೆ. ಈ ಹಿಂದೆ ಅವರು ಉದ್ಯಮಿ ಅರವಿಂದ ರೆಡ್ಡಿ ಅವರಿಗೆ ಸಂಬಂಧಿಸಿದ ಒಂದು ಪ್ರಕರಣದಲ್ಲಿ ತನಿಖೆ ಮತ್ತು ಕಾನೂನು ಪ್ರಕ್ರಿಯೆಗಳನ್ನು ಎದುರಿಸಿದ್ದರು.

ಆ ಪ್ರಕರಣವು ಸಾಕಷ್ಟು ಗಮನ ಸೆಳೆದಿದ್ದು, ನಂತರವೂ ಅದರ ಪರಿಣಾಮಗಳು ಅವರ ವೈಯಕ್ತಿಕ ಜೀವನದ ಮೇಲೆ ಬೀರಿದ್ದವು ಎನ್ನಲಾಗಿದೆ. ಇದೇ ವೇಳೆ, ವೈಶಾಖ್ ಮತ್ತು ಅವರ ಕುಟುಂಬದ ನಡುವೆ ಕೆಲ ವೈಯಕ್ತಿಕ ಭಿನ್ನಾಭಿಪ್ರಾಯಗಳಿದ್ದವು ಎಂಬ ಮಾಹಿತಿಯೂ ಕೇಳಿಬರುತ್ತಿದೆ. ಈ ಹಿನ್ನೆಲೆಯಲ್ಲಿ ಅವರು ಕೆಲವೊಮ್ಮೆ ಸ್ನೇಹಿತರ ಮತ್ತು ಪರಿಚಿತರ ಬಳಿ ತಂಗುತ್ತಿದ್ದರು ಎಂದು ತಿಳಿದುಬಂದಿದೆ. ಘಟನೆಯ ದಿನವೂ ಅವರು ಕೃಷಿ ತಾಪಂಡ ಅವರ ನಿವಾಸಕ್ಕೆ ಬಂದಿದ್ದರು ಎನ್ನಲಾಗುತ್ತಿದೆ.

ಘಟನೆ ಸಂಭವಿಸಿದ ವೇಳೆ ನಟಿ ಕೃಷಿ ತಾಪಂಡ ಅವರು ನಗರದಲ್ಲಿರಲಿಲ್ಲ ಎಂದು ತಿಳಿದುಬಂದಿದೆ. ಅವರು ನೆಲಮಂಗಲ ಸಮೀಪದ ಪ್ರಕೃತಿ ಚಿಕಿತ್ಸಾ ಕೇಂದ್ರಕ್ಕೆ ತೆರಳಿದ್ದರೆಂದು ವರದಿಯಾಗಿದೆ. ವಿಷಯ ತಿಳಿದ ತಕ್ಷಣ ಅವರು ಸಂಬಂಧಿತ ಅಧಿಕಾರಿಗಳೊಂದಿಗೆ ಸಂಪರ್ಕದಲ್ಲಿದ್ದು, ತನಿಖೆಗೆ ಅಗತ್ಯ ಸಹಕಾರ ನೀಡುತ್ತಿದ್ದಾರೆ ಎಂದು ಮೂಲಗಳು ತಿಳಿಸಿವೆ. ಪ್ರಕರಣದ ಮಾಹಿತಿ ಸಿಗುತ್ತಿದ್ದಂತೆ ಪೊಲೀಸರು ಸ್ಥಳ ಪರಿಶೀಲನೆ ನಡೆಸಿ ಅಗತ್ಯ ಸಾಕ್ಷ್ಯಗಳನ್ನು ಸಂಗ್ರಹಿಸಿದ್ದಾರೆ.

## ಅಡ್ಡ ಮತದಾನಕ್ಕೆ ವಿಜಯೇಂದ್ರ ಕಾರಣ

ಬೆಂಗಳೂರು: ವಿಧಾನ ಪರಿಷತ್ ಚುನಾವಣೆಯಲ್ಲಿ ಬಿಜೆಪಿ ಶಾಸಕರ ಅಡ್ಡಮತದಾನ ವಿಚಾರ ರಾಜ್ಯ ರಾಜಕಾರಣದಲ್ಲಿ ಹೊಸ ತಿರುವು ಪಡೆದುಕೊಂಡಿದ್ದು, ಬಿಜೆಪಿ ಉಚ್ಚಾಟಿತ ಶಾಸಕ ಎಸ್.ಟಿ. ಸೋಮಶೇಖರ್ ಪಕ್ಷದ ರಾಜ್ಯ ನಾಯಕರ ವಿರುದ್ಧ ಗಂಭೀರ ಆರೋಪಗಳನ್ನು ಮಾಡಿದ್ದಾರೆ.

**ಮಾಧ್ಯಮ ಗಳೊಂದಿಗೆ ಮಾತನಾಡಿದ ಅವರು, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹಾಗೂ ಪ್ರತಿಪಕ್ಷ ನಾಯಕ ಆರ್. ಅಶೋಕ್ ಪರಸ್ಪರರ ಅಭ್ಯರ್ಥಿಗಳನ್ನು ಸೋಲಿಸುವ ಉದ್ದೇಶದಿಂದಲೇ ಅಡ್ಡಮತದಾನ ಮಾಡಿಸಿರಬಹುದು ಎಂದು ಆರೋಪಿಸಿದರು. ಈ ಬಗ್ಗೆ ಅನುಮಾನಗಳಿಗೆ ತೆರೆ ಎಳೆಯಬೇಕಾದರೆ ಇಬ್ಬರೂ ಧರ್ಮಸ್ಥಳಕ್ಕೆ ತೆರಳಿ ಪ್ರಮಾಣ ಮಾಡಲಿ ಎಂದು ಸವಾಲು ಹಾಕಿದರು.**


ಪಕ್ಷದಿಂದ ತಮ್ಮನ್ನು ಉಚ್ಚಾಟನೆ ಮಾಡಿರುವ ಕ್ರಮದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ ಸೋಮಶೇಖರ್, ಅಡ್ಡಮತದಾನಕ್ಕೆ ಪಕ್ಷದ ಆಂತರಿಕ ಕಲಹವೇ ಕಾರಣ ಎಂದು ಹೇಳಿದರು. ವಿಧಾನ ಪರಿಷತ್ ಚುನಾವಣೆಗೆ ಮುನ್ನ ಶಾಸಕರನ್ನು ಒಗ್ಗೂಡಿಸುವ ಕೆಲಸವನ್ನು ನಾಯಕತ್ವ ಮಾಡಬೇಕಿತ್ತು. ಆದರೆ ಬಿಜೆಪಿಯಲ್ಲಿ ಅಂತಹ ಪ್ರಯತ್ನಗಳೇ ನಡೆದಿಲ್ಲ ಎಂದು ದೂರಿದರು.

"ಕಾಂಗ್ರೆಸ್ ಪಕ್ಷದಲ್ಲಿ ಶಾಸಕರಿಗೆ ಚುನಾವಣಾ ಪ್ರಕ್ರಿಯೆ ಕುರಿತು ಪೂರ್ವಭಾವಿ ತರಬೇತಿ ನೀಡಲಾಗಿತ್ತು. ಆದರೆ ಬಿಜೆಪಿಯಲ್ಲಿ ವಿಪ್ ಕೂಡ ಸಮರ್ಪಕವಾಗಿ ಜಾರಿ ಮಾಡಲಿಲ್ಲ. ಚುನಾವಣೆ ಬೆಳಗ್ಗೆ 9 ಗಂಟೆಗೆ ಇದ್ದರೂ, ಕೊನೆಯ ಕ್ಷಣದಲ್ಲಿ ಮಾತ್ರ ಮಾಹಿತಿ ನೀಡಲಾಯಿತು. ಈ ನಿರ್ಲಕ್ಷ್ಯವೇ ಅಡ್ಡಮತದಾನಕ್ಕೆ ಕಾರಣವಾಗಿದೆ," ಎಂದು ಅವರು ಹೇಳಿದರು.

ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಅವರ ಹೇಳಿಕೆಗೂ ತಿರುಗೇಟು ನೀಡಿದ ಸೋಮಶೇಖರ್, "ನಾನು ಮತ್ತು ಶಿವರಾಮ ಹೆಬ್ಬಾರ್ ರಾಜೀನಾಮೆ ನೀಡಬೇಕು ಎಂದು ಹೇಳುವ ಮೊದಲು ಪಕ್ಷದ ಒಳಗಿನ ಸಮಸ್ಯೆಗಳನ್ನು ಸರಿಪಡಿಸಲಿ. ಶೋಭಾ ಕರಂದ್ಲಾಜೆ ಅವರಿಗೆ ಅಶೋಕ್ ಕಂಡರೂ ಆಗುವುದಿಲ್ಲ, ವಿಜಯೇಂದ್ರ ಕಂಡರೂ ಆಗುವುದಿಲ್ಲ. ಬಿಜೆಪಿಯಲ್ಲಿನ ಇಂದಿನ ಗೊಂದಲಗಳಿಗೆ ಅವರೂ ಕಾರಣರಾಗಿದ್ದಾರೆ," ಎಂದು ವಾಗ್ದಾಳಿ ನಡೆಸಿದರು.

## 62 ಲಕ್ಷ ಮಕ್ಕಳಿಗೆ ಪೋಲಿಯೋ ಲಸಿಕೆ ಗುರಿ

ಬೆಂಗಳೂರು: ರಾಜ್ಯದಲ್ಲಿ ಜೂನ್ 28ರಂದು ಒಂದು ಸುತ್ತಿನ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದ್ದು, 0 ರಿಂದ 5 ವರ್ಷದೊಳಗಿನ ಸುಮಾರು 62 ಲಕ್ಷ ಮಕ್ಕಳಿಗೆ ಎರಡು ಹನಿ ಪೋಲಿಯೋ ಲಸಿಕೆ ನೀಡುವ ಗುರಿ ಹೊಂದಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ.ಖಾದರ್ ತಿಳಿಸಿದ್ದಾರೆ.



ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಚಿವರು, ರಾಜ್ಯದ ಎಲ್ಲ ಆಸ್ಪತ್ರೆಗಳು, ಅಂಗನವಾಡಿಗಳು, ಗುಡ್ಡಗಾಡು ಪ್ರದೇಶಗಳು, ಇಟ್ಟಿಗೆ ಭಟ್ಟಿಗಳು, ಕಾಮಗಾರಿ ಸ್ಥಳಗಳು, ಸ್ಲಂ ಪ್ರದೇಶಗಳು, ವಲಸೆ ಕಾರ್ಮಿಕರ ವಸತಿಗಳು, ತೋಟದ ಮನೆಗಳು, ರೈಲು ನಿಲ್ದಾಣಗಳು, ಮೆಟ್ರೋ ನಿಲ್ದಾಣಗಳು, ವಿಮಾನ ನಿಲ್ದಾಣಗಳು ಹಾಗೂ ಇತರೆ ಜನನಿಬಿಡ ಪ್ರದೇಶಗಳಲ್ಲಿ ವಿಶೇಷ ವ್ಯವಸ್ಥೆ ಮಾಡಲಾಗಿದೆ ಎಂದು ಹೇಳಿದರು.

ಈ ಬಾರಿ ಟೈಪ್-1 ಮತ್ತು ಟೈಪ್-3 ತಳಿಗಳ ವಿರುದ್ಧ ರಕ್ಷಣೆ ನೀಡುವ ಪೋಲಿಯೋ ಲಸಿಕೆಯನ್ನು ಬಳಸಲಾಗುತ್ತಿದ್ದು, ಜೂನ್ 28ರಂದು ಬೂತ್‌ಗಳಲ್ಲಿ ಲಸಿಕೆ ನೀಡಿದ ಬಳಿಕ ಮುಂದಿನ ಎರಡು-ಮೂರು ದಿನಗಳ ಕಾಲ ಮನೆ-ಮನೆಗೆ ತೆರಳಿ ಮಕ್ಕಳಿಗೆ ಲಸಿಕೆ ಹಾಕಲಾಗುತ್ತದೆ. ವಲಸಿಗರು ಹಾಗೂ ಹೆಚ್ಚಿನ ಅಪಾಯದ ಪ್ರದೇಶಗಳಲ್ಲಿ ವಾಸಿಸುವ ಮಕ್ಕಳಿಗೆ ವಿಶೇಷ ಆದ್ಯತೆ ನೀಡಲಾಗುತ್ತಿದೆ.

ಸಚಿವರ ಪ್ರಕಾರ, ಸಾರ್ವತ್ರಿಕ ಲಸಿಕಾ ಕಾರ್ಯಕ್ರಮದಡಿ ಪ್ರತಿಯೊಂದು ಮಗುವಿಗೂ ಐದು ಡೋಸ್ ಓರಲ್ ಪೋಲಿಯೋ ವ್ಯಾಕ್ಸಿನ್ ಹಾಗೂ ಮೂರು ಡೋಸ್ ಇಂಜೆಕ್ಟಬಲ್ ಪೋಲಿಯೋ ವ್ಯಾಕ್ಸಿನ್ ನೀಡಲಾಗುತ್ತಿದೆ. ಯಾವುದೇ ಮಗು ಲಸಿಕೆಯಿಂದ ವಂಚಿತರಾಗದಂತೆ ನೋಡಿಕೊಳ್ಳುವುದು ಸರ್ಕಾರದ ಮುಖ್ಯ ಗುರಿಯಾಗಿದೆ.

ಭಾರತವು 2014ರಲ್ಲಿ ಅಧಿಕೃತವಾಗಿ ಪೋಲಿಯೋ ಮುಕ್ತ ರಾಷ್ಟ್ರದ ಮಾನ್ಯತೆ ಪಡೆದಿದ್ದು, ಕಳೆದ 14 ವರ್ಷಗಳಿಂದ ಯಾವುದೇ ಹೊಸ ಪೋಲಿಯೋ ಪ್ರಕರಣ ವರದಿಯಾಗಿಲ್ಲ. ಆದಾಗ್ಯೂ, ನೆರೆಯ ಕೆಲವು ರಾಷ್ಟ್ರಗಳಲ್ಲಿ ಇನ್ನೂ ಪೋಲಿಯೋ ವೈರಸ್ ಕಂಡುಬರುತ್ತಿರುವ ಕಾರಣ ಮುನ್ನೆಚ್ಚರಿಕೆ ಕ್ರಮವಾಗಿ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ನಿರಂತರವಾಗಿ ನಡೆಸಲಾಗುತ್ತಿದೆ.

ರಾಜ್ಯದಲ್ಲಿ ಈ ಅಭಿಯಾನಕ್ಕಾಗಿ 36,076 ಪೋಲಿಯೋ ಬೂತ್‌ಗಳು, 988 ಸಂಚಾರಿ ತಂಡಗಳು ಹಾಗೂ 2,125 ಟ್ರಾನ್ಸಿಟ್ ತಂಡಗಳನ್ನು ನಿಯೋಜಿಸಲಾಗಿದೆ. ಒಟ್ಟು 1.14 ಲಕ್ಷಕ್ಕೂ ಹೆಚ್ಚು ಲಸಿಕಾ ಕಾರ್ಯಕರ್ತರು ಮತ್ತು 7,197 ಮೇಲ್ವಿಚಾರಕರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಈ ಹಿಂದೆ ಎಷ್ಟೇ ಬಾರಿ ಪೋಲಿಯೋ ಲಸಿಕೆ ಪಡೆದಿದ್ದರೂ, ಜೂನ್ 28ರಂದು ನಡೆಯುವ ಅಭಿಯಾನದಲ್ಲಿ ಮತ್ತೆ ಎರಡು ಹನಿ ಲಸಿಕೆ ಹಾಕಿಸುವಂತೆ ಪೋಷಕರಿಗೆ ಸಚಿವರು ಮನವಿ ಮಾಡಿದ್ದಾರೆ. "ಪೋಲಿಯೋ ಮುಕ್ತ ಭಾರತ, ಪೋಲಿಯೋ ಮುಕ್ತ ಕರ್ನಾಟಕ" ಎಂಬ ಘೋಷಣೆಯಡಿ ನಡೆಯುವ ಈ ಅಭಿಯಾನವನ್ನು ಯಶಸ್ವಿಗೊಳಿಸಲು ಸಾರ್ವಜನಿಕರ ಸಹಕಾರ ಅಗತ್ಯ ಎಂದು ಅವರು ಹೇಳಿದರು.

## ವಿಜಯೇಂದ್ರ ಧರ್ಮಸ್ಥಳಕ್ಕೆ

ಬೆಂಗಳೂರು: ವಿಧಾನ ಪರಿಷತ್ ಚುನಾವಣೆಯಲ್ಲಿ ನಡೆದ ಅಡ್ಡಮತದಾನ ಪ್ರಕರಣದ ಹಿನ್ನೆಲೆಯಲ್ಲಿ ಬಿಜೆಪಿ ಒಳರಾಜಕೀಯ ಚಟುವಟಿಕೆಗಳು ತೀವ್ರಗೊಂಡಿರುವ ನಡುವೆಯೇ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ನಾಳೆ ಧರ್ಮಸ್ಥಳಕ್ಕೆ ಭೇಟಿ ನೀಡಿ ಶ್ರೀ ಕ್ಷೇತ್ರ ಮಂಜುನಾಥ ಸ್ವಾಮಿಯ ದರ್ಶನ ಪಡೆಯಲಿದ್ದಾರೆ.

ಪರಿಷತ್ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಗೆ ಅಡ್ಡಮತದಾನ ಮಾಡಿದ ಶಾಸಕರನ್ನು ಪತ್ತೆಹಚ್ಚುವ ಉದ್ದೇಶದಿಂದ ಧರ್ಮಸ್ಥಳದಲ್ಲಿ ಬಿಜೆಪಿ ಶಾಸಕಾಂಗ ಪಕ್ಷದ ಸಭೆ ನಡೆಸಿ ಆಣೆ-ಪ್ರಮಾಣ ಮಾಡಿಸುವ ಚಿಂತನೆ ಪಕ್ಷದೊಳಗೆ ನಡೆದಿತ್ತು. ಆದರೆ, ಈ ಪ್ರಸ್ತಾವನೆಗೆ ಕೆಲ ಶಾಸಕರು ಹಾಗೂ ಹಿರಿಯ ನಾಯಕರು ವಿರೋಧ ವ್ಯಕ್ತಪಡಿಸಿದ ಹಿನ್ನೆಲೆಯಲ್ಲಿ ಆ ಯೋಜನೆಯನ್ನು ಕೈಬಿಡಲಾಗಿದೆ ಎನ್ನಲಾಗಿದೆ.

ಪ್ರಸ್ತುತ ದೆಹಲಿ ಪ್ರವಾಸದಲ್ಲಿರುವ ವಿಜಯೇಂದ್ರ ಅವರು ಇಂದು ರಾತ್ರಿ ನೇರವಾಗಿ ಮಂಗಳೂರಿಗೆ ಆಗಮಿಸಿ, ಅಲ್ಲಿಂದ ಧರ್ಮಸ್ಥಳಕ್ಕೆ ತೆರಳಲಿದ್ದಾರೆ. ಧರ್ಮಸ್ಥಳದಲ್ಲೇ ವಾಸ್ತವ್ಯ ಹೂಡಿ, ಶುಕ್ರವಾರ ಬೆಳಗ್ಗೆ ಶ್ರೀ ಮಂಜುನಾಥ ಸ್ವಾಮಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಲಿದ್ದಾರೆ.

ಧರ್ಮಸ್ಥಳದಂತಹ ಧಾರ್ಮಿಕ ಕ್ಷೇತ್ರದಲ್ಲಿ ರಾಜಕೀಯ ಉದ್ದೇಶದ ಸಭೆ ನಡೆಸುವುದು ಕ್ಷೇತ್ರದ ಪಾವಿತ್ರ್ಯತೆಗೆ ಧಕ್ಕೆ ತರುತ್ತದೆ ಎಂಬ ಅಭಿಪ್ರಾಯ ಪಕ್ಷದ ಕೆಲವು ಮುಖಂಡರಿಂದ ವ್ಯಕ್ತವಾಗಿತ್ತು. ಈ ಹಿನ್ನೆಲೆಯಲ್ಲಿ ಶಾಸಕರನ್ನು ಧರ್ಮಸ್ಥಳಕ್ಕೆ ಕರೆತರುವ ಯೋಚನೆಯನ್ನು ಕೈಬಿಟ್ಟು, ವಿಜಯೇಂದ್ರ ಅವರು ವೈಯಕ್ತಿಕವಾಗಿ ದೇವರ ದರ್ಶನ ಪಡೆಯುವ ನಿರ್ಧಾರಕ್ಕೆ ಬಂದಿದ್ದಾರೆ ಎಂದು ಪಕ್ಷದ ಮೂಲಗಳು ತಿಳಿಸಿವೆ. ಪ್ರಸ್ತುತ ದೆಹಲಿ ಪ್ರವಾಸದಲ್ಲಿರುವ ವಿಜಯೇಂದ್ರ ಅವರು ಇಂದು ರಾತ್ರಿ ನೇರವಾಗಿ ಮಂಗಳೂರಿಗೆ ಆಗಮಿಸಿ, ಅಲ್ಲಿಂದ ಧರ್ಮಸ್ಥಳಕ್ಕೆ ತೆರಳಲಿದ್ದಾರೆ. ಧರ್ಮಸ್ಥಳದಲ್ಲೇ ವಾಸ್ತವ್ಯ ಹೂಡಿ, ಶುಕ್ರವಾರ ಬೆಳಗ್ಗೆ ಶ್ರೀ ಮಂಜುನಾಥ ಸ್ವಾಮಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಲಿದ್ದಾರೆ.

ವಿಧಾನ ಪರಿಷತ್ ಚುನಾವಣೆಯ ಅಡ್ಡಮತದಾನ ಪ್ರಕರಣದ ಬಳಿಕ ಬಿಜೆಪಿ ಒಳಗೆ ಆರೋಪ-ಪ್ರತ್ಯಾರೋಪಗಳು, ಅಸಮಾಧಾನ ಹಾಗೂ ನಾಯಕತ್ವದ ಕುರಿತ ಚರ್ಚೆಗಳು ಮುಂದುವರಿದಿರುವ ಸಂದರ್ಭದಲ್ಲಿ ವಿಜಯೇಂದ್ರ ಅವರ ಧರ್ಮಸ್ಥಳ ಭೇಟಿ ರಾಜಕೀಯವಾಗಿ ಮಹತ್ವ ಪಡೆದುಕೊಂಡಿದೆ. ಈ ಭೇಟಿ ಕೇವಲ ಧಾರ್ಮಿಕ ಪ್ರವಾಸವೇ ಅಥವಾ ಪಕ್ಷದೊಳಗಿನ ಬೆಳವಣಿಗೆಗಳಿಗೆ ಸಂಬಂಧಿಸಿದ ಸಂದೇಶವನ್ನೂ ಒಳಗೊಂಡಿದೆಯೇ ಎಂಬ ಬಗ್ಗೆ ರಾಜಕೀಯ ವಲಯದಲ್ಲಿ ಚರ್ಚೆ ನಡೆಯುತ್ತಿದೆ.

ಭಾರತ ಸಾರಥಿ
26/06/2026
BHARATHA SARATHI KANNADA DAILY NEWS PAPER
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಜಾಗತಿಕ ಆಘಾತಗಳ ನಡುವೆಯೂ ಭಾರತದ ಆರ್ಥಿಕ ಸ್ಥಿರತೆ; ಹೂಡಿಕೆದಾರರ ವಿಶ್ವಾಸ ಅಚಲ

ಬೆಂಗಳೂರು

ಜಾಗತಿಕ ಮಟ್ಟದಲ್ಲಿ ಆರ್ಥಿಕ ಅನಿಶ್ಚಿತತೆ, ಕಚ್ಚಾ ತೈಲ ಬೆಲೆ ಏರಿಕೆ, ರೂಪಾಯಿ ಮೌಲ್ಯ ಕುಸಿತ ಹಾಗೂ ವಿದೇಶಿ ಹೂಡಿಕೆದಾರರ ನಿರಂತರ ಹಣ ಹಿಂಪಡೆಯುವಿಕೆ ಸೇರಿದಂತೆ ಹಲವು ಸವಾಲುಗಳ ನಡುವೆಯೂ ಭಾರತದ ಆರ್ಥಿಕತೆಯ ಮೂಲಭೂತ ಅಂಶಗಳು ದೃಢವಾಗಿದ್ದು, ದೇಶೀಯ ಹೂಡಿಕೆದಾರರ ವಿಶ್ವಾಸ ಮಾರುಕಟ್ಟೆಗೆ ಬಲ ತುಂಬಿದೆ ಎಂದು ಪಿಎಲ್ ಅಸೆಟ್ ಮ್ಯಾನೇಜ್‌ಮೆಂಟ್ ಬಿಡುಗಡೆ ಮಾಡಿದ ಮೇ 2026ರ ಮಾಸಿಕ ವರದಿ ತಿಳಿಸಿದೆ.

ವರದಿ ಪ್ರಕಾರ, ಸಂಸ್ಥೆಯ ಪ್ರಮುಖ ಹೂಡಿಕೆ ಯೋಜನೆಗಳಲ್ಲಿ ಒಂದಾದ ಅಕ್ವಾ ಪೋರ್ಟ್‌ಫೋಲಿಯೊ ನಿರ್ವಹಣಾ ಸೇವೆಯು ಮೇ ತಿಂಗಳಲ್ಲಿ ಶೇ. 2.82ರಷ್ಟು ಆದಾಯ ಗಳಿಸಿದ್ದು, ತನ್ನ ಮಾನದಂಡ ಸೂಚ್ಯಂಕಕ್ಕಿಂತ ಗಮನಾರ್ಹವಾಗಿ ಉತ್ತಮ ಪ್ರದರ್ಶನ ನೀಡಿದೆ. ಮತ್ತೊಂದು ಯೋಜನೆಯಾದ ಎಂಎಡಿಪಿ ಕೂಡ ಶೇ. 1.83ರಷ್ಟು ಆದಾಯ ದಾಖಲಿಸಿದೆ.

ಮೇ ತಿಂಗಳಲ್ಲಿ ಜಾಗತಿಕ ಮಾರುಕಟ್ಟೆಗಳು ಎರಡು ವಿಭಿನ್ನ ಬೆಳವಣಿಗೆಗಳಿಗೆ ಸಾಕ್ಷಿಯಾದವು. ಅಮೆರಿಕ, ದಕ್ಷಿಣ ಕೊರಿಯಾ ಮತ್ತು ತೈವಾನ್‌ನಲ್ಲಿ ಕೃತಕ ಬುದ್ಧಿಮತ್ತೆ ಹಾಗೂ ಅರೆವಾಹಕ ತಂತ್ರಜ್ಞಾನ ಕ್ಷೇತ್ರಗಳಿಗೆ ಭಾರೀ ಪ್ರಮಾಣದ ಹೂಡಿಕೆ ಹರಿದು ಬಂದರೆ, ಭಾರತವು ಕಚ್ಚಾ ತೈಲ ಬೆಲೆ ಏರಿಕೆ, ರೂಪಾಯಿ ಮೌಲ್ಯ ಕುಸಿತ ಮತ್ತು ಹಣದುಬ್ಬರದ ಒತ್ತಡಗಳನ್ನು ಎದುರಿಸಬೇಕಾಯಿತು.

ಈ ಅವಧಿಯಲ್ಲಿ ಬ್ರೆಂಟ್ ಕಚ್ಚಾ ತೈಲದ ಬೆಲೆ ಪ್ರತಿ ಬ್ಯಾರೆಲ್‌ಗೆ 114 ಡಾಲರ್‌ಗಳವರೆಗೆ ಏರಿಕೆಯಾಯಿತು. ರೂಪಾಯಿ ಮೌಲ್ಯ ಡಾಲರ್ ಎದುರು ದಾಖಲೆಯ ಕನಿಷ್ಠ ಮಟ್ಟಕ್ಕೆ ತಲುಪಿತು. ಸಗಟು ಬೆಲೆ ಸೂಚ್ಯಂಕ ಆಧಾರಿತ ಹಣದುಬ್ಬರವು ಹಲವು ವರ್ಷಗಳ ಗರಿಷ್ಠ ಮಟ್ಟವನ್ನು ಮುಟ್ಟಿತು. ಆದಾಗ್ಯೂ, ತಿಂಗಳ ಅಂತ್ಯದ ವೇಳೆಗೆ ಕಚ್ಚಾ ತೈಲದ ಬೆಲೆ ಇಳಿಕೆಯಾಗಿದ್ದು ಮಾರುಕಟ್ಟೆಯ ಮೇಲಿನ ಒತ್ತಡವನ್ನು ತಗ್ಗಿಸಿತು.

ಈ ಎಲ್ಲಾ ಸವಾಲುಗಳ ನಡುವೆಯೂ ಮಧ್ಯಮ ಮತ್ತು ಸಣ್ಣ ಬಂಡವಾಳದ ಕಂಪನಿಗಳ ಷೇರುಗಳು ಉತ್ತಮ ಪ್ರದರ್ಶನ ನೀಡಿವೆ. ಮಧ್ಯಮ ಬಂಡವಾಳದ ಸೂಚ್ಯಂಕ ಹಾಗೂ ಸಣ್ಣ ಬಂಡವಾಳದ ಸೂಚ್ಯಂಕ ಏರಿಕೆ ಕಂಡಿದ್ದರೆ, ಪ್ರಮುಖ ಸೂಚ್ಯಂಕ ಸ್ವಲ್ಪ ಮಟ್ಟಿನ ಕುಸಿತ ದಾಖಲಿಸಿದೆ.

ವಿದೇಶಿ ಸಾಂಸ್ಥಿಕ ಹೂಡಿಕೆದಾರರು ನಿರಂತರವಾಗಿ ಹಣ ಹಿಂಪಡೆಯುತ್ತಿದ್ದರೂ, ದೇಶೀಯ ಹೂಡಿಕೆದಾರರ ಭಾಗವಹಿಸುವಿಕೆ ಮಾರುಕಟ್ಟೆಗೆ ಬಲ ನೀಡಿದೆ.

# ಎಐ ಹೊಣೆಗಾರಿಕೆ ಕೊರತೆ ಬಗ್ಗೆ ಉದ್ಯಮಗಳಿಗೆ ವೀಮ್ ಎಚ್ಚರಿಕೆ

ಬೆಂಗಳೂರು

ದೇಶದಲ್ಲಿ ಡಿಜಿಟಲ್ ಆರ್ಥಿಕತೆ ವೇಗವಾಗಿ ಬೆಳೆಯುತ್ತಿರುವ ಹಿನ್ನೆಲೆಯಲ್ಲಿ, ಡೇಟಾ ಭದ್ರತೆ ಮತ್ತು ಕೃತಕ ಬುದ್ಧಿಮತ್ತೆ (ಎಐ) ಬಳಕೆಯಲ್ಲಿನ ಹೊಣೆಗಾರಿಕೆ ಕುರಿತ ಸವಾಲುಗಳು ಹೆಚ್ಚುತ್ತಿವೆ ಎಂದು ಡೇಟಾ ಮತ್ತು ಎಐ ವಿಶ್ವಾಸಾರ್ಹತಾ ಕ್ಷೇತ್ರದ ಪ್ರಮುಖ ಸಂಸ್ಥೆಯಾದ ವೀಮ್ ಸಾಫ್ಟ್‌ವೇರ್ ಎಚ್ಚರಿಕೆ ನೀಡಿದೆ.




ಬೆಂಗಳೂರಿನಲ್ಲಿ ನಡೆದ 'ವೀಮ್‌ಆನ್ ಟೂರ್ ಇಂಡಿಯಾ 2026' ಸಮಾವೇಶದಲ್ಲಿ ಉದ್ಯಮ ವಲಯದ ತಂತ್ರಜ್ಞಾನ ಮುಖ್ಯಸ್ಥರು, ಸರ್ಕಾರಿ ಸಂಸ್ಥೆಗಳ ಪ್ರತಿನಿಧಿಗಳು, ಪಾಲುದಾರರು ಹಾಗೂ ಗ್ರಾಹಕರು ಭಾಗವಹಿಸಿ, ಡೇಟಾ ನಿರ್ವಹಣೆ, ಭದ್ರತೆ ಮತ್ತು ಎಐ ಬಳಕೆಯಲ್ಲಿನ ವಿಶ್ವಾಸಾರ್ಹತೆ ಕುರಿತ ಪ್ರಮುಖ ವಿಷಯಗಳನ್ನು ಚರ್ಚಿಸಿದರು.

ಭಾರತೀಯ ಉದ್ಯಮಗಳು ಪ್ರಸ್ತುತ ಮೂರು ಪ್ರಮುಖ ಒತ್ತಡಗಳನ್ನು ಏಕಕಾಲದಲ್ಲಿ ಎದುರಿಸುತ್ತಿವೆ. ವೇಗವಾಗಿ ವಿಸ್ತರಿಸುತ್ತಿರುವ ಡಿಜಿಟಲ್ ಆರ್ಥಿಕತೆ, ಕಟ್ಟುನಿಟ್ಟಾಗುತ್ತಿರುವ ಡೇಟಾ ಸಂರಕ್ಷಣಾ ನಿಯಮಗಳು ಹಾಗೂ ಎಐ ತಂತ್ರಜ್ಞಾನದ ಮೇಲಿನ ಹೆಚ್ಚುತ್ತಿರುವ ಅವಲಂಬನೆ ಇವುಗಳಲ್ಲಿ ಪ್ರಮುಖವಾಗಿವೆ. ವಿಶೇಷವಾಗಿ ಎಐ ಬಳಕೆಯ ಪ್ರಮಾಣ ಹೆಚ್ಚುತ್ತಿರುವಾಗ, ಅದರ ಹೊಣೆಗಾರಿಕೆ ಮತ್ತು ನಿಯಂತ್ರಣದ ವಿಚಾರದಲ್ಲಿ ಇನ್ನೂ ಸಾಕಷ್ಟು ಅಂತರ ಉಳಿದಿದೆ ಎಂದು ತಜ್ಞರು ಅಭಿಪ್ರಾಯಪಟ್ಟರು.

# ಯೋಗ ರಾಜತಾಂತ್ರಿಕತೆ: ವಿಶ್ವದಾದ್ಯಂತ ಭಾರತದ ಸಾಂಸ್ಕೃತಿಕ "ಮೃದು ಶಕ್ತಿ"ಗೆ ಜಾಗತಿಕ ಮನ್ನಣೆ

ನವದೆಹಲಿ

ಯೋಗವು ಇಂದು ಕೇವಲ ಆರೋಗ್ಯ ಮತ್ತು ಫಿಟ್ನೆಸ್ ಅಭ್ಯಾಸವಾಗಿ ಉಳಿದಿಲ್ಲ. ಅದು ಭಾರತದ ಸಾಂಸ್ಕೃತಿಕ ಪರಂಪರೆ, ಶಾಂತಿ ಮತ್ತು ಸಾಮರಸ್ಯದ ಸಂದೇಶವನ್ನು ವಿಶ್ವದ ಮೂಲೆಮೂಲೆಗಳಿಗೆ ತಲುಪಿಸುವ ಪರಿಣಾಮಕಾರಿ ರಾಜತಾಂತ್ರಿಕ ಸಾಧನವಾಗಿ ರೂಪುಗೊಂಡಿದೆ.



2014ರಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಪ್ರಸ್ತಾವ ಮಂಡಿಸಿದಾಗ, ಅದಕ್ಕೆ ವಿಶ್ವದಾದ್ಯಂತ ಇಷ್ಟೊಂದು ಭಾರೀ ಬೆಂಬಲ ಸಿಗಲಿದೆ ಎಂದು ಬಹುತೇಕರು ನಿರೀಕ್ಷಿಸಿರಲಿಲ್ಲ. ಆದರೆ ಕೇವಲ 90 ದಿನಗಳ ಅವಧಿಯಲ್ಲಿ 177 ದೇಶಗಳ ಬೆಂಬಲದೊಂದಿಗೆ ಈ ಪ್ರಸ್ತಾವನೆ ಅಂಗೀಕಾರಗೊಂಡು, ಡಿಸೆಂಬರ್ 11, 2014ರಂದು ಜೂನ್ 21ನ್ನು ಅಂತಾರಾಷ್ಟ್ರೀಯ ಯೋಗ ದಿನ ಎಂದು ಘೋಷಿಸಲಾಯಿತು.

ಇದು ಕೇವಲ ರಾಜತಾಂತ್ರಿಕ ಯಶಸ್ಸಲ್ಲ, ಭಾರತದ ಸಾಂಸ್ಕೃತಿಕ "ಮೃದು ಶಕ್ತಿ"ಗೆ ದೊರೆತ ಜಾಗತಿಕ ಮಾನ್ಯತೆಯ ಸಂಕೇತವಾಗಿತ್ತು.

## ಕೆಂಗೇರಿ ಕೆಎಸ್‌ಆರ್‌ಟಿಸಿ ಕಾರ್ಯಾಗಾರದಲ್ಲಿ ಡಾ. ಬಿ.ಆರ್. ಅಂಬೇಡ್ಕರ್

# 135ನೇ ಜಯಂತಿ ಆಚರಣೆ

ಬೆಂಗಳೂರು: ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ (ಕೆಎಸ್‌ಆರ್‌ಟಿಸಿ) ಕೆಂಗೇರಿ ಪ್ರಾದೇಶಿಕ ಕಾರ್ಯಾಗಾರದಲ್ಲಿ ಭಾರತ ರತ್ನ, ಸಂವಿಧಾನ ಶಿಲ್ಪಿ ಹಾಗೂ ಮಹಾನ್ ಸಮಾಜ ಸುಧಾರಕ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿಯನ್ನು ಭಕ್ತಿಭಾವ ಮತ್ತು ಗೌರವದಿಂದ ಆಚರಿಸಲಾಯಿತು.



ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ಅಧಿಕಾರಿಗಳು ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ಆಶ್ರಯದಲ್ಲಿ ಆಯೋಜಿಸಲಾದ ಕಾರ್ಯಕ್ರಮವನ್ನು ಕೆಎಸ್‌ಆರ್‌ಟಿಸಿ ಕೇಂದ್ರ ಕಚೇರಿಯ ಮುಖ್ಯ ಯಾಂತ್ರಿಕ ಅಭಿಯಂತರ ಕೆ.ಹೆಚ್. ಶ್ರೀನಿವಾಸ್ ಉದ್ಘಾಟಿಸಿದರು. ಮುಖ್ಯ ಅತಿಥಿಯಾಗಿ ಮುಖ್ಯ ಕಾರ್ಮಿಕ ಕಲ್ಯಾಣಾಧಿಕಾರಿ ಹೆಚ್.ಡಿ. ಗೌರಾಂಬ ಭಾಗವಹಿಸಿ ಅಂಬೇಡ್ಕರ್ ಅವರ ಸಮಾನತೆ ಮತ್ತು ಸಾಮಾಜಿಕ ನ್ಯಾಯದ ವಿಚಾರಧಾರೆಗಳನ್ನು ಸ್ಮರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕೆಂಗೇರಿ ಪ್ರಾದೇಶಿಕ ಕಾರ್ಯಾಗಾರದ ಕಾರ್ಯ ವ್ಯವಸ್ಥಾಪಕ ಕೆ. ಚಂದು ವಹಿಸಿದ್ದರು. ಮುಖ್ಯ ಭಾಷಣಕಾರರಾಗಿ ಭಾಗವಹಿಸಿದ್ದ ಮೈಸೂರು ಗ್ರಾಮೀಣಾಭಿವೃದ್ಧಿ ಇಲಾಖೆಯ ಉಪ ಕಾರ್ಯದರ್ಶಿ ಡಾ. ಪ್ರೇಮ್‌ಕುಮಾರ್ ಅವರು, ಭಾರತೀಯ ಸಂವಿಧಾನ ರಚನೆಯಲ್ಲಿ ಡಾ. ಅಂಬೇಡ್ಕರ್ ಅವರ ಮಹತ್ವದ ಪಾತ್ರ, ಸಾಮಾಜಿಕ ನ್ಯಾಯಕ್ಕಾಗಿ ನಡೆಸಿದ ಹೋರಾಟ ಹಾಗೂ ಶಿಕ್ಷಣದ ಮಹತ್ವದ ಕುರಿತು ವಿವರವಾಗಿ ಉಪನ್ಯಾಸ ನೀಡಿದರು.

ಆರ್‌ಪಿಐ ಕರ್ನಾಟಕದ ಅಧ್ಯಕ್ಷ ಹಾಗೂ ಸಂಘದ ಗೌರವಾಧ್ಯಕ್ಷ ಡಾ. ಆರ್. ಮೋಹನರಾಜ್ ಮತ್ತು ರಾಜ್ಯ ಸಮಿತಿಯ ಕಾರ್ಯಾಧ್ಯಕ್ಷ ಎ. ಸೋಮಣ್ಣ ಸೇರಿದಂತೆ ಹಲವು ಗಣ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.



ವಿವಿಧ ಕಾರ್ಮಿಕ ಸಂಘಟನೆಗಳ ಮುಖಂಡರು, ಅಧಿಕಾರಿಗಳು, ಸಿಬ್ಬಂದಿ ಮತ್ತು ಕಾರ್ಮಿಕರು ಭಾಗವಹಿಸಿ ಅಂಬೇಡ್ಕರ್ ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಸಂಕಲ್ಪ ಮಾಡಿದರು.

ಕಾರ್ಯಕ್ರಮದಲ್ಲಿ ಡಾ. ಅಂಬೇಡ್ಕರ್ ಅವರ ಸಾಮಾಜಿಕ ಹೋರಾಟ, ಶೋಷಿತ ವರ್ಗಗಳ ಅಭಿವೃದ್ಧಿಗೆ ನೀಡಿದ ಕೊಡುಗೆ, ಶಿಕ್ಷಣದ ಮೂಲಕ ಸಬಲೀಕರಣ ಹಾಗೂ ಸಂವಿಧಾನದ ಮೌಲ್ಯಗಳ ಕುರಿತು ವಿಶೇಷ ಚರ್ಚೆ ನಡೆಯಿತು. ಸಮಾನತೆ, ಸ್ವಾಭಿಮಾನ ಮತ್ತು ಸಾಮಾಜಿಕ ನ್ಯಾಯದ ಸಂದೇಶವನ್ನು ಜನಮಾನಸದಲ್ಲಿ ಬಿತ್ತಿದ ಅಂಬೇಡ್ಕರ್ ಅವರ ಜೀವನಾದರ್ಶಗಳನ್ನು ಸ್ಮರಿಸುವ ಮೂಲಕ ಕಾರ್ಯಕ್ರಮ ಅರ್ಥಪೂರ್ಣವಾಗಿ ನೆರವೇರಿತು.

# ಬೆಂಗಳೂರಿನಲ್ಲಿ ಹೊಸ ಕಾರ್ಯನಿರ್ವಾಹಕ ಬ್ರೀಫಿಂಗ್ ಸೆಂಟರ್ ಉದ್ಘಾಟನೆ

ಬೆಂಗಳೂರು

ಎಂಟರ್‌ಪ್ರೈಸ್ ಕೃತಕ ಬುದ್ಧಿಮತ್ತೆ (ಎಐ) ಸಾಫ್ಟ್‌ವೇರ್ ಕ್ಷೇತ್ರದ ಪ್ರಮುಖ ಸಂಸ್ಥೆಯಾದ ಪೆಗಾಸಿಸ್ಟಮ್ಸ್ ಭಾರತದಲ್ಲಿ ತನ್ನ ಹೂಡಿಕೆಯನ್ನು ಮತ್ತಷ್ಟು ವಿಸ್ತರಿಸುವ ಭಾಗವಾಗಿ ಬೆಂಗಳೂರಿನ ಇಕೋವರ್ಲ್ಡ್ ಟೆಕ್ ಪಾರ್ಕ್‌ನಲ್ಲಿ ಹೊಸ ಕಚೇರಿ ಹಾಗೂ ಕಾರ್ಯನಿರ್ವಾಹಕ ಬ್ರೀಫಿಂಗ್ ಸೆಂಟರ್‌ನ್ನು ಉದ್ಘಾಟಿಸಿದೆ.

ರೂ. 60 ಕೋಟಿಗೂ ಅಧಿಕ ಹೂಡಿಕೆಯಲ್ಲಿ ನಿರ್ಮಾಣಗೊಂಡಿರುವ ಈ ಅತ್ಯಾಧುನಿಕ ಸೌಲಭ್ಯವು ಭಾರತದಲ್ಲಿ ಪೆಗಾಸಿಸ್ಟಮ್ಸ್‌ನ ಪ್ರಮುಖ ಮೂಲಸೌಕರ್ಯ ವಿಸ್ತರಣೆಗಳಲ್ಲಿ ಒಂದಾಗಿದ್ದು, ತಂತ್ರಜ್ಞಾನ ನಾವೀನ್ಯತೆ, ಎಂಜಿನಿಯರಿಂಗ್ ಶ್ರೇಷ್ಠತೆ ಮತ್ತು ಗ್ರಾಹಕ ಸಹಭಾಗಿತ್ವಕ್ಕೆ ಕೇಂದ್ರಬಿಂದುವಾಗಿ ಕಾರ್ಯನಿರ್ವಹಿಸಲಿದೆ.

ಉದ್ಘಾಟನಾ ಸಮಾರಂಭದಲ್ಲಿ ಕರ್ನಾಟಕ ಸರ್ಕಾರದ ಗೃಹ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಇ-ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ಭಾಗವಹಿಸಿದ್ದರು. ಪೆಗಾಸಿಸ್ಟಮ್ಸ್‌ನ ಜಾಗತಿಕ ಮತ್ತು ಭಾರತೀಯ ನಾಯಕತ್ವ ತಂಡವೂ ಕಾರ್ಯಕ್ರಮದಲ್ಲಿ ಉಪಸ್ಥಿತರಿತ್ತು.



ಹೊಸ ಕಚೇರಿಯ ಪ್ರಮುಖ ಆಕರ್ಷಣೆಯಾದ ಬೆಂಗಳೂರು ಕಾರ್ಯನಿರ್ವಾಹಕ ಬ್ರೀಫಿಂಗ್ ಸೆಂಟರ್ (ಇಬಿಸಿ) ಅನ್ನು ಗ್ರಾಹಕರು, ಪಾಲುದಾರರು ಹಾಗೂ ಉದ್ಯಮ ನಾಯಕರೊಂದಿಗೆ ಪರಿಣಾಮಕಾರಿ ಸಂವಾದ ಮತ್ತು ಸಹಯೋಗಕ್ಕೆ ಅನುಕೂಲವಾಗುವಂತೆ ವಿನ್ಯಾಸಗೊಳಿಸಲಾಗಿದೆ.

ಈ ಕೇಂದ್ರದಲ್ಲಿ ಕಾರ್ಯನಿರ್ವಾಹಕ ಮಟ್ಟದ ಸಭೆಗಳು, ತಂತ್ರಜ್ಞಾನ ಪ್ರದರ್ಶನಗಳು, ಉತ್ಪನ್ನ ಪರಿಚಯ ಕಾರ್ಯಕ್ರಮಗಳು, ಪಾಲುದಾರರ ಸಹಯೋಗ ಸಭೆಗಳು, ಮಾರ್ಗದರ್ಶನ ಹಾಗೂ ಸಲಹಾ ಅಧಿವೇಶನಗಳು ಸೇರಿದಂತೆ ಹಲವು ಚಟುವಟಿಕೆಗಳು ನಡೆಯಲಿವೆ.

# ನ್ಯಾಕ್ ಪ್ಯಾಕೇಜಿಂಗ್ ಲಿಮಿಟೆಡ್ ಐಪಿಒ ಜುಲೈ 1ರಿಂದ ಆರಂಭ

ಮುಂಬೈ

ಪ್ಯಾಕೇಜಿಂಗ್ ಕ್ಷೇತ್ರದ ಪ್ರಮುಖ ಸಂಸ್ಥೆಯಾದ ನ್ಯಾಕ್ ಪ್ಯಾಕೇಜಿಂಗ್ ಲಿಮಿಟೆಡ್ ತನ್ನ ಆರಂಭಿಕ ಸಾರ್ವಜನಿಕ ಕೊಡುಗೆ (ಐಪಿಒ)ಯನ್ನು ಜುಲೈ 1ರಿಂದ ಸಾರ್ವಜನಿಕರಿಗೆ ತೆರೆಯಲಿದೆ. ಜುಲೈ 3ರವರೆಗೆ ಹೂಡಿಕೆದಾರರು ಅರ್ಜಿ ಸಲ್ಲಿಸಬಹುದಾಗಿದೆ.

ಕಂಪನಿಯು ಪ್ರತಿ ಈಕ್ವಿಟಿ ಷೇರಿಗೆ ರೂ.161 ರಿಂದ ರೂ.170ರ ಬೆಲೆಪಟ್ಟಿಯನ್ನು ನಿಗದಿಪಡಿಸಿದೆ. ಸಾಂಸ್ಥಿಕ ಹೂಡಿಕೆದಾರರಿಗಾಗಿ ವಿಶೇಷ ಬಿಡ್ಡಿಂಗ್ ದಿನವನ್ನು ಜೂನ್ 30ಕ್ಕೆ ನಿಗದಿಪಡಿಸಲಾಗಿದೆ.

ಹೂಡಿಕೆದಾರರು ಕನಿಷ್ಠ 88 ಈಕ್ವಿಟಿ ಷೇರುಗಳಿಗೆ ಹಾಗೂ ನಂತರ 88 ಷೇರುಗಳ ಗುಣಕಗಳಲ್ಲಿ ಅರ್ಜಿ ಸಲ್ಲಿಸಬಹುದು. ಉದ್ಯೋಗಿಗಳ ಮೀಸಲು ವಿಭಾಗದಲ್ಲಿ ಅರ್ಹ ಉದ್ಯೋಗಿಗಳಿಗೆ ಪ್ರತಿ ಷೇರಿಗೆ ರೂ.16 ರಿಯಾಯಿತಿ ನೀಡಲಾಗುತ್ತದೆ. ಈ ಐಪಿಒದಲ್ಲಿ ರೂ.380 ಕೋಟಿ ಮೌಲ್ಯದ ಹೊಸ ಈಕ್ವಿಟಿ ಷೇರುಗಳ ಬಿಡುಗಡೆ ಜೊತೆಗೆ 35 ಲಕ್ಷದವರೆಗೆ ಈಕ್ವಿಟಿ ಷೇರುಗಳ ಮಾರಾಟದ ಕೊಡುಗೆ (ಒಎಫ್‌ಎಸ್) ಒಳಗೊಂಡಿದೆ.

# ಯುವ ಜನರಲ್ಲಿ ಹೆಚ್ಚುತ್ತಿರುವ ಕಣ್ಣಿನ ಪೊರೆ ಪ್ರಕರಣಗಳು: ನೇತ್ರ ತಜ್ಞರ ಎಚ್ಚರಿಕೆ

ಬೆಂಗಳೂರು

ಸಾಮಾನ್ಯವಾಗಿ ವೃದ್ಧಾಪ್ಯದಲ್ಲಿ ಕಾಣಿಸಿಕೊಳ್ಳುವ ಕಣ್ಣಿನ ಪೊರೆ (ಕ್ಯಾಟರಾಕ್ಟ್) ಸಮಸ್ಯೆ ಇದೀಗ ಯುವಜನರಲ್ಲೂ ಹೆಚ್ಚುತ್ತಿರುವುದು ಆತಂಕಕ್ಕೆ ಕಾರಣವಾಗಿದೆ. ವಿಶೇಷವಾಗಿ 40 ರಿಂದ 50 ವರ್ಷದೊಳಗಿನವರಲ್ಲಿ ಈ ಕಾಯಿಲೆ ಪತ್ತೆಯಾಗುತ್ತಿರುವ ಪ್ರಕರಣಗಳು ಗಣನೀಯವಾಗಿ ಹೆಚ್ಚುತ್ತಿರುವುದಾಗಿ ನೇತ್ರ ತಜ್ಞರು ತಿಳಿಸಿದ್ದಾರೆ.

ಈ ಕುರಿತು ಮಾತನಾಡಿದ ನೇತ್ರಧಾಮ ಸೂಪರ್ ಸ್ಪೆಷಾಲಿಟಿ ಕಣ್ಣಿನ ಆಸ್ಪತ್ರೆಯ ಕಾರ್ಯನಿರ್ವಾಹಕ ನಿರ್ದೇಶಕಿ ಡಾ. ಸುಪ್ರಿಯಾ ಶ್ರೀಗಣೇಶ್, ಕಳೆದ ಎರಡು–ಮೂರು ವರ್ಷಗಳಿಂದ ಮಧ್ಯವಯಸ್ಕರಲ್ಲಿ ಕಣ್ಣಿನ ಪೊರೆ ಸಮಸ್ಯೆ ಹೆಚ್ಚುತ್ತಿರುವುದನ್ನು ಗಮನಿಸಿದ್ದೇವೆ ಎಂದು ಹೇಳಿದ್ದಾರೆ.

ಅವರ ಪ್ರಕಾರ, ಮಧುಮೇಹ, ಅಧಿಕ ರಕ್ತದೊತ್ತಡ, ಕೋವಿಡ್ ನಂತರದ ಚಿಕಿತ್ಸೆಯಲ್ಲಿ ದೀರ್ಘಕಾಲ ಸ್ಟೀರಾಯ್ಡ್‌ಗಳ ಬಳಕೆ ಸೇರಿದಂತೆ ಹಲವು ಆರೋಗ್ಯ ಸಮಸ್ಯೆಗಳು ಕಣ್ಣಿನ ನೈಸರ್ಗಿಕ ಮಸೂರದಲ್ಲಿ ಬದಲಾವಣೆಗಳನ್ನು ವೇಗಗೊಳಿಸುತ್ತಿವೆ. ಇದರಿಂದ ಸಾಂಪ್ರದಾಯಿಕವಾಗಿ 60 ವರ್ಷಗಳ ನಂತರ ಕಾಣಿಸಿಕೊಳ್ಳುತ್ತಿದ್ದ ಕಣ್ಣಿನ ಪೊರೆ ಇದೀಗ ಕಡಿಮೆ ವಯಸ್ಸಿನವರಲ್ಲಿಯೇ ಕಾಣಿಸಿಕೊಳ್ಳುತ್ತಿದೆ.




ಇದರ ಜೊತೆಗೆ ಬದಲಾಗುತ್ತಿರುವ ಜೀವನಶೈಲಿಯೂ ಪ್ರಮುಖ ಕಾರಣವಾಗಿರಬಹುದು ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ. ದೈಹಿಕ ಚಟುವಟಿಕೆಗಳ ಕೊರತೆ, ಪೌಷ್ಟಿಕಾಂಶಯುಕ್ತ ಆಹಾರದ ಅಭಾವ, ಅತಿಯಾದ ಮಾನಸಿಕ ಒತ್ತಡ, ಸಂಸ್ಕರಿತ ಆಹಾರಗಳ ಸೇವನೆ ಹಾಗೂ ಪರಿಸರ ಮಾಲಿನ್ಯಕ್ಕೆ ನಿರಂತರ ಒಡ್ಡಿಕೊಳ್ಳುವುದು ಕಣ್ಣಿನ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ ಎಂದು ಅಧ್ಯಯನಗಳು ಸೂಚಿಸುತ್ತಿವೆ.

# 'ಅಗತ್ಯ ವಸ್ತುಗಳ ಖರೀದಿ, ಹಸಿವು ನೀಗುವ ಶಕ್ತಿ'

ಬೆಂಗಳೂರು

ಯುವಕರ ಕಣ್ಣಿನಲ್ಲಿ ಭಾರತದ ಭವಿಷ್ಯ ಅಡಗಿದೆ. ದೇಶದ ಸಾಮಾನ್ಯ ಜನರಿಗೂ ಅಗತ್ಯ ವಸ್ತುಗಳನ್ನು ಕೊಳ್ಳುವ ಹಾಗೂ ಹಸಿವನ್ನು ನೀಗಿಸಿಕೊಳ್ಳುವ ಶಕ್ತಿ ಬಂದಾಗ ಮಾತ್ರ ನಿಜವಾದ ಅಭಿವೃದ್ಧಿ ಸಾಧ್ಯ. ಇವೆಲ್ಲವೂ ಸಾಕಾರಗೊಳ್ಳಲು ಕೇಂದ್ರ ಸರ್ಕಾರದ ಪಿಎಂ ಉಷಾ ಯೋಜನೆ ಅತ್ಯಂತ ಸಹಕಾರಿಯಾಗಲಿದೆ ಎಂದು ತುಮಕೂರು ವಿವಿ ಪರೀಕ್ಷಾಂಗ ಕುಲಸಚಿವ ಪ್ರೊ. ಹೆಚ್. ಎಸ್. ಮೋಹನ ಹೇಳಿದರು.

ತುಮಕೂರು ವಿಶ್ವವಿದ್ಯಾನಿಲಯದ ವ್ಯಾವಹಾರ ಆಡಳಿತ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ವತಿಯಿಂದ, ಪಿಎಂ ಉಷಾ ಯೋಜನೆಯಡಿ ವಿಶ್ವವಿದ್ಯಾನಿಲಯದ ಜ್ಞಾನಸಿರಿ ಆವರಣದಲ್ಲಿ ಜೂ. 24 ಬುಧವಾರ ದಂದು ಹಮ್ಮಿಕೊಳ್ಳಲಾಗಿದ್ದ "ಸುಸ್ಥಿರ ಅಭಿವೃದ್ಧಿ ಗುರಿಗಳು" ಎಂಬ ವಿಷಯದ ಕುರಿತ ಒಂದು ದಿನದ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಮಾತನಾಡಿದರು.

ವಿದ್ಯಾರ್ಥಿಗಳು ಕೌಶಲ್ಯಗಳನ್ನು ರೂಢಿಸಿಕೊಂಡಾಗ ಮಾತ್ರ ಸಾಧನೆಯ



ಹಾದಿಯಲ್ಲಿ ಸಾಗಲು ಸಾಧ್ಯ. ನಿರಂತರ ಪ್ರಯತ್ನ, ಕಠಿಣ ಶ್ರಮ ಹಾಗೂ ಕಲಿಕೆಯ ಜೊತೆಗೆ ಜೀವನದ ನೋವು-ನಲಿವುಗಳ ಅನುಭವಗಳ ಬಗ್ಗೆ ಅರಿವು ಮೂಡಿಸಿಕೊಂಡಾಗ ಮಾತ್ರ ಯಶಸ್ಸು ಲಭಿಸುತ್ತದೆ. ಸರಿಯಾದ ಬುನಾದಿ ಮತ್ತು ಗುರಿ ಇಲ್ಲದಿದ್ದರೆ ವಿಫಲವಾಗುವುದು ಖಂಡಿತ. ಆದ್ದರಿಂದ ವಿದ್ಯಾರ್ಥಿಗಳು ತಮಗೆ ಸಿಗುವ ಅವಕಾಶಗಳನ್ನು ವಿದ್ಯಾರ್ಥಿ ಜೀವನದಲ್ಲೇ ಸದುಪಯೋಗಪಡಿಸಿಕೊಳ್ಳಬೇಕು, ಅವಕಾಶ ವಂಚಿತರಾಗಿ ನಂತರ ಮರುಗಬಾರದು ಎಂದರು.

ತುಮಕೂರು ವಿಶ್ವವಿದ್ಯಾನಿಲಯದ ಹಿರಿಯ ಪ್ರಾಧ್ಯಾಪಕರು ಹಾಗೂ ಸಂಶೋಧನಾ ನಿರ್ದೇಶಕರಾದ ಪ್ರೊ. ವಿಲಾಸ್ ಕದ್ರೋಳ್ಕರ್ ಅವರು ಮಾತನಾಡಿ ಇತ್ತೀಚಿನ ಜಾಗತಿಕ ಯುದ್ಧದ ಪರಿಸ್ಥಿತಿಯ ನಡುವೆ ನಾವೆಲ್ಲರೂ ಸುಸ್ಥಿರ ಅಭಿವೃದ್ಧಿಯ ಬಗ್ಗೆ ಮಾತನಾಡುತ್ತಿದ್ದೇವೆ. ಜ್ಞಾನ, ನಾವೀನ್ಯತೆ ಮತ್ತು ಜವಾಬ್ದಾರಿಯುತ ನಿರ್ವಹಣೆಯ ಮೂಲಕ ಭಾರತದ ಭವಿಷ್ಯದ ನಾಯಕರನ್ನು ಸಬಲೀಕರಣಗೊಳಿಸುವುದು ಇಂದಿನ ತುರ್ತು ಅಗತ್ಯವಾಗಿದೆ ಎಂದು ಅಭಿಪ್ರಾಯಪಟ್ಟರು.

ಭವಿಷ್ಯದಲ್ಲಿ ನಾವು ಹೇಗೆ ಬಾಳಬೇಕು ಎಂಬುದನ್ನು ಅರಿತುಕೊಳ್ಳುವ ಮಹತ್ವದ ಸ್ಥಿತಿಯಲ್ಲಿ ನಾವಿಂದು ನಿಂತಿದ್ದೇವೆ. ಪ್ರಕೃತಿ ಮತ್ತು ಪರಿಸರದ ಬಗ್ಗೆ ಕಾಳಜಿ ವಹಿಸುವುದು ಹಾಗೂ ಮಹಿಳೆಯರಿಗೆ ಗೌರವ ನೀಡುವ ಕೆಲಸ ನಮ್ಮಿಂದ ಮೊದಲಾಗಬೇಕು ಎಂದರು.

ಭಾರತವು ಸುಸ್ಥಿರ ಅಭಿವೃದ್ಧಿಗಾಗಿ ಈಗಾಗಲೇ ಹಲವು ಪ್ರಮುಖ ಅಂಶಗಳನ್ನು ಅಳವಡಿಸಿಕೊಂಡಿದೆ. ಸೌರ ಮತ್ತು ಪವನ ವಿದ್ಯುತ್ ಉತ್ಪಾದನೆಗೆ ಹೆಚ್ಚಿನ ಒತ್ತು ನೀಡಲಾಗಿದ್ದು, ಅಂತರರಾಷ್ಟ್ರೀಯ ಸೌರ ಒಕ್ಕೂಟದ ಮೂಲಕ ಭಾರತ ಜಾಗತಿಕ ಮಟ್ಟದಲ್ಲಿ ನಾಯಕತ್ವ ಸಾಧಿಸಿದೆ. ದೇಶದ ಪ್ರತಿ ಪ್ರಜೆಗೂ ನೈರ್ಮಲ್ಯ ಮತ್ತು ಸುರಕ್ಷಿತ ಕುಡಿಯುವ ನೀರನ್ನು ತಲುಪಿಸುವ ನಿಟ್ಟಿನಲ್ಲಿ ಉತ್ತಮ ಮೂಲಸೌಕರ್ಯಗಳನ್ನು ಅಭಿವೃದ್ಧಿಪಡಿಸಲಾಗಿದೆ. ರಾಸಾಯನಿಕ ಮುಕ್ತ ನೈಸರ್ಗಿಕ ಕೃಷಿ ಹಾಗೂ ಸಾವಯವ ಕೃಷಿಯನ್ನು ಪ್ರೋತ್ಸಾಹಿಸಲಾಗುತ್ತಿದ್ದು, ನಗರ ಪ್ರದೇಶಗಳಲ್ಲಿ ಮಾಲಿನ್ಯ ನಿಯಂತ್ರಿಸಲು ಎಲೆಕ್ಟ್ರಿಕ್ ವಾಹನಗಳ ಬಳಕೆಗೆ ಉತ್ತೇಜನ ನೀಡಲಾಗುತ್ತಿದೆ.

ಆ ಮೂಲಕ ಇಂಗಾಲದ ಹೊರಸೂಸುವಿಕೆಯನ್ನು ತಗ್ಗಿಸುವ ಪ್ರಮುಖ ಗುರಿಗಳನ್ನು ದೇಶ ಹೊಂದಿದೆ ಎಂದರು.

ಭಾರತವು ಇಂದಿಗೂ ಸುಸ್ಥಿರ ಅಭಿವೃದ್ಧಿಯಲ್ಲಿ ಹಲವು ಹಿನ್ನಡೆಗಳನ್ನು ಎದುರಿಸುತ್ತಿದೆ. ಕೆಲವು ಹಿಂದುಳಿದ ಜಿಲ್ಲೆಗಳು ಶಿಕ್ಷಣ ಮತ್ತು ಆರೋಗ್ಯ ಸೂಚ್ಯಂಕಗಳಲ್ಲಿ ಹಿಂದೆ ಉಳಿದಿವೆ. ಹೆಚ್ಚುತ್ತಿರುವ ನಗರೀಕರಣ ಮತ್ತು ಕೈಗಾರೀಕರಣದಿಂದಾಗಿ ಅಂತರ್ಜಲದ ಕೊರತೆ ಹಾಗೂ ವಾಯು ಮಾಲಿನ್ಯ ಗಂಭೀರ ಸಮಸ್ಯೆಯಾಗಿದೆ. ಇದರೊಂದಿಗೆ ಬಾಲಕಿಯರ ಬಾಲ್ಯವಿವಾಹ, ಹದಿಹರೆಯದ ಗರ್ಭಧಾರಣೆ ಹಾಗೂ ಉದ್ಯೋಗ ಕ್ಷೇತ್ರದಲ್ಲಿ ಮಹಿಳಾ ಸಮಾನತೆಯ ಕೊರತೆ ದೊಡ್ಡ ಸವಾಲುಗಳಾಗಿವೆ ಎಂದು ಹೇಳಿದರು.

## ರಾಮಪ್ಪ ಬಿ. ಗುತ್ತೇರರಿಗೆ

# ಡಿಜಿ-ಐಜಿಪಿ ಪ್ರಶಂಸನಾ ಪದಕ

ಬೆಂಗಳೂರು

ಪೊಲೀಸ್ ಸೇವೆ ಎಂದರೆ ಕೇವಲ ಕಾನೂನು ಸುವ್ಯವಸ್ಥೆ ಕಾಪಾಡುವುದಲ್ಲ, ಸಮಾಜದಲ್ಲಿ ನ್ಯಾಯ, ಭದ್ರತೆ ಹಾಗೂ ವಿಶ್ವಾಸವನ್ನು ನಿರ್ಮಿಸುವ ಮಹತ್ವದ ಜವಾಬ್ದಾರಿಯೂ ಆಗಿದೆ ಎಂಬುದನ್ನು ಸಾಬೀತುಪಡಿಸಿದ ಮಾಲೂರು ಪೊಲೀಸ್ ಇನ್ಸ್‌ಪೆಕ್ಟರ್ ರಾಮಪ್ಪ ಬಿ. ಗುತ್ತೇರ ಅವರಿಗೆ 2025–26ನೇ ಸಾಲಿನ ಪ್ರತಿಷ್ಠಿತ ಡಿಜಿ–ಐಜಿಪಿ ಪ್ರಶಂಸನಾ ಪದಕ ದೊರೆತಿದೆ. ಈ ಗೌರವದಿಂದ ಮಾಲೂರು ತಾಲ್ಲೂಕಿನಲ್ಲಿ ಸಂತೋಷದ ವಾತಾವರಣ ನಿರ್ಮಾಣವಾಗಿದೆ.



2003ರಲ್ಲಿ ಪೊಲೀಸ್ ಇಲಾಖೆಗೆ ಸೇರ್ಪಡೆಯಾದ ರಾಮಪ್ಪ ಗುತ್ತೇರ ಅವರು ತಲಘಟ್ಟಪುರ ಠಾಣೆಯಿಂದ ತಮ್ಮ ಸೇವೆ ಆರಂಭಿಸಿ ಶಿಡ್ಲಘಟ್ಟ, ನಂದಗುಡಿ, ತಿರುಮಲಶೆಟ್ಟಿಹಳ್ಳಿ ಸೇರಿದಂತೆ ವಿವಿಧ ಠಾಣೆಗಳಲ್ಲಿ ಕರ್ತವ್ಯ ನಿರ್ವಹಿಸಿದ್ದಾರೆ. ನಂತರ ಇನ್ಸ್‌ಪೆಕ್ಟರ್ ಹುದ್ದೆಗೆ ಪದೋನ್ನತಿ ಪಡೆದು ತಲಘಟ್ಟಪುರ, ಕೆಂಗೇರಿ, ತಾವರೆಕೆರೆ ಹಾಗೂ ಕಗ್ಗಲಿಪುರ ಠಾಣೆಗಳಲ್ಲಿ ದಕ್ಷತೆಯಿಂದ ಸೇವೆ ಸಲ್ಲಿಸಿದ್ದಾರೆ.

ಮಹಿಳೆಯರು ಮತ್ತು ಮಕ್ಕಳಿಗೆ ಸಂಬಂಧಿಸಿದ ಸಂಕೀರ್ಣ ಅಪರಾಧ ಪ್ರಕರಣಗಳ ತನಿಖೆಯಲ್ಲಿ ಅವರು ನೀಡಿದ ಗಮನಾರ್ಹ ಸೇವೆಯನ್ನು ಇಲಾಖೆಯ ಹಿರಿಯ ಅಧಿಕಾರಿಗಳು ಗುರುತಿಸಿದ್ದಾರೆ. ಅಪರಾಧಿಗಳನ್ನು ಪತ್ತೆಹಚ್ಚಿ ಕಾನೂನು ಕ್ರಮಕ್ಕೆ ಒಳಪಡಿಸುವಲ್ಲಿ ಅವರ ಪಾತ್ರ ಮಹತ್ವದ್ದಾಗಿದೆ ಎಂದು ತಿಳಿದುಬಂದಿದೆ.

ಈ ಹಿಂದೆ ಅವರು 2017ರಲ್ಲಿ ಮುಖ್ಯಮಂತ್ರಿ ಪದಕ, 2023ರಲ್ಲಿ ಕೇಂದ್ರ ಗೃಹ ಸಚಿವರ ಪ್ರಶಂಸಾ ಪದಕ ಹಾಗೂ ರಾಷ್ಟ್ರಪತಿ ಪದಕಕ್ಕೂ ಭಾಜನರಾಗಿದ್ದು, ಇದೀಗ ಡಿಜಿ–ಐಜಿಪಿ ಪ್ರಶಂಸನಾ ಪದಕವು ಅವರ ಸೇವಾ ದಾಖಲೆಗಳಿಗೆ ಮತ್ತೊಂದು ಮಹತ್ವದ ಸೇರ್ಪಡೆಯಾಗಿದೆ.

ಸಾರ್ವಜನಿಕರ ಅಹವಾಲುಗಳಿಗೆ ತ್ವರಿತ ಸ್ಪಂದನೆ, ಅಪರಾಧ ತಡೆ ಕ್ರಮಗಳು ಹಾಗೂ ಜನಸ್ನೇಹಿ ಪೊಲೀಸ್ ವ್ಯವಸ್ಥೆ ಬಲಪಡಿಸುವಲ್ಲಿ ವಿಶೇಷ ಗಮನ ಹರಿಸಿದ್ದಾರೆ. ಇದರಿಂದ ಠಾಣೆಯ ಬಗ್ಗೆ ಸಾರ್ವಜನಿಕರಲ್ಲಿ ವಿಶ್ವಾಸ ಹೆಚ್ಚಾಗಿದೆ ಎಂದು ಸ್ಥಳೀಯರು ತಿಳಿಸಿದ್ದಾರೆ.

ಅವರ ಶಿಸ್ತುಬದ್ಧ ಕಾರ್ಯವೈಖರಿ, ನಿಷ್ಪಕ್ಷಪಾತ ನಿಲುವು ಮತ್ತು ಕರ್ತವ್ಯನಿಷ್ಠೆ ಪೊಲೀಸ್ ಇಲಾಖೆಯ ಯುವ ಅಧಿಕಾರಿಗಳಿಗೆ ಪ್ರೇರಣೆಯಾಗಿದ್ದು, ಈ ಗೌರವವನ್ನು ಇಲಾಖೆಯೂ

# ಪಾಕ್‌ಗೆ ತಿರುಗೇಟು

ಬೆಂಗಳೂರು

ಕಾಶ್ಮೀರದ ಅಭಿವೃದ್ಧಿ, ಜನರ ಕಲ್ಯಾಣ ಮತ್ತು ಪ್ರಜಾಪ್ರಭುತ್ವದ ಬಲವರ್ಧನೆಗೆ ಭಾರತ ಸರ್ಕಾರ ಹಲವು ಕ್ರಮಗಳನ್ನು ಕೈಗೊಂಡಿದೆ.

ಕೇಂದ್ರಾಡಳಿತ ಪ್ರದೇಶವಾಗಿ ಮರುಸಂಘಟನೆಯಾದ ಬಳಿಕ ಜಮ್ಮು–ಕಾಶ್ಮೀರದಲ್ಲಿ ಮೂಲಸೌಕರ್ಯ ಅಭಿವೃದ್ಧಿ, ಹೂಡಿಕೆ, ಶಿಕ್ಷಣ, ಆರೋಗ್ಯ ಮತ್ತು ಪ್ರವಾಸೋದ್ಯಮ ಕ್ಷೇತ್ರಗಳಲ್ಲಿ ಗಮನಾರ್ಹ ಪ್ರಗತಿ ಸಾಧಿಸಲಾಗಿದೆ ಎಂದು ಭಾರತ ವಿಶ್ವಸಂಸ್ಥೆಯ ಗಮನಕ್ಕೆ ತಂದಿದೆ.

ಭಾರತವು ಹಲವು ಬಾರಿ ಕಾಶ್ಮೀರ ಕುರಿತ ತನ್ನ ನಿಲುವನ್ನು ಜಾಗತಿಕ ವೇದಿಕೆಗಳಲ್ಲಿ ಪುನರುಚ್ಚರಿಸಿದೆ. ಜಮ್ಮು–ಕಾಶ್ಮೀರ ಮತ್ತು ಲಡಾಖ್ ಭಾರತದ ಅವಿಭಾಜ್ಯ ಭಾಗಗಳಾಗಿದ್ದು, ಈ ವಿಷಯದಲ್ಲಿ ಯಾವುದೇ ಸಂಶಯಕ್ಕೆ ಅವಕಾಶವಿಲ್ಲ ಎಂದು ಭಾರತ ಸ್ಪಷ್ಟಪಡಿಸಿದೆ.

ಪಾಕಿಸ್ತಾನ ಎಷ್ಟೇ ಬಾರಿ ಈ ವಿಚಾರವನ್ನು ಅಂತರರಾಷ್ಟ್ರೀಯ ವೇದಿಕೆಗಳಲ್ಲಿ ಎತ್ತಿದರೂ ಭಾರತದ ಸಾರ್ವಭೌಮತ್ವ ಮತ್ತು ಭೌಗೋಳಿಕ ಸಮಗ್ರತೆಯ ಕುರಿತು ಯಾವುದೇ ಬದಲಾವಣೆ ಆಗುವುದಿಲ್ಲ ಎಂದು ಭಾರತ ತಿಳಿಸಿದೆ.

ವಿಶ್ವಸಂಸ್ಥೆಯ ವೇದಿಕೆಯಲ್ಲಿ ಭಾರತದ ಈ ಸ್ಪಷ್ಟ ಮತ್ತು ದೃಢ ನಿಲುವು ಮತ್ತೊಮ್ಮೆ ಗಮನ ಸೆಳೆದಿದ್ದು, ಕಾಶ್ಮೀರ ವಿಷಯದಲ್ಲಿ ದೇಶದ ನಿಲುವು ಅಚಲವಾಗಿದೆ ಎಂಬ ಸಂದೇಶವನ್ನು ಜಗತ್ತಿಗೆ ರವಾನಿಸಿದೆ.

# ರಸ್ತೆ ಅಗಲೀಕರಣ ಮತ್ತು ಅಂಡರ್‌ಪಾಸ್ ಯೋಜನೆಗಳಿಗೆ ಅಗತ್ಯ ಭೂ ಹಸ್ತಾಂತರ ಪ್ರಕ್ರಿಯೆ ಶೀಘ್ರ ಪೂರ್ಣಗೊಳಿಸಿ

ಬೆಂಗಳೂರು

ಬೆಂಗಳೂರು ಪೂರ್ವ ನಗರ ಪಾಲಿಕೆ ವ್ಯಾಪ್ತಿಯ ಪ್ರಮುಖ ರಸ್ತೆ ಅಭಿವೃದ್ಧಿ, ರಸ್ತೆ ಅಗಲೀಕರಣ ಹಾಗೂ ಅಂಡರ್‌ಪಾಸ್ ಯೋಜನೆಗಳನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಿ ನಗರದಲ್ಲಿ ಹೆಚ್ಚುತ್ತಿರುವ ಸಂಚಾರ ದಟ್ಟಣೆಯನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವ ನಿಟ್ಟಿನಲ್ಲಿ, ರಸ್ತೆ ಅಗಲೀಕರಣಕ್ಕಾಗಿ ಕಾಯ್ದಿರಿಸಲಾಗಿರುವ ಜಾಗಗಳನ್ನು ಉಚಿತವಾಗಿ ಪರಿತ್ಯಾಜನಾ ಪತ್ರ ಮೂಲಕ ಹಸ್ತಾಂತರಗೊಳ್ಳಬೇಕಿರುವ ಪ್ರದೇಶಗಳು ಹಾಗೂ ಪಾರ್ಕ್ ಮತ್ತು ಮುಕ್ತ ಸ್ಥಳಗಳಿಗಾಗಿ ಮೀಸಲಾದ ಸಿ.ಎ ಸ್ವತ್ತುಗಳನ್ನು ತ್ವರಿತವಾಗಿ ನಗರ ಪಾಲಿಕೆಗೆ ಹಸ್ತಾಂತರಿಸುವ ಕುರಿತು ಕೆಐಎಡಿಬಿ ಇಲಾಖೆಯ ಹಿರಿಯ ಅಧಿಕಾರಿಗಳು ಹಾಗೂ ನಗರ ಪಾಲಿಕೆ ಅಧಿಕಾರಿಗಳೊಂದಿಗೆ ಆಯುಕ್ತರಾದ ಡಿ.ಎಸ್. ರಮೇಶ್ ಅವರು ಸಮನ್ವಯ ಸಭೆ ನಡೆಸಿದರು.

ರಸ್ತೆ ಅಗಲೀಕರಣಕ್ಕೆ ಗುರುತಿಸಲಾದ ಪ್ರಮುಖ ರಸ್ತೆಗಳು ಸಭೆಯಲ್ಲಿ ಕೆ.ಐ.ಎ.ಡಿ.ಬಿ ವತಿಯಿಂದ ಅಭಿವೃದ್ಧಿಪಡಿಸಲಾಗಿರುವ ಕೈಗಾರಿಕಾ ಪ್ರದೇಶಗಳಲ್ಲಿನ ಪ್ರಮುಖ ರಸ್ತೆಗಳಿಗೆ ಸಂಬಂಧಿಸಿದಂತೆ ರಸ್ತೆ ಅಗಲೀಕರಣ ಮತ್ತು ಭೂ ಹಸ್ತಾಂತರ ಪ್ರಕ್ರಿಯೆಗಳ ಕುರಿತು ವಿವರವಾಗಿ ಚರ್ಚಿಸಲಾಯಿತು. ಕೆ.ಐ.ಎ.ಡಿ.ಬಿ ವತಿಯಿಂದ ಅಭಿವೃದ್ಧಿಪಡಿಸಲಾಗಿರುವ ಕೈಗಾರಿಕಾ ಪ್ರದೇಶಗಳಲ್ಲಿನ ಪ್ರಮುಖ ರಸ್ತೆಗಳಿಗೆ ಸಂಬಂಧಿಸಿದಂತೆ ರಸ್ತೆ ಅಗಲೀಕರಣಕ್ಕಾಗಿ ಗುರುತಿಸಲಾದ ಸ್ವತ್ತುಗಳ ಭೂ ಹಸ್ತಾಂತರಕ್ಕೆ ಸಂಬಂಧಿಸಿದಂತೆ ಅಪರ ಆಯುಕ್ತರಾದ ಲೋಖಂಡೆ ಸ್ನೇಹಲ್ ಸುಧಾಕರ್ ರವರು ಕೆಐಎಡಿಬಿ ಹಿರಿಯ ಅಧಿಕಾರಿಗಳ ತಂಡದೊಂದಿಗೆ ಸ್ಥಳ ಪರಿಶೀಲನೆ ನಡೆಸಿದರು.

ಬಿಗ್ ಬಜಾರ್ ಜಂಕ್ಷನ್ನಲ್ಲಿ ನಿರ್ಮಾಣ ಹಂತದಲ್ಲಿರುವ ಏಕಮುಖ ಅಂಡರ್‌ಪಾಸ್ ಕಾಮಗಾರಿಯನ್ನು ಪರಿಶೀಲಿಸಿದ ಅಪರ ಆಯುಕ್ತರು ಕೆಐಎಡಿಬಿ ವತಿಯಿಂದ ಹಸ್ತಾಂತರಿಸಬೇಕಾದ ಸ್ವತ್ತುಗಳ ಮಾಹಿತಿಯನ್ನು ಪಡೆದುಕೊಂಡರು. ಕಾಮಗಾರಿಯನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಲು ಅಗತ್ಯವಿರುವ ಎಲ್ಲಾ ಸ್ವತ್ತುಗಳ ತ್ವರಿತವಾಗಿ ನಗರ ಪಾಲಿಕೆ ಹಸ್ತಾಂತರಿಸುವಂತೆ ಅಧಿಕಾರಿಗಳಿಗೆ ತಿಳಿಸಿದರು.

# ಜಯನಗರದ ಗುರುಪ್ಪನಪಾಳ್ಯ ವಾರ್ಡ್‌ನ ಸಮಸ್ಯೆಗಳ ಕುರಿತು ಸಮಗ್ರ ಪರಿಶೀಲನೆ

ಬೆಂಗಳೂರು

ದಕ್ಷಿಣ ನಗರ ಪಾಲಿಕೆಯ ಆಯುಕ್ತ ಕೆ.ಎನ್. ರಮೇಶ್ ರವರು ಜಯನಗರ ವ್ಯಾಪ್ತಿಯ ಅರಸು ಕಾಲೋನಿ ಹಾಗೂ ಗುರುಪ್ಪನಪಾಳ್ಯ ವಾರ್ಡ್ ಗೆ ಇಂದು ಭೇಟಿ ನೀಡಿ ಕೊಳಗೇರಿ ಹಾಗೂ ಇನ್ನಿತರ ಪ್ರದೇಶಗಳ ಸಮಗ್ರ ಪರಿಶೀಲನೆ ನಡೆಸಿದರು.



ಅರಸು ಕಾಲೋನಿಯ 36ನೇ ಕ್ರಾಸ್ ಪರಿಶೀಲನೆ ವೇಳೆ ಸಾರ್ವಜನಿಕ ಸಂಚಾರಕ್ಕೆ ಅಡ್ಡಿಯುಂಟು ಮಾಡುತ್ತಿದ್ದ ಫುಟ್‌ಪಾತ್‌ಗಳನ್ನು ಅತಿಕ್ರಮಿಸಿ ನಿರ್ಮಿಸಲಾಗಿರುವ ಮನೆಗಳನ್ನು ತೆರವುಗೊಳಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು. ಈ ವೇಳೆ ಈ ಮನೆಗಳಲ್ಲಿ ವಾಸಿಸುತ್ತಿರುವ ನಾಗರೀಕರು ಮನೆ ತೆರವುಗೊಳಿಸುವ ಮುನ್ನ ನಮಗೆ ಪ್ರತ್ಯೇಕ ವ್ಯವಸ್ಥೆ ಕಲ್ಪಿಸಿ ಕೊಡುವಂತೆ ಆಯುಕ್ತರಲ್ಲಿ ಮನವಿ ಮಾಡಿದರು.

ಬನ್ನೇರುಘಟ್ಟ ಮುಖ್ಯರಸ್ತೆಯ ಅಸರ ಆಸ್ಪತ್ರೆಯ ಹಿಂಭಾಗದ ಪ್ರದೇಶದಲ್ಲಿ ಬೀಳುತ್ತಿರುವ ಹಿನ್ನೆಲೆಯಲ್ಲಿ ಈ ಪ್ರದೇಶದಲ್ಲಿ ಕಡ್ಡಾಯವಾಗಿ ಪ್ರತಿನಿತ್ಯ ಘನತ್ಯಾಜ್ಯ ತೆರವುಗೊಳಿಸಲು ಮತ್ತು ರಸ್ತೆ ಬದಿಗಳಲ್ಲಿ ಬಿದ್ದಿರುವ ಕಟ್ಟಡ ತ್ಯಾಜ್ಯವನ್ನು ತಕ್ಷಣವೇ ವಿಲೇವಾರಿ ಮಾಡುವಂತೆ ಅಧಿಕಾರಿಗಳಿಗೆ ಆಯುಕ್ತರು ತಿಳಿಸಿದರು.

ಗುರುಪ್ಪನಪಾಳ್ಯ ವಾರ್ಡ್ ನಾ ಅಯ್ಯಪ್ಪ ದೇವಸ್ಥಾನಕ್ಕೆ ಹೋಗುವ ರಸ್ತೆಯ ಮುಂಭಾಗ ಹಾಗೂ ವಿದ್ಯುತ್ ಟ್ರಾನ್ಸ್‌ಫಾರ್ಮರ್ ಮುಂಭಾಗದಲ್ಲಿ ಕಸ ಬಿದಿರುವುದನ್ನು ಗಮನಿಸಿದ ಆಯುಕ್ತರು ಈ ಜಾಗಗಳನ್ನು ಕಸಮುಕ್ತಗೊಳಿಸಲು ಸಂಬಂಧ ಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಬನ್ನೇರುಘಟ್ಟ ಮುಖ್ಯರಸ್ತೆಯಲ್ಲಿ ಸಂಚಾರಕ್ಕೆ ಅಡ್ಡಿಯಾಗುತ್ತಿರುವ ರಸ್ತೆ ಗುಂಡಿಗಳನ್ನು ಮುಚ್ಚುವಂತೆ ಹಾಗೂ ಶೋಭಾ ಮ್ಯಾಗ್ನೋಲಿಯಾ ಮುಂಭಾಗ ಚರಂಡಿ ಕಾಮಗಾರಿ ನಡೆಯುತ್ತಿರುವುದನ್ನು ಪರಿಶೀಲಿಸಿ, ಮಳೆ ನೀರು ಸರಾಗವಾಗಿ ಚರಂಡಿಗೆ ಹರಿದು ಹೋಗುವಂತೆ ವೈಜ್ಞಾನಿಕವಾಗಿ ಕಾಮಗಾರಿ ನಡೆಸಲು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಮುಂದುವರಿದು, ಶೋಭಾ ಮ್ಯಾಗ್ನೋಲಿಯಾ ಅಪಾರ್ಟ್‌ಮೆಂಟ್ ಮುಂಭಾಗದ ರಸ್ತೆಯಲ್ಲಿ ಅನಧಿಕೃತವಾಗಿ ವಾಹನಗಳನ್ನು ಪಾರ್ಕಿಂಗ್ ಆಗಿರುವುದನ್ನು ಗಮನಿಸಿದ ಆಯುಕ್ತರು ಅವುಗಳನ್ನು ತೆರವುಮಾಡುವಂತೆ ತಿಳಿಸಿದರು.

ಗುರುಪ್ಪನಪಾಳ್ಯ ವಾರ್ಡ್‌ನ ಐಬಿಎಂ ರಸ್ತೆಯ 1ನೇ ಮೇನ್ ಹಾಗೂ ಗುರುಪ್ಪನಪಾಳ್ಯದ 1ನೇ ಕ್ರಾಸ್ ಸೇರಿದಂತೆ ಹಲವು ರಸ್ತೆಗಳಲ್ಲಿ ಮಳೆ ನೀರು ಅಂಗಡಿಗಳ ಒಳಗೆ ನುಗ್ಗುತ್ತಿರುವುದಾಗಿ ಸ್ಥಳೀಯರು ಆಯುಕ್ತರ ಗಮನಕ್ಕೆ ತಂದರು. ಚರಂಡಿಗಳಲ್ಲಿ ತುಂಬಿರುವ ಹೂಳನ್ನು ತೆಗೆಯುವಂತೆ ಹಾಗೂ 9ನೇ ಮೇನ್ ರಸ್ತೆಯಲ್ಲಿ ಮ್ಯಾನ್ ಹೋಲ್ ತೆರೆದಿರುವುದನ್ನು ಗಮನಿಸಿದ ಆಯುಕ್ತರು ಕೂಡಲೇ ಸರಿಪಡಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಬದರಿ ಸ್ಟ್ರೀಟ್‌ನಲ್ಲಿ ಬಿಡಬ್ಲ್ಯೂಎಸ್‌ಎಸ್‌ಬಿ ವತಿಯಿಂದ ವಾಟರ್ ಲೈನ್ ಕಾಮಗಾರಿ ನಡೆಯುತ್ತಿದ್ದು, ಕಾಮಗಾರಿಯ ಪೂರ್ಣಗೊಂಡಿರುವ ಕಡೆಗಳಲ್ಲಿ ವೈಜ್ಞಾನಿಕವಾಗಿ ರಸ್ತೆ ಪುನಶ್ಚೇತನ ಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಆಯುಕ್ತರು ತಿಳಿಸಿದರು.



ಕೋಲಾರ ತಾಲ್ಲೂಕಿನ ಧರ್ಮರಾಯ ವಲಯದ ಶಾಂತಿನಗರ ಗ್ರಾಮದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಹಮ್ಮಿಕೊಂಡಿದ್ದು, ಸದ್ರಿ ಕಾರ್ಯಕ್ರಮದಲ್ಲಿ ಉಚಿತವಾಗಿ ರಕ್ತದೊತ್ತಡ ತಪಾಸಣೆ ಸಕ್ಕರೆ ಕಾಯಿಲೆ ಹಾಗೂ ಹೃದಯ ಸಂಬಂಧಿಸಿದ ಪರೀಕ್ಷೆ, ಥೈರಾಯಿಡ್ ತಪಾಸಣೆ ಶಿಬಿರವನ್ನು ಹಮ್ಮಿಕೊಂಡಿದ್ದು, ಕಾರ್ಯಕ್ರಮಕ್ಕೆ ಆರ್.ಎಲ್. ಜಾಲಪ್ಪ ನಾರಾಯಣ ಹಾರ್ಟ್ ಸೆಂಟರ್ ಆಸ್ಪತ್ರೆಯ ಶ್ರೀಯುತ ಡಾ: ಕಿರಣ್ ಕುಮಾರ್‌ರ ಕೋಲಾರ ತಾಲೂಕಿನ ಯೋಜನಾಧಿಕಾರಿ ಸಿದ್ದಗಂಗಯ್ಯ ಟಿ.ಎಸ್, ಮತ್ತು ಒಕ್ಕೂಟದ ಅಧ್ಯಕ್ಷರಾದ ರೇಷ್ಮಾ ಇದ್ದರು.

# ದೈಹಿಕ ಮತ್ತು ಮಾನಸಿಕ ಆರೋಗ್ಯಕ್ಕಾಗಿ ಯೋಗ

ಬೆಂಗಳೂರು

ಬಂಗಾರಪೇಟೆ ತಾಲ್ಲೂಕಿನ ಹಂಚಾಳಗೇಟ್ ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ಸಮೂಹ ವಿದ್ಯಾ ಸಂಸ್ಥೆಗಳ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಿದ್ದ ಅಂತರ ರಾಷ್ಟ್ರೀಯ ಯೋಗ ದಿನಾಚರಣೆಯನ್ನು ಸಂಸ್ಥೆಯ ಅಧ್ಯಕ್ಷ ಡಾ:ಎಂ.ಚಂದ್ರಶೇಖರ್ ಉದ್ಘಾಟಿಸಿದರು.

ಈ ವೇಳೆ ಮಾತನಾಡಿದ ಅವರು, ಇಂದು ಯೋಗ ದಿನಾಚರಣೆಯನ್ನು ವಿಶ್ವದ ಬಹುತೇಕ ರಾಷ್ಟ್ರಗಳಲ್ಲಿ ಆಚರಿಸಲಾಗುತ್ತಿದೆ. ಇದು ಭಾರತದ ಕೊಡುಗೆ ಎಂದು ಹೆಮ್ಮೆಯಿಂದ ಹೇಳಿಕೊಳ್ಳಬಹುದು ಯೋಗವು ಭಾರತೀಯ ಮೂಲದ ಹಾಗೂ 6000 ವರ್ಷಕ್ಕಿಂತ ಹಳೆಯದಾದ ಭೌತಿಕ, ಮಾನಸಿಕ ಮತ್ತು ಆಧ್ಯಾತ್ಮಿಕ ಅಭ್ಯಾಸವಾಗಿದೆ.

ಕ್ರಿಸ್ತ ಪೂರ್ವ 3ನೇ ಶತಮಾನದಲ್ಲಿದ್ದ ಪತಂಜಲಿ ಋಷಿಯ ಚಿಂತನೆಯ ಫಲವಾದ ಯೋಗ ಬರೀ ಶಾಸ್ತ್ರವಾಗದೆ ಆಚರಣೆ, ಅಭ್ಯಾಸವಾಗಿ ಇಲ್ಲಿಯ ತನಕ ಬೆಳೆದು ಬಂದಿದೆ. ಪ್ರತಿ ವ್ಯಕ್ತಿಯ ದೈಹಿಕ, ಮಾನಸಿಕ, ಭಾವನಾತ್ಮಕ ಮತ್ತು ಆಧ್ಯಾತ್ಮಿಕ ಉನ್ನತಿಗೆ ಯೋಗವು ಸಹಕಾರಿಯಾಗಿದೆ. ಯೋಗವು ಮನಸ್ಸು ಮತ್ತು ದೇಹವನ್ನು ಒಗ್ಗೂಡಿಸುತ್ತದೆ ಹಾಗೂ ಮನುಷ್ಯ ಮತ್ತು ಪ್ರಕೃತಿಯ ನಡುವೆ ಸಾಮರಸ್ಯವನ್ನು ಉಂಟು ಮಾಡುತ್ತದೆ. ಯೋಗವು ದೈಹಿಕ ಮತ್ತು ಮಾನಸಿಕ ಆರೋಗ್ಯವನ್ನು ಉತ್ತಮವಾಗಿಸುವ ವಿಶೇಷ ಕಲೆಯಾಗಿದೆ.

ಅಂತರ ರಾಷ್ಟ್ರೀಯ ಯೋಗ ದಿನಾಚರಣೆಯನ್ನು ಆಚರಿಸಬೇಕೆಂದು ಇದರ ಪ್ರಸ್ತಾವನೆಯನ್ನು 2014 ರ ಡಿಸೆಂಬರ್‌ನಲ್ಲಿ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಭಾರತದ ಪ್ರತಿನಿಧಿಯಾಗಿರುವ ಅಶೋಕ್‌ಕುಮಾರ್ ಮಂಡಿಸಿದ್ದರು.

ಇದಕ್ಕೆ ವಿಶ್ವಸಂಸ್ಥೆಯ 177 ದೇಶಗಳು ಯೋಗ ದಿನಾಚರಣೆಗೆ ಅನುಮೋದನೆಯನ್ನು ನೀಡಿದವು. ಇದರ ಫಲವಾಗಿ 2015 ಜೂನ್ 21 ರಂದು ಮೊದಲ ಅಂತರರಾಷ್ಟ್ರೀಯ ಯೋಗ ದಿನವನ್ನು ವಿಶ್ವದಾದ್ಯಂತ ಆಚರಿಸಲಾಯಿತು. ಜೂನ್ 21 ಯೋಗ ದಿನಾಚರಣೆಯನ್ನು ಆಚರಿಸಲು ಕಾರಣವೇನೆಂದರೆ ಜೂನ್ 21 ದೀರ್ಘಕಾಲ ಹಗಲು ಹೊಂದಿರುವ ದಿನ.

ಈ ಯೋಗ ದಿನಾಚರಣೆಗೆ ಭಾರತದ ಪ್ರಧಾನಮಂತ್ರಿಗಳಾದ ಸನ್ಮಾನ್ಯ ಶ್ರೀ ನರೇಂದ್ರ ಮೋದಿಯವರು ಚಾಲನೆ ನೀಡಿದರು. ನಿಮ್ಮ ಬದುಕಿಗೆ ಮತ್ತಷ್ಟು ವರ್ಷಗಳನ್ನು ಕೂಡಿಸಲು ಮತ್ತು ನಿಮ್ಮ ಭವಿಷ್ಯಕ್ಕೆ ಸುಂದರ ಬದುಕನ್ನು ನೀಡಲು ನಿತ್ಯ ಯೋಗ ಅಭ್ಯಾಸ ಮಾಡಿ ಎಂದು ಅಂತರರಾಷ್ಟ್ರೀಯ ಯೋಗ ದಿನಾಚರಣೆಯ ಶುಭಾಷಯಗಳನ್ನು ಕೋರಿದರು. ಸುಮಾರು 2000 ವಿದ್ಯಾರ್ಥಿಗಳಿಂದ ಶಾಲಾ ಮೈದಾನದಲ್ಲಿ ಸಾಮೂಹಿಕವಾಗಿ ಯೋಗಾಭ್ಯಾಸವನ್ನು ಮಾಡಿಸಲಾಯಿತು. "ದೈಹಿಕ ಮತ್ತು ಮಾನಸಿಕ ಆರೋಗ್ಯಕ್ಕಾಗಿ ಯೋಗ" ಮಾಡಬೇಕೆಂದು ವಿದ್ಯಾರ್ಥಿಗಳಿಗೆ ಕರೆ ನೀಡುವುದರ ಮುಖಾಂತರ ಅರಿವು ಮೂಡಿಸಿದರು.

ಕಾರ್ಯಕ್ರಮದಲ್ಲಿ ಶಾಲಾಭಿವೃದ್ಧಿ ಸಮಿತಿಯ ಪದಾಧಿಕಾರಿಗಳು, ಮುಖ್ಯ ಆಡಳಿತಾಧಿಕಾರಿಗಳಾದ ಡಾ:ಎಂ.ವಿ.ವಿಜಯಕುಮಾರ್, ಆಡಳಿತಾಧಿಕಾರಿಗಳಾದ ಎಸ್.ಲಕ್ಷ್ಮೀನಾರಾಯಣ ರೆಡ್ಡಿ, ಮುಖ್ಯೋಪಾಧ್ಯಾಯರುಗಳು, ಪ್ರಾಂಶುಪಾಲರುಗಳು, ಸಿಬ್ಬಂದಿವರ್ಗ ಉಪಸ್ಥಿತರಿದ್ದರು, ಮುಖ್ಯಶಿಕ್ಷಕರಾದ ಎಂ.ಪಾಪಣ್ಣ ಸ್ವಾಗತಿಸಿ, ಎಲ್ ವೇಣುಗೋಪಾಲ್ ವಂದಿಸಿ, ನಿರೂಪಿಸಿದರು.



ಮಧುಗಿರಿ 3 ಬಾಲ ಭವನ ಟ್ರಸ್ಟ್ ವತಿಯಿಂದ ದೊಡ್ಡೇರಿ ಹೋಬಳಿಯ ಬಡವನಹಳ್ಳಿ ಹಾಗೂ ದೆಬ್ಬೇಗಟ್ಟ ಶಾಲೆಗಳ 10ನೇ ತರಗತಿಯ ಸುಮಾರು 165 ಮಕ್ಕಳಿಗೆ ಉಚಿತ ಸ್ಕೂಲ್ ಬ್ಯಾಗ್ ಗಳನ್ನು ವಿತರಿಸಲಾಯಿತು. ಬಿಇಓ ಹನುಮಂತರಾಯಪ್ಪ, ಬಾಲ ಭವನ ಟ್ರಸ್ಟ್ ಅಧ್ಯಕ್ಷೆ ಪುಷ್ಪಾವತಮ್ಮ, ಉಪಾಧ್ಯಕ್ಷೆ ನಂಜಮ್ಮ ಸಿದ್ದಪ್ಪ, ಕಾರ್ಯದರ್ಶಿ ಸಹನಾ ನಾಗೇಶ್, ಖಜಾಂಚಿ ಲಕ್ಷ್ಮೀ ಮೂರ್ತಿ, ಟ್ರಸ್ಟಿಗಳಾದ ಸುಜಾತಾ ಶಂಕರ್ ನಾರಾಯಣ್, ಶಾಲಾ ಸಿಬ್ಬಂದಿಗಳು ಹಾಗೂ ಮಕ್ಕಳು ಜೊತೆಗಿದ್ದರು.

# ಕುಣಿಗಲ್‌ನಲ್ಲಿ ಪತ್ರಕರ್ತರಿಗಾಗಿ ಉಚಿತ ಆರೋಗ್ಯ ತಪಾಸಣಾ ಶಿಬಿರ

ಬೆಂಗಳೂರು

ಸದಾ ಒತ್ತಡದ ಜೀವನ ನಡೆಸುವ ಪತ್ರಕರ್ತರು ತಮ್ಮ ಆರೋಗ್ಯದ ಬಗ್ಗೆ ವಿಶೇಷ ಗಮನ ಹರಿಸುವುದು ಅಗತ್ಯ ಎಂದು ಎಂ.ಎಂ. ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯ ಮುಖ್ಯಸ್ಥ ಡಾ. ಎಂ. ಆರ್. ರವಿಕುಮಾರ್ ತಿಳಿಸಿದ್ದಾರೆ.

ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘ, ಕುಣಿಗಲ್ ಘಟಕ ಹಾಗೂ ಎಂ.ಎಂ. ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯ ಸಹಯೋಗದಲ್ಲಿ ಪತ್ರಕರ್ತರು ಮತ್ತು ಅವರ ಕುಟುಂಬದವರಿಗಾಗಿ ಆಯೋಜಿಸಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪತ್ರಕರ್ತರು ದಿನನಿತ್ಯ ಸಮಾಜದ ವಿವಿಧ ಘಟನೆಗಳನ್ನು ವರದಿ ಮಾಡುವ ಸಂದರ್ಭದಲ್ಲಿ ಹೆಚ್ಚಿನ ಒತ್ತಡಕ್ಕೆ ಒಳಗಾಗುತ್ತಿದ್ದು, ಇದರಿಂದ ಅನೇಕ ಆರೋಗ್ಯ ಸಮಸ್ಯೆಗಳು ಎದುರಾಗುತ್ತಿವೆ. ಆದ್ದರಿಂದ ನಿಯಮಿತವಾಗಿ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವುದು, ವ್ಯಾಯಾಮ, ಯೋಗ ಹಾಗೂ ಉತ್ತಮ ಆಹಾರ ಪದ್ಧತಿಯನ್ನು ಅನುಸರಿಸುವುದು ಅಗತ್ಯ ಎಂದು ಅವರು ಸಲಹೆ ನೀಡಿದರು. ಇಂದಿನ ಜೀವನಶೈಲಿ ಮತ್ತು ಆಹಾರದಲ್ಲಿ ಹೆಚ್ಚುತ್ತಿರುವ ರಾಸಾಯನಿಕಗಳ ಬಳಕೆ ಕೂಡ ಅನೇಕ ರೋಗಗಳಿಗೆ ಕಾರಣವಾಗುತ್ತಿದ್ದು, ಜಾಗೃತ ಜೀವನಶೈಲಿ ಅವಶ್ಯಕವಾಗಿದೆ ಎಂದು ಅವರು ಹೇಳಿದರು.



ಕರುಳು ಮತ್ತು ಉದರ ರೋಗ ತಜ್ಞ ಡಾ. ವಿನೋದ್ ಗೌಡ ಮಾತನಾಡಿ, ಪತ್ರಕರ್ತರು ಕಾಲಕಾಲಕ್ಕೆ ಆರೋಗ್ಯ ಪರೀಕ್ಷೆ ಮಾಡಿಸಿಕೊಳ್ಳಬೇಕು ಹಾಗೂ ಹೆಚ್ಚಿನ ಪ್ರಮಾಣದಲ್ಲಿ ನೀರು ಸೇವಿಸುವ ಅಭ್ಯಾಸವನ್ನು ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಬೀಚನಹಳ್ಳಿ ಶ್ರೀನಿವಾಸ್, ಸಂಘದ ವತಿಯಿಂದ ಪತ್ರಕರ್ತರು ಹಾಗೂ ಅವರ ಕುಟುಂಬದ ಆರೋಗ್ಯದ ಹಿತದೃಷ್ಟಿಯಿಂದ ಈ ಶಿಬಿರವನ್ನು ಆಯೋಜಿಸಲಾಗಿದೆ ಎಂದು ಹೇಳಿದರು.

ಶಿಬಿರದಲ್ಲಿ ಡಾ. ಪರಿಮಳ, ಡಾ. ಆನಂದ್ ಸುಭಾಷ್ ಸೇರಿದಂತೆ ಹಲವು ವೈದ್ಯರು, ಸಂಘದ ಪದಾಧಿಕಾರಿಗಳು ಹಾಗೂ ಪತ್ರಕರ್ತರು ಮತ್ತು ಅವರ ಕುಟುಂಬ ಸದಸ್ಯರು ಭಾಗವಹಿಸಿದ್ದರು.

# ಕೈವಾರ ಗುರುಪೂಜಾ–ಸಂಗೀತೋತ್ಸವದ ಆಹ್ವಾನ ಪತ್ರಿಕೆ ಬಿಡುಗಡೆ



ಬೆಂಗಳೂರು

ತಾಲ್ಲೂಕಿನ ಪ್ರಸಿದ್ದ ಯಾತ್ರಾಸ್ಥಳ ಕೈವಾರ ಕ್ಷೇತ್ರದ ಶ್ರೀಯೋಗಿನಾರೇಯಣ ಮಠದಲ್ಲಿ ಜುಲೈ 27 ರಿಂದ 29 ರವರೆಗೆ ನಡೆಯುವ ರಾಷ್ಟ್ರಮಟ್ಟದ ಸಂಗೀತೋತ್ಸವ ಮತ್ತು ಗುರುಪೂಜಾ ಮಹೋತ್ಸವದ ಆಹ್ವಾನಪತ್ರಿಕೆಯನ್ನು ಬಿಡುಗಡೆಗೊಳಿಸಲಾಯಿತು.

ಸದ್ಗುರು ಯೋಗಿ ನಾರೇಯಣ ತಾತಯ್ಯನವರ ಸನ್ನಿಧಿಯಲ್ಲಿ ಧರ್ಮಾಧಿಕಾರಿಗಳಾದ ಡಾ॥ಎಂ. ಆರ್.ಜಯರಾಮ್ ರವರು ವಿಶೇಷ ಪೂಜೆಯನ್ನು ಸಮರ್ಪಿಸುವುದರ ಮೂಲಕ ಬಿಡುಗಡೆ ಮಾಡಿದರು.

ಈ ಸಂದರ್ಭದಲ್ಲಿ ಡಾ॥ಎಂ.ಆರ್.ಜಯರಾಮ್ ರವರು ಮಾತನಾಡುತ್ತಾ ಗುರುಗಳ ಪೂಜೆ ಮತ್ತು ಸಂಗೀತೋತ್ಸವವನ್ನು ಗುರುಪೂರ್ಣಿಮೆಯ ವಿಶೇಷವಾಗಿ 3 ದಿನಗಳು ನಿರಂತರ 72 ಗಂಟೆಗಳ ಕಾಲ ಶ್ರೀಕ್ಷೇತ್ರದಲ್ಲಿ ನಡೆಯುತ್ತದೆ. ಸಂಗೀತ ವಿದ್ವಾಂಸರುಗಳು ಸಂಕೀರ್ತನೆಯನ್ನು ಶ್ರದ್ಧಾಭಕ್ತಿಗಳಿಂದ ಗುರುಗಳಿಗೆ ಸಮರ್ಪಿಸಲಿದ್ದಾರೆ ಎಂದರು.

ಈ ಬಾರಿ ಕೈವಾರ ತಾತಯ್ಯನವರ 300 ನೇ ಜಯಂತೋತ್ಸವದ ಸಂದರ್ಭದಲ್ಲಿ ಗುರುಪೂಜಾ ಮಹೋತ್ಸವವನ್ನು ಶ್ರದ್ಧಾಭಕ್ತಿಗಳಿಂದ ಆಚರಿಸಲಾಗುವುದು. ಕೈವಾರದ ಸಂಗೀತೋತ್ಸವವು ಸಂಗೀತಕ್ಷೇತ್ರದಲ್ಲಿ ಮಹತ್ವವನ್ನು ಪಡೆದುಕೊಂಡಿದೆ. ಗುರುಪೂಜಾ – ಸಂಗೀತ ಮಹೋತ್ಸವಗಳು ಸುಮಾರು ವರ್ಷಗಳಿಂದಲೂ ಕೈವಾರದಲ್ಲಿ ವಿಜೃಂಭಣೆಯಿಂದ ನಡೆದುಕೊಂಡು ಬರುತ್ತಿದೆ. ದೇಶದ ವಿವಿಧ ಸಂಗೀತ ವಿದ್ವಾಂಸರುಗಳು ಇಲ್ಲಿ ಬಂದು ಸೇವೆ ಸಲ್ಲಿಸುತ್ತಾರೆ. ಸಂಗೀತ ರಸದೌತಣವನ್ನು ಸವಿಯಲು ಸಂಗೀತ ಪ್ರಿಯರು ಅಪಾರ ಸಂಖ್ಯೆಯಲ್ಲಿ ಆಗಮಿಸುತ್ತಾರೆ ಎಂದರು.

ಶ್ರೀ ಯೋಗಿ ನಾರೇಯಣ ಸಂಕೀರ್ತನಾ ಯೋಜನೆಯ ಸಂಚಾಲಕರಾದ ವಾನರಾಶಿ ಬಾಲಕೃಷ್ಣ ಭಾಗವತರ್ ರವರು ಮಾತನಾಡುತ್ತಾ ಜುಲೈ 27 ಸೋಮವಾರ ಬೆಳಿಗ್ಗೆ 6 ಗಂಟೆಗೆ ಗುರುಪೂಜೆ–ಸಂಗೀತೋತ್ಸವ ಆರಂಭವಾಗುತ್ತದೆ. ನಾಡಿನ ಪ್ರಸಿದ್ದ ವಿದ್ವಾಂಸರುಗಳು, ನಾದಸ್ವರ ವಾದಕರು, ಸಂಗೀತಗಾರು ಹಾಗೂ ಕಲೆಯ ನಾನಾ ಪ್ರಕಾರದ ಎಲ್ಲಾ ಕಲಾವಿದರನ್ನು ಒಂದೇ ವೇದಿಕೆಯಲ್ಲಿ ಕಾಣುವ ಅವಕಾಶ ಒದಗಿಬಂದಿದೆ.

ಇಂತಹ ಕಾರ್ಯಕ್ರಮಗಳನ್ನು ಸಂಗೀತ ಕಲಾಭಿಮಾನಿಗಳು ಸದುಪಯೋಗ ಮಾಡಿಕೊಳ್ಳಬೇಕು. ಸಂಗೀತ ವಿದ್ವಾಂಸರಿಗೆ ಹಾಗೂ ಆಗಮಿಸುವ ಭಕ್ತರಿಗೆ ಹಲವಾರು ವ್ಯವಸ್ಥೆಗಳನ್ನು ಕೈಗೊಳ್ಳಲಾಗುತ್ತಿದೆ ಎಂದರು.

ಆಹ್ವಾನ ಪತ್ರಿಕೆಗಳ ಬಿಡುಗಡೆ ಸಂದರ್ಭದಲ್ಲಿ ಸಾಮೂಹಿಕ ಭಜನೆಯನ್ನು ಸಮರ್ಪಿಸಿ, ಸದ್ಗುರು ತಾತಯ್ಯನವರಿಗೆ ವಿಶೇಷ ಪೂಜೆಯನ್ನು ಸಲ್ಲಿಸಲಾಯಿತು. ಮಠದ ಟ್ರಸ್ಟ್‌ನ ಉಪಾಧ್ಯಕ್ಷರಾದ ಜೆ.ವಿಭಾಕರರೆಡ್ಡಿ, ಖಜಾಂಚಿಗಳಾದ ಆರ್.ಪಿ.ಎಂ.ಸತ್ಯನಾರಾಯಣ್, ಶ್ರೀ ಯೋಗಿ ನಾರೇಯಣ ಸಂಕೀರ್ತನಾ ಯೋಜನೆಯ ಸಂಚಾಲಕರಾದ ವಾನರಾಶಿ ಬಾಲಕೃಷ್ಣ ಭಾಗವತರ್, ಮಠದ ವ್ಯವಸ್ಥಾಪಕ ಕೆ.ಲಕ್ಷ್ಮೀನಾರಾಯಣ್, ಉಪನ್ಯಾಸಕ ವೆಂಕಟರವಣಪ್ಪ ಮುಂತಾದವರು ಉಪಸ್ಥಿತರಿದ್ದರು.

# ಒಕ್ಕಲಿಗ ಮುಖಂಡರ ಪೂರ್ವಭಾವಿ ಸಭೆ

ಬೆಂಗಳೂರು

ಜೂನ್ 27 ರಂದು ನಗರದಲ್ಲಿ ಅದ್ದೂರಿಯಾಗಿ ನಡೆಯಲಿರುವ ನಾಡಪ್ರಭು ಕೆಂಪೇಗೌಡ ಜಯಂತಿಯನ್ನು ಯಶಸ್ವಿಯಾಗಿ ಆಯೋಜಿಸುವ ಸಂಬಂಧ ಕೋಲಾರ ನಗರದ ಪ್ರವಾಸಿ ಮಂದಿರದಲ್ಲಿ ಬುಧವಾರ ಕಾಂಗ್ರೆಸ್ ಪಕ್ಷದ ಒಕ್ಕಲಿಗ ಸಮುದಾಯದ ಮುಖಂಡರು ಪೂರ್ವಭಾವಿ ಸಭೆ ನಡೆಸಿದರು.

ಸಭೆಯಲ್ಲಿ ಮಾತನಾಡಿದ ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮೈಲಾಂಡಹಳ್ಳಿ ಮುರಳಿ, ಕೆಂಪೇಗೌಡ ಜಯಂತಿಯನ್ನು ಜಿಲ್ಲಾ ಕೇಂದ್ರದಲ್ಲಿ ಅರ್ಥಪೂರ್ಣ ಹಾಗೂ ವಿಜೃಂಭಣೆಯಿಂದ ಆಚರಿಸಲು ನಿರ್ಧರಿಸಲಾಗಿದ್ದು, ಕಾರ್ಯಕ್ರಮಕ್ಕೆ ಪಕ್ಷಾತೀತವಾಗಿ ಎಲ್ಲರ ಸಹಕಾರ ಅಗತ್ಯವಿದೆ ಎಂದು ಹೇಳಿದರು. ಕೆಂಪೇಗೌಡರ ಆದರ್ಶಗಳು ಮತ್ತು ಸಮಾಜಕ್ಕೆ ಅವರ ಕೊಡುಗೆಯನ್ನು ಯುವ ಪೀಳಿಗೆಗೆ ಪರಿಚಯಿಸುವ ಉದ್ದೇಶದಿಂದ ಈ ಬಾರಿಯ ಆಚರಣೆಯನ್ನು ವಿಶೇಷವಾಗಿ ಆಯೋಜಿಸಲಾಗುತ್ತಿದೆ ಎಂದು ಅವರು ತಿಳಿಸಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಸಮುದಾಯದ ಪ್ರತಿನಿಧಿಯಾಗಿ ನಾಯಕತ್ವ ವಹಿಸಿರುವುದು ಹೆಮ್ಮೆಯ ವಿಷಯವಾಗಿದ್ದು, ಸರ್ಕಾರವು ಈಗಾಗಲೇ ಪ್ರತಿಯೊಂದು ವಿಧಾನಸಭಾ ಕ್ಷೇತ್ರದಲ್ಲಿ ಕೆಂಪೇಗೌಡ ಜಯಂತಿ ಆಚರಣೆಗೆ ತಲಾ ಒಂದು ಲಕ್ಷ ರೂಪಾಯಿ ಅನುದಾನ ಘೋಷಿಸಿರುವುದಾಗಿ ಅವರು ಹೇಳಿದರು. ಕೋಲಾರ ವಿಧಾನಸಭಾ ಕ್ಷೇತ್ರದಲ್ಲಿಯೂ ಅದ್ದೂರಿಯಾಗಿ ಕಾರ್ಯಕ್ರಮವನ್ನು ಆಚರಿಸಲು ಸಮುದಾಯದ ಮುಖಂಡರು ಮುಂದಾಗಬೇಕು ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸುವಂತೆ ಮನವಿ ಮಾಡಿದರು.

ಸಭೆಯಲ್ಲಿ ಡಿಸಿಸಿ ಬ್ಯಾಂಕ್ ನಿರ್ದೇಶಕ ಖಾಜಿಕಲ್ಲಹಳ್ಳಿ ಮುನಿರಾಜು, ಕೋಮುಲ್ ನಿರ್ದೇಶಕ ಚಂಜಿಮಲೆ ರಮೇಶ್, ವೇಮಗಲ್ ನರಸಾಪುರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಉರಟ ಅಗ್ರಹಾರ ಚೌಡರೆಡ್ಡಿ, ಗ್ರಾಪಂ ಮಾಜಿ ಅಧ್ಯಕ್ಷ ಪೆಮ್ಮಶೆಟ್ಟಿಹಳ್ಳಿ ಸುರೇಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಒಂದೇ ಕುಟುಂಬದ ಐವರು ಸಾವು

ಬೆಂಗಳೂರು

ಇವರು ಕಬ್ಬಾಳು ದೇವಸ್ಥಾನದಲ್ಲಿ ಬೀಗರ ಔತಣ ಕೂಟದ ನಿಮಿತ್ತ ಆಗಮಿಸಿ ಪೂಜೆ ಸಲ್ಲಿಸಿದ ಬಳಿಕ ಮಳವಳ್ಳಿ ತಾಲೂಕಿನ ಮುತ್ತತ್ತಿ ಪ್ರವಾಸಿ ತಾಣಕ್ಕೆ ಭೇಟಿ ನೀಡಿ ದೇವರ ದರ್ಶನ ಪಡೆದಿದ್ದರು. ನಂತರ ಕಾವೇರಿ ನದಿಯಲ್ಲಿ ಸೆಲ್ಫಿ ಕ್ಲಿಕ್ಕಿಸುವ ವೇಳೆ ಅಕಸ್ಮಿಕವಾಗಿ ಕಾಲು ಜಾರಿ ನಾಲ್ವರು ಮಹಿಳೆಯರು ನದಿಗೆ ಬಿದ್ದಿದ್ದು, ನದಿಯ ವೇಗದ ಹರಿವು ಅವರಿಗೆ ಅಪಾಯಕಾರಿಯಾಗಿ ಪರಿಣಮಿಸಿದೆ. ಅವರನ್ನು ರಕ್ಷಿಸಲು ಮುಂದಾದ ಕಾರಿನ ಚಾಲಕ ಮಹೇಶ್ ಕೂಡ ನೀರಿನಲ್ಲಿ ಮುಳುಗಿ ಸಾವನ್ನಪ್ಪಿದ್ದಾರೆ.

ನೀರಿನಲ್ಲಿ ಮುಳುಗಿದ್ದ ಮೃತದೇಹಗಳನ್ನು ನುರಿತ ಈಜುಗಾರರ ಸಹಾಯದಿಂದ ರಾತ್ರಿ ಸುಮಾರು 7 ಗಂಟೆಯ ವೇಳೆಗೆ ಹೊರತೆಗೆದಿದ್ದು, ಮರಣೋತ್ತರ ಪರೀಕ್ಷೆಗಾಗಿ ಆಸ್ಪತ್ರೆಗೆ ಸಾಗಿಸಲಾಗಿದೆ. ಬಳಿಕ ಮೃತದೇಹಗಳನ್ನು ವಾರಸುದಾರರಿಗೆ ಹಸ್ತಾಂತರಿಸಲಾಗುತ್ತದೆ ಎಂದು ಪೊಲೀಸರು ತಿಳಿಸಿದ್ದಾರೆ.

ಘಟನಾ ಸ್ಥಳಕ್ಕೆ ಮಂಡ್ಯ ಜಿಲ್ಲಾಧಿಕಾರಿ ಡಾ. ಕುಮಾರ್, ಜಿಲ್ಲಾ ಪೊಲೀಸ್ ಅಧೀಕ್ಷಕಿ ವಿ.ಜೆ. ಶೋಭಾರಾಣಿ, ಡಿವೈಎಸ್ಪಿ ಯಶವಂತ್ ಕುಮಾರ್ ಹಾಗೂ ಹಲಗೂರು ಪೊಲೀಸ್ ಠಾಣೆಯ ಪಿಎಸ್ಐ ಲೋಕೇಶ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಸಿಹೆಚ್‌ಸಿ ಗೋವರ್ಧನ್, ಮೋಹನ್ ಕುಮಾರ್, ಪ್ರಶಾಂತ್ ಕುಮಾರ್ ಹಾಗೂ ಮಹಿಳಾ ಪೊಲೀಸ್ ಸಿಬ್ಬಂದಿ ಗೀತಾ ಅಂಚಿನಾಳ ಸೇರಿದಂತೆ ಇತರರು ಉಪಸ್ಥಿತರಿದ್ದರು. ಈ ಸಂಬಂಧ ಹಲಗೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಹೆಚ್ಚಿನ ತನಿಖೆ ಮುಂದುವರಿದಿದೆ ಎಂದು ಎಸ್‌ಪಿ ಶೋಭಾರಾಣಿ ಮಾಹಿತಿ ನೀಡಿದರು.

# ಉಗ್ರರೊಂದಿಗೆ ಸಂಪರ್ಕ: ಮಹಿಳೆ ಬಂಧನ

ಬೆಂಗಳೂರು

ದೇಶದ ಭದ್ರತೆಗೆ ಮತ್ತೊಂದು ಮಹತ್ವದ ಯಶಸ್ಸು ಸಿಕ್ಕಿದ್ದು, ಜೈಶ್–ಎ–ಮೊಹಮ್ಮದ್ (ಜೆಇಎಂ) ಭಯೋತ್ಪಾದಕ ಸಂಘಟನೆಯೊಂದಿಗೆ ಸಂಪರ್ಕ ಹೊಂದಿರುವ ಆರೋಪದ ಮೇಲೆ ರಾಜಸ್ಥಾನ ಮೂಲದ ಮಹಿಳೆಯನ್ನು ಭಯೋತ್ಪಾದನಾ ನಿಗ್ರಹ ದಳ (ಎಟಿಎಸ್) ಬಂಧಿಸಿದೆ.

ಗುಪ್ತಚರ ಇಲಾಖೆಯಿಂದ ಲಭಿಸಿದ ಖಚಿತ ಮಾಹಿತಿಯ ಆಧಾರದ ಮೇಲೆ ಕಾರ್ಯಾಚರಣೆ ನಡೆಸಿದ ಎಟಿಎಸ್ ಅಧಿಕಾರಿಗಳು, ಮಹಿಳೆಯನ್ನು ವಶಕ್ಕೆ ಪಡೆದು ವಿಚಾರಣೆ ಆರಂಭಿಸಿದ್ದಾರೆ. ಪ್ರಾಥಮಿಕ ತನಿಖೆಯಲ್ಲಿ ಪಾಕಿಸ್ತಾನ ಮೂಲದ ವ್ಯಕ್ತಿಗಳೊಂದಿಗೆ ಸಂಪರ್ಕ ಹೊಂದಿದ್ದ ಶಂಕೆ ವ್ಯಕ್ತವಾಗಿದ್ದು, ಡಿಜಿಟಲ್ ಸಾಕ್ಷ್ಯಗಳನ್ನು ವಶಪಡಿಸಿಕೊಳ್ಳಲಾಗಿದೆ.

ಭಾರತದ ಭದ್ರತೆಗೆ ಧಕ್ಕೆ ಉಂಟುಮಾಡುವ ಯಾವುದೇ ಸಂಚುಗಳನ್ನು ಆರಂಭದಲ್ಲೇ ಪತ್ತೆಹಚ್ಚಿ ತಡೆಯುವಲ್ಲಿ ಭದ್ರತಾ ಪಡೆಗಳು ಎಚ್ಚರಿಕೆಯಿಂದ ಕಾರ್ಯನಿರ್ವಹಿಸುತ್ತಿರುವುದಕ್ಕೆ ಈ ಕಾರ್ಯಾಚರಣೆ ಮತ್ತೊಂದು ಉದಾಹರಣೆಯಾಗಿದೆ.

ಭಯೋತ್ಪಾದಕ ಸಂಘಟನೆಗಳ ಜಾಲವನ್ನು ಭೇದಿಸುವ ನಿಟ್ಟಿನಲ್ಲಿ ತನಿಖಾ ಸಂಸ್ಥೆಗಳು ನಿರಂತರ ನಿಗಾ ವಹಿಸಿದ್ದು, ದೇಶದ ಭದ್ರತೆಯನ್ನು ಮತ್ತಷ್ಟು ಬಲಪಡಿಸುವಲ್ಲಿ ಯಶಸ್ವಿಯಾಗಿವೆ. ಗುಪ್ತಚರ ಇಲಾಖೆಯಿಂದ ಲಭಿಸಿದ ಖಚಿತ ಮಾಹಿತಿಯ ಆಧಾರದ ಮೇಲೆ ಕಾರ್ಯಾಚರಣೆ ನಡೆಸಿದ ಎಟಿಎಸ್ ಅಧಿಕಾರಿಗಳು, ಮಹಿಳೆಯನ್ನು ವಶಕ್ಕೆ ಪಡೆದು ವಿಚಾರಣೆ ಆರಂಭಿಸಿದ್ದಾರೆ. ಪ್ರಾಥಮಿಕ ತನಿಖೆಯಲ್ಲಿ ಪಾಕಿಸ್ತಾನ ಮೂಲದ ವ್ಯಕ್ತಿಗಳೊಂದಿಗೆ ಸಂಪರ್ಕ ಹೊಂದಿದ್ದ ಶಂಕೆ ವ್ಯಕ್ತವಾಗಿದ್ದು, ಡಿಜಿಟಲ್ ಸಾಕ್ಷ್ಯಗಳನ್ನು ವಶಪಡಿಸಿ ಕೊಳ್ಳಲಾಗಿದೆ.

ಈ ಬಂಧನದ ಮೂಲಕ ಸಂಭಾವ್ಯ ಭಯೋತ್ಪಾದಕ ಚಟುವಟಿಕೆಗಳಿಗೆ ತಡೆ ಬಿದ್ದಿದ್ದು, ದೇಶದ ಸುರಕ್ಷತೆ ಕಾಪಾಡುವಲ್ಲಿ ಭದ್ರತಾ ಸಂಸ್ಥೆಗಳ ಕಾರ್ಯಕ್ಷಮತೆಗೆ ಸಾರ್ವಜನಿಕರಿಂದ ಮೆಚ್ಚುಗೆ ವ್ಯಕ್ತವಾಗಿದೆ. ತನಿಖೆ ಮುಂದುವರಿದಿದ್ದು, ಪ್ರಕರಣಕ್ಕೆ ಸಂಬಂಧಿಸಿದ ಇನ್ನಷ್ಟು

26/06/2026

# ಭಾರತ ಸಾರಥಿ

BHARATHA SARATHI KANNADA DAILY NEWS PAPER

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಜು.1ರಿಂದಲೇ ವಿಕ್ಷಿತ ಭಾರತ್ ಜಿ ರಾಮ್ ಜಿ ಜಾರಿ

ಬೆಂಗಳೂರು

ಗ್ರಾಮೀಣ ಭಾಗದ ಕುಟುಂಬಗಳಿಗೆ ಉದ್ಯೋಗದ ಖಾತ್ರಿ ನೀಡಿದ್ದ ನರೇಗಾ ಹೊಸ ಸ್ವರೂಪ ವಿಕ್ಷಿತ ಭಾರತ್ ಜಿ ರಾಮ್ ಜಿಯಿಂದ ರಾಜ್ಯ ಸರ್ಕಾರದ ಮೇಲೆ ಹೆಚ್ಚಿನ ಹೊರೆಯಾದರೂ ಗ್ರಾಮೀಣ ಜನರ, ಮಹಿಳೆಯರ, ವಂಚಿತರ, ದುರ್ಬಲರ ಹಿತದೃಷ್ಟಿಯಿಂದ ಜುಲೈ 1ರಿಂದಲೇ ಜಾರಿಗೆ ತರಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಸ್ಪಷ್ಟಪಡಿಸಿದ್ದಾರೆ.



ಯುಪಿಎ ಸರ್ಕಾರ ಜಾರಿಗೆ ತಂದಿದ್ದ ಮಹಾತ್ಮಾ ಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಕೇಂದ್ರ ಸರ್ಕಾರ 90:10 ಅನುಪಾತದಲ್ಲಿ ವೇತನ ಭರಿಸುತ್ತಿತ್ತು. ರಾಜ್ಯ ಸರ್ಕಾರ ಕೇವಲ 10ರಷ್ಟು ಹಣ ನೀಡುತ್ತಿತ್ತು. ಆದರೆ, ಈಗ 60:40ರ ಅನುಪಾತದಲ್ಲಿ ವೆಚ್ಚ ಭರಿಸಬೇಕಾಗಿದ್ದು ರಾಜ್ಯಗಳ ಮೇಲೆ ಹೆಚ್ಚಿನ ಹೊರೆ ಆಗುತ್ತಿದೆ ಎಂದರು.

2006ರಿಂದ 2026ರಲ್ಲಿ ಇಲ್ಲಿಯವರೆಗೆ ಕೇಂದ್ರ ಸರ್ಕಾರ ನರೇಗಾ ಅಡಿಯಲ್ಲಿ 56492 ಕೋಟಿ ರೂ. ಭರಿಸಿದ್ದರೆ, ರಾಜ್ಯ ಸರ್ಕಾರ 4821 ಕೋಟಿ ಮಾತ್ರ ಭರಿಸಿ ಸುಮಾರು 182 ಕೋಟಿ ಮಾನವ ದಿನಗಳ ಉದ್ಯೋಗ ಒದಗಿಸಿತ್ತು. ಆದರೆ ಈಗ ಒಂದೇ ವರ್ಷಕ್ಕೆ 3806ಕೋಟಿ ರೂ. ವೆಚ್ಚ ಭರಿಸುವ ಸ್ಥಿತಿ ಬಂದಿದೆ. ಇದು ರಾಜ್ಯದ ಮೇಲೆ ಆಗುವ ದೊಡ್ಡ ಹೊರೆ ಎಂದು ತಿಳಿಸಿದರು.

ಸಂಸತ್ತಿನಲ್ಲಿ ವಿಬಿಜಿ ರಾಮ್ ಜಿ ಕಾಯಿದೆ ತರುವ ಮುನ್ನ ಕೇಂದ್ರ ಸರ್ಕಾರ ರಾಜ್ಯಗಳ ಸಲಹೆ ಪಡೆಯಬೇಕಾಗಿತ್ತು. ರಾಜ್ಯಗಳನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಬೇಕಾಗಿತ್ತು. ಒಕ್ಕೂಟ ವ್ಯವಸ್ಥೆಯಲ್ಲಿ ರಾಜ್ಯಗಳನ್ನು ಬಿಟ್ಟು ಕಾಯಿದೆ ರೂಪಿಸಿದ ಬಗ್ಗೆಯೂ ಕರ್ನಾಟಕ ರಾಜ್ಯ ಸರ್ಕಾರದ ವಿರೋಧವಿದೆ. ಇದನ್ನು ಸುಪ್ರೀಂಕೋರ್ಟ್‌ನಲ್ಲಿ ಪ್ರಶ್ನಿಸಲಾಗುತ್ತಿದೆ. ಜೊತೆಗೆ ಕೇಂದ್ರ ಸರ್ಕಾರ ಹಂತ ಹಂತವಾಗಿ ಕನಿಷ್ಠ 80:20ರ ಅನುಪಾತದಲ್ಲಾದರೂ ರಾಜ್ಯಗಳ ನೆರವಿಗೆ ನಿಲ್ಲಬೇಕು ಎಂದು ಆಗ್ರಹಿಸಲಾಗುತ್ತಿದೆ ಎಂದರು.

ಕೇಂದ್ರ ಸರ್ಕಾರ ವಿಬಿಜಿ ರಾಮ್ ಜಿ ಅಡಿ ರಾಜ್ಯಕ್ಕೆ 5709 ಕೋಟಿ ರೂ. ಹಂಚಿಕೆ ಮಾಡಿದೆ. ಗ್ರಾಮೀಣ ಜನರಿಗೆ ತೊಂದರೆ ಆಗದಂತೆ ಯೋಜನೆಗೆ ರಾಜ್ಯ ಸರ್ಕಾರದ ವತಿಯಿಂದ 3806 ಕೋಟಿ ರೂ. ಭರಿಸಬೇಕಾಗುತ್ತದೆ. ಈ ಬಗ್ಗೆ ಈಗಾಗಲೇ ಮುಖ್ಯಮಂತ್ರಿಯವರಿಗೆ ಮನವಿ ಮಾಡಿದ್ದು, ಅವರು ಸಮ್ಮತಿಸಿದ್ದಾರೆ ಎಂದರು.

ಕೇಂದ್ರ ಸರ್ಕಾರ ಅವೈಜ್ಞಾನಿಕವಾಗಿ ಬೇಸಾಯದ ಸಮಯದಲ್ಲಿ 60 ದಿನಗಳ ಕಾಲ ಉದ್ಯೋಗ ನೀಡದಿರುವಂತೆ ಸೂಚಿಸಿದೆ. ಇದು ಗ್ರಾಮೀಣ ಕುಟುಂಬಗಳಿಗೆ ಮಾರಕವಾಗಿದೆ. ಕಾರಣ ಈಗ ಅತ್ಯಾಧುನಿಕ ಕೃಷಿ ಯಂತ್ರೋಪಕರಣ ಬಂದಿದ್ದು, ಗ್ರಾಮೀಣ ಕುಟುಂಬಗಳಿಗೆ ಬೇಸಾಯದ ಸಮಯದಲ್ಲೂ ಕೃಷಿ ಉದ್ಯೋಗ ಲಭಿಸುವುದಿಲ್ಲ. ಹೀಗಾಗಿ ವಿಬಿಜಿ ರಾಮ್ ಜಿ ಅವರ ಅನ್ನವನ್ನು ಕಸಿಸಿಕೊಂಡಂತೆ ಮಾಡಿದೆ. ಇದರ ವಿರುದ್ಧ ರಾಜ್ಯ ಸರ್ಕಾರ ಆಕ್ಷೇಪಣೆ ವ್ಯಕ್ತಪಡಿಸಿದೆ ಎಂದರು.

ಬರುವ 28ರಂದು ದೆಹಲಿಯಲ್ಲಿ ಕೇಂದ್ರ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರೊಂದಿಗೆ ಎಲ್ಲ ರಾಜ್ಯಗಳ ಸಚಿವರ ಸಭೆ ಇದ್ದು, ಈ ಸಭೆಯಲ್ಲಿ ಈ ಎಲ್ಲ ಅಂಶಗಳ ಬಗ್ಗೆ ಪ್ರಸ್ತಾಪಿಸಲಾಗುವುದು ಎಂದು ಈಶ್ವರ ಖಂಡ್ರೆ ತಿಳಿಸಿದರು.

ಬೇಡಿಕೆ ಆಧಾರದಲ್ಲಿ ಉದ್ಯೋಗ ನೀಡಬೇಕು ಎಂಬುದು ನಮ್ಮ ಒತ್ತಾಯವಾಗಿದೆ. ನಮ್ಮ ರಾಜ್ಯದಲ್ಲಿ 375 ರೂ. ಕೂಲಿ ಇದೆ. ರಾಜ್ಯ ಸರ್ಕಾರ ಕನಿಷ್ಠ ವೇತನವನ್ನು ಹೆಚ್ಚಳ ಮಾಡಿದೆ. ಇದಕ್ಕೆ ಹೊಂದುವಂತೆ ಕೇಂದ್ರವೂ ಕನಿಷ್ಠ ಕೂಲಿ ಹೆಚ್ಚಿಸಬೇಕು ಎಂದು ಈಶ್ವರ ಖಂಡ್ರೆ ಒತ್ತಾಯಿಸಿದರು.

ಜುಲೈ 1ರಿಂದ ಹೊಸ ಸ್ವರೂಪದ ಮನ್ರೇಗಾ (ವಿಬಿಜಿ ರಾಮ್ ಜಿ) ಜಾರಿ ಮಾಡಲಾಗುವುದು. ಇದರಡಿಯಲ್ಲಿ ಯಾರೇ ಉದ್ಯೋಗ ಕೇಳಿ ಬಂದರೂ ಅರ್ಹರಿಗೆ ಉದ್ಯೋಗ ನೀಡಲು ಸರ್ಕಾರ ಸನ್ನದ್ಧವಾಗಿದೆ ಎಂದರು.

ಕಳೆದ 3 ತಿಂಗಳಲ್ಲಿ ರಾಜ್ಯದಲ್ಲಿ 1.40 ಲಕ್ಷ ಮಾನವ ದಿನ ಸೃಷ್ಟಿಸಲಾಗಿದೆ. 9 ಕೋಟಿ ವಾರ್ಷಿಕ ಗುರಿ ಇಟ್ಟುಕೊಂಡಿದೆ. ಪ್ರತಿ ತಿಂಗಳೂ 80 ರಿಂದ 90 ಲಕ್ಷ ಮಾನವ ದಿನ ಸೃಷ್ಟಿ ನಮ್ಮ ಗುರಿಯಾಗಿದೆ ಎಂದರು.

ಈಗಾಗಲೇ ನರೇಗಾ ಅಡಿ ಹೊರಗುತ್ತಿಗೆ ಆಧಾರದಲ್ಲಿ ಕಾರ್ಯ ನಿರ್ವಹಿಸುತ್ತಿರುವ 7000ಕ್ಕೂ ಹೆಚ್ಚು ಸಿಬ್ಬಂದಿಯ ಜೀವನೋಪಾಯಕ್ಕೆ ತೊಂದರೆ ಆಗದ ರೀತಿಯಲ್ಲಿ ಸರ್ಕಾರ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

## ಡೇಟಾ ಸೆಂಟರ್ ಸೇವೆ ಎರಡು ದಿನ ಬಂದ್

ಬೆಂಗಳೂರು

ರಾಜ್ಯ ಸರ್ಕಾರದ ವಿವಿಧ ಇಲಾಖೆಗಳ ಡಿಜಿಟಲ್ ಸೇವೆಗಳಿಗೆ ಕೇಂದ್ರಬಿಂದುವಾಗಿರುವ ರಾಜ್ಯ ಡೇಟಾ ಸೆಂಟರ್‌ನಲ್ಲಿ ಮಹತ್ವದ ತಾಂತ್ರಿಕ ನಿರ್ವಹಣೆ ಮೂಲಸೌಕರ್ಯ ನವೀಕರಣ ಹಾಗೂ ಭದ್ರತಾ ಸುಧಾರಣೆ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿರುವ ಹಿನ್ನೆಲೆಯಲ್ಲಿ, ಮುಂದಿನ ಎರಡು ದಿನಗಳ ಕಾಲ ಡೇಟಾ ಸೆಂಟರ್ ಸೇವೆಗಳು ತಾತ್ಕಾಲಿಕವಾಗಿ ಸ್ಥಗಿತಗೊಳ್ಳಲಿವೆ ಎಂದು ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಇ-ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ರಾಜ್ಯ ಸರ್ಕಾರದ ಅನೇಕ ಇಲಾಖೆಗಳ ವೆಬ್ ಪೋರ್ಟಲ್‌ಗಳು, ನಾಗರಿಕ ಸೇವಾ ವ್ಯವಸ್ಥೆಗಳು, ವಿವಿಧ ಪ್ರಮಾಣಪತ್ರಗಳಿಗೆ ಸಂಬಂಧಿಸಿದ ಆನ್‌ಲೈನ್ ಸೇವೆಗಳು, ಇ-ಆಫೀಸ್ ವ್ಯವಸ್ಥೆಗಳು, ಇಲಾಖೆಗಳ ಡಿಜಿಟಲ್ ಡೇಟಾಬೇಸ್‌ಗಳು ಸೇರಿದಂತೆ ಹಲವು ತಂತ್ರಜ್ಞಾನ ಆಧಾರಿತ ಸರ್ಕಾರಿ ಸೇವೆಗಳು ಈ ಡಾಟಾ ಸೆಂಟರ್ ಮೂಲಕ ಕಾರ್ಯನಿರ್ವಹಿಸುತ್ತಿವೆ. ಈ ಹಿನ್ನೆಲೆಯಲ್ಲಿ ನಿರ್ವಹಣಾ ಕಾರ್ಯ ನಡೆಯುವ ಅವಧಿಯಲ್ಲಿ ಕೆಲವು ಸೇವೆಗಳ ಲಭ್ಯತೆಯಲ್ಲಿ ತಾತ್ಕಾಲಿಕ ವ್ಯತ್ಯಯ ಉಂಟಾಗುವ ಸಾಧ್ಯತೆ ಇದೆ ಎಂದು ಸಚಿವರು ವಿವರಿಸಿದ್ದಾರೆ.

ರಾಜ್ಯದ ಡಿಜಿಟಲ್ ಆಡಳಿತ ವ್ಯವಸ್ಥೆಯನ್ನು ಇನ್ನಷ್ಟು ಬಲಿಷ್ಠ, ಸುರಕ್ಷಿತ ಹಾಗೂ ಹೆಚ್ಚಿನ ಸಾಮರ್ಥ್ಯ ತುಂಬಲು ಈ ನಿರ್ವಹಣಾ ಕಾರ್ಯ ಕೈಗೊಳ್ಳಲಾಗುತ್ತಿದೆ. ಭವಿಷ್ಯದಲ್ಲಿ ನಾಗರಿಕರಿಗೆ ಇನ್ನಷ್ಟು ವೇಗವಾಗಿ, ಯಾವುದೇ ತಾಂತ್ರಿಕ ಅಡಚಣೆಗಳಿಲ್ಲದೆ ಮತ್ತು ಸುರಕ್ಷಿತ ರೀತಿಯಲ್ಲಿ ಸರ್ಕಾರಿ ಸೇವೆಗಳನ್ನು ಒದಗಿಸುವ ಉದ್ದೇಶದಿಂದ ಈ ಅಪ್‌ಗ್ರೇಡ್ ಅತ್ಯಂತ ಅಗತ್ಯ ಎಂದು ಸಚಿವರು ಹೇಳಿದ್ದಾರೆ.

ಇತ್ತೀಚಿನ ವರ್ಷಗಳಲ್ಲಿ ರಾಜ್ಯದಲ್ಲಿ ಡಿಜಿಟಲ್ ಸೇವೆಗಳ ಬಳಕೆ ಗಣನೀಯವಾಗಿ ಹೆಚ್ಚಾಗಿದೆ. ಇದರಿಂದ ಡೇಟಾ ಸಂಸ್ಕರಣಾ ಸಾಮರ್ಥ್ಯ, ಸೈಬರ್ ಭದ್ರತೆ, ಸರ್ವರ್ ಕಾರ್ಯಕ್ಷಮತೆ ಹಾಗೂ ಸೇವೆಗಳ ಸ್ಥಿರತೆಯನ್ನು ಇನ್ನಷ್ಟು ಸುಧಾರಿಸುವ ಅಗತ್ಯ ಎದುರಾಗಿದೆ. ಇದೇ ಕಾರಣಕ್ಕೆ ತಜ್ಞರ ಸಲಹೆ ಮೇರೆಗೆ ಈ ನಿರ್ವಹಣಾ ಕಾರ್ಯವನ್ನು ಕೈಗೊಳ್ಳಲಾಗುತ್ತಿದೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ.

ಈ ಎರಡು ದಿನಗಳ ಅವಧಿಯಲ್ಲಿ ಸಾರ್ವಜನಿಕರು ಸರ್ಕಾರಿ ಆನ್‌ಲೈನ್ ಸೇವೆಗಳನ್ನು ಬಳಸುವಾಗ ಕೆಲವು ತಾತ್ಕಾಲಿಕ ಅಡಚಣೆಗಳನ್ನು ಎದುರಿಸಬೇಕಾಗಬಹುದು, ಸಾರ್ವಜನಿಕರಿಗೆ ಹೆಚ್ಚಿನ ತೊಂದರೆಯಾಗಬಾರದೆಂದು ರಜಾ ದಿನಗಳಲ್ಲಿ ನಿರ್ಮಾಣ ಕಾರ್ಯವನ್ನು ಕೈಗೆತ್ತಿಕೊಳ್ಳಲಾಗಿದೆ.

## ಸಿವಿಲ್ ಕಾಮಗಾರಿ ಒಂದು ತಿಂಗಳೊಳಗೆ ಮುಗಿಸಲು ಆಯುಕ್ತರ ಸೂಚನೆ

ಬೆಂಗಳೂರು

ಬೆಂಗಳೂರು ಪಶ್ಚಿಮ ನಗರ ಪಾಲಿಕೆ ಆಯುಕ್ತರಾದ ಡಾ. ರಾಜೇಂದ್ರ ಕೆ.ವಿ. ರವರು, ಪಶ್ಚಿಮ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಮುಖ್ಯಮಂತ್ರಿಗಳ ಮೂಲಸೌಕರ್ಯ ಅಭಿವೃದ್ಧಿ ಯೋಜನೆ (ಸಿಎಂಐಡಿಪಿ) ಹಾಗೂ ಕ್ಯಾಪಿಟಲ್ ಸಪೋರ್ಟ್ ಫಾರ್ ಸ್ಪೆಷಲ್ ಇನ್ಫ್ರಾಸ್ಟಕ್ಚರ್ ಪ್ರಾಜೆಕ್ಟ್ (ಸಿಎಸ್‌ಎಸ್‌ಐಪಿ) ಸಂಬಂಧಿತ ಕಾಮಗಾರಿಗಳ ಪ್ರಗತಿ ಕುರಿತು ಕಾಮಗಾರಿ ಇಲಾಖೆ ಅಧಿಕಾರಿಗಳು ಹಾಗೂ ಗುತ್ತಿಗೆದಾರರೊಂದಿಗೆ ಪರಿಶೀಲನೆ ಸಭೆ ನಡೆಸಿದರು.

ಪಶ್ಚಿಮ ನಗರ ಪಾಲಿಕೆಯ ಎಲ್ಲ ವಿಭಾಗಗಳ ವ್ಯಾಪ್ತಿಯಲ್ಲಿನ ಸಿಎಂಐಡಿಪಿ (ವಾರ್ಡ್ ರಸ್ತೆಗಳು) ಹಾಗೂ ಸಿಎಸ್‌ಎಸ್‌ಐಪಿ (ಆರ್ಟೀರಿಯಲ್, ಸಬ್ ಆರ್ಟೀರಿಯಲ್ ರಸ್ತೆಗಳು) ಕಾಮಗಾರಿಗಳ ಪ್ರಗತಿ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದ ಆಯುಕ್ತರು, ಒಂದು ತಿಂಗಳ ಒಳಗೆ ಎಲ್ಲ ಪಾದಚಾರಿ ಮಾರ್ಗ, ಡ್ರೇನ್ ಸೇರಿದಂತೆ ಎಲ್ಲ ಸಿವಿಲ್ ಕೆಲಸಗಳನ್ನು ಮುಗಿಸುವಂತೆ ಸೂಚಿಸಿದರು. ಡ್ರೇನ್‌ಗಳ ಹೂಳೆತ್ತುವಿಕೆ, ಕರ್ಬ್ ಮತ್ತು ಪಾದಚಾರಿ ಮಾರ್ಗಗಳ ಸರಿಪಡಿಸುವಿಕೆ ಇತ್ಯಾದಿ ಎಲ್ಲ ಕೆಲಸಗಳು ಶೇ.100ರಷ್ಟು ಪೂರ್ಣಗೊಳ್ಳಬೇಕು ಎಂದರು.

ಎಲ್ಲ ಸಿಎಂಐಡಿಪಿ ಸಿವಿಲ್ ಕಾಮಗಾರಿಗಳನ್ನು ಪರಿಶೀಲಿಸಿ ವರದಿ ಸಲ್ಲಿಸುವಂತೆ ಅಪರ ಆಯುಕ್ತರಿಗೆ ಆಯುಕ್ತರು ಸೂಚಿಸಿದರು.

ರಸ್ತೆಗಳ ಡಾಮರೀಕರಣಕ್ಕೆ ಮುನ್ನ ರಸ್ತೆ ಗುಂಡಿ ಮುಚ್ಚುವಿಕೆ ಕಾಮಗಾರಿ ಪೂರ್ಣಗೊಳ್ಳಬೇಕು. ಪಾದಚಾರಿ ಮಾರ್ಗಗಳು ವ್ಯವಸ್ಥಿತವಾಗಿರಬೇಕು. ಮರಗಳ ಬುಡದ ಸುತ್ತ ಗ್ರಾಸ್ ಪೇವರ್ಸ್ ಅಳವಡಿಸಬೇಕು.

ಮರಗಳು ಮುರಿದು ಬೊಡ್ಡೆಗಳು ಉಳಿದುಕೊಂಡಿದ್ದಲ್ಲಿ ಅವುಗಳನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳಬೇಕು. ಡ್ರೇನ್‌ಗಳ ಹೂಳೆತ್ತುವಿಕೆ ಆಗಿರುವ ಬಗ್ಗೆ ಹಾಗೂ ಪಾದಚಾರಿ ಮಾರ್ಗಗಳಿಗೆ ಸಂಬಂಧಿಸಿದಂತೆ ಒತ್ತುವರಿ ಇತ್ಯಾದಿ ಅನಪೇಕ್ಷಿತ ಸಂಗತಿಗಳು ಇರದಂತೆ ಸಂಬಂಧಿತ ಸಹಾಯಕ ಕಾರ್ಯಪಾಲಕ ಅಭಿಯಂತರರು ಹಾಗೂ ಕಿರಿಯ ಅಭಿಯಂತರರು ಖಚಿತಪಡಿಸಿಕೊಳ್ಳಬೇಕು. ಎಸ್‌ಐಪಿ ರಸ್ತೆಗಳ ಪಾದಚಾರಿ ಮಾರ್ಗಗಳು ವ್ಯವಸ್ಥಿತವಾಗಿರುವಂತೆ ಕಾರ್ಯಪಾಲಕ ಅಭಿಯಂತರರು ಖಚಿತಪಡಿಸಿಕೊಳ್ಳಬೇಕು ಎಂದರು.

ಗುತ್ತಿಗೆದಾರರು ಮಾನವ ಸಂಪನ್ಮೂಲವನ್ನು ಸಮರ್ಪಕವಾಗಿ ಹಂಚಿಕೆ ಮಾಡಿ, ಗುಣಮಟ್ಟ ಕಾಯ್ದುಕೊಂಡು ಕೆಲಸ ಮುಗಿಸಬೇಕು. ಕಾಮಗಾರಿ ಬಗ್ಗೆ ಒಪ್ಪಂದಕ್ಕೆ ಬಂದ ಬಳಿಕ ಗುತ್ತಿಗೆದಾರರೂ ಉತ್ತಮ ರಸ್ತೆ ಹಾಗೂ ಸಂಬಂಧಿತ ವ್ಯವಸ್ಥೆಗಳಿಗೆ ಜವಾಬ್ದಾರರಾಗುತ್ತಾರೆ. ವಾರ್ಡ್ ರಸ್ತೆಗಳಿಗೆ ಸಂಬಂಧಿಸಿದಂತೆ ಮನೆಗಳಿಂದ ದೂರುಗಳು ಇಲ್ಲದ ರೀತಿಯಲ್ಲಿ ಕೆಲಸ ಮಾಡಿ. ಜನರು ರಸ್ತೆ ಪಾದಚಾರಿ ಮಾರ್ಗ ಬಿಟ್ಟು ರಸ್ತೆಯಲ್ಲಿ ಓಡಾಡದ ರೀತಿಯಲ್ಲಿ ಪಾದಚಾರಿ ಮಾರ್ಗಗಳು ಸಮರ್ಪಕವಾಗಿರಲಿ. ಎಸ್‌ಐಪಿ ರಸ್ತೆಗಳಲ್ಲಿ ಸಮರ್ಪಕ ಪಾದಚಾರಿ ಮಾರ್ಗಗಳು, ಲೇನ್ ಮಾರ್ಕಿಂಗ್ ಸೇರಿದಂತೆ ಎಲ್ಲ ರಸ್ತೆ ಸುರಕ್ಷಾ ಕ್ರಮಗಳನ್ನು ಖಚಿತಪಡಿಸಿಕೊಳ್ಳಿ ಎಂದು ಸೂಚಿಸಿದರು.

## ‘5 ಲಕ್ಷ ಸಸಿ ನಾಟಿ ಗುರಿ’




ಬೆಂಗಳೂರು

ಜಿಲ್ಲೆಯಲ್ಲಿ ಕುಸಿಯುತ್ತಿರುವ ಅಂತರ್ಜಲ ಮಟ್ಟ, ಮಳೆಯ ಕೊರತೆ ಹಾಗೂ ನೀರಿನ ಬವಣೆ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಅಮೃತ ವನ (ಮಿಯವಾಕಿ) ಮಾದರಿಯ ಅರಣ್ಯ ನಿರ್ಮಾಣಕ್ಕೆ ಆದ್ಯತೆ ನೀಡಲಾಗುತ್ತಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ರಾಮಲಿಂಗೇಗೌಡ ಹೇಳಿದರು.

ನಗರದ ಹೊರವಲಯದ ಕೆ.ವಿ. ಕ್ಯಾಂಪಸ್‌ನಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ ಹಾಗೂ ಕೆ.ವಿ. ಮತ್ತು ಪಂಚಗಿರಿ ವಿದ್ಯಾಸಂಸ್ಥೆಗಳ ಸಂಯುಕ್ತ ಆಶ್ರಯದಲ್ಲಿ ನಡೆದ ಸ್ವಯಂಪ್ರೇರಿತ ಸಸಿ ನೆಡುವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಜಿಲ್ಲೆಯ ಹಲವು ಭಾಗಗಳಲ್ಲಿ ಅಂತರ್ಜಲ ಮಟ್ಟ ಸಾವಿರ ಅಡಿಗಿಂತಲೂ ಕೆಳಗೆ ಕುಸಿದಿರುವುದು ಗಂಭೀರ ಸಮಸ್ಯೆಯಾಗಿದ್ದು, ಇದರಿಂದ ರೈತರು, ಗ್ರಾಮೀಣ ಹಾಗೂ ನಗರ ಪ್ರದೇಶದ ಜನರು ಕುಡಿಯುವ ನೀರಿನ ತೊಂದರೆ ಎದುರಿಸುತ್ತಿದ್ದಾರೆ ಎಂದು ಅವರು ಹೇಳಿದರು. ಪರಿಸರ ಸಂರಕ್ಷಣೆ ಮತ್ತು ಮಳೆಯ ಪ್ರಮಾಣ ಹೆಚ್ಚಿಸುವ ನಿಟ್ಟಿನಲ್ಲಿ ವೇಗವಾಗಿ ಬೆಳೆಯುವ ಮಿಯವಾಕಿ ಮಾದರಿಯ ಅರಣ್ಯೀಕರಣ ಅತ್ಯಂತ ಪರಿಣಾಮಕಾರಿ ಕ್ರಮವಾಗಿದೆ ಎಂದು ಅಭಿಪ್ರಾಯಪಟ್ಟರು.

ಮರಗಳು ಪರಿಸರ ಸಮತೋಲನ ಕಾಪಾಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ. ದೊಡ್ಡ ಪ್ರಮಾಣದಲ್ಲಿ ಸಸಿಗಳನ್ನು ನೆಟ್ಟು ಅವುಗಳನ್ನು ಸರಿಯಾಗಿ ಪೋಷಿಸಿದರೆ ಭವಿಷ್ಯದಲ್ಲಿ ನೀರಿನ ಬಿಕ್ಕಟ್ಟು ತಗ್ಗಿಸುವ ಜೊತೆಗೆ ಹಸಿರು ವಾತಾವರಣ ನಿರ್ಮಾಣಕ್ಕೂ ಸಹಕಾರಿಯಾಗುತ್ತದೆ ಎಂದು ಅವರು ತಿಳಿಸಿದರು.

ಕೆ.ವಿ. ಮತ್ತು ಪಂಚಗಿರಿ ದತ್ತಿಗಳ ಅಧ್ಯಕ್ಷ ಕೆ.ವಿ. ನವೀನ್ ಕಿರಣ್ ಮಾತನಾಡಿ, ರಾಜ್ಯ ಕಾನೂನು ಸೇವಾ ಪ್ರಾಧಿಕಾರ ರಾಜ್ಯಾದ್ಯಂತ 5 ಕೋಟಿ ಸಸಿಗಳನ್ನು ನೆಡುವ ಅಭಿಯಾನ ಹಮ್ಮಿಕೊಂಡಿದ್ದು, ಅದರ ಭಾಗವಾಗಿ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ 5 ಲಕ್ಷ ಸಸಿಗಳನ್ನು ನೆಡುವ ಯೋಜನೆ ಕೈಗೊಳ್ಳಲಾಗಿದೆ ಎಂದು ಹೇಳಿದರು. ಈ ಸಸಿಗಳನ್ನು ಮೂರು ವರ್ಷಗಳ ಕಾಲ ಸಮರ್ಪಕವಾಗಿ ಪೋಷಿಸಿದರೆ ದಟ್ಟವಾದ ಅರಣ್ಯ ನಿರ್ಮಾಣ ಸಾಧ್ಯವಾಗುತ್ತದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಅಭಿಲಾಶ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ನ್ಯಾ. ಬಿ. ಶಿಲ್ಪ, ಶಿಕ್ಷಕ ಗುಂಪುಮರದ ಆನಂದ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಜೂ. 28 ಪೋಲಿಯೋ ಭಾನುವಾರ; 1,86,831 ಮಕ್ಕಳಿಗೆ ಲಸಿಕೆ ಗುರಿ

ಬೆಂಗಳೂರು

ಇದೇ 28ರಂದು ಭಾನುವಾರ ನಡೆಯಲಿರುವ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದಲ್ಲಿ ತುಮಕೂರು ಜಿಲ್ಲೆಯ 5 ವರ್ಷದೊಳಗಿನ 1,86,831 ಮಕ್ಕಳಿಗೆ ಲಸಿಕೆ ಹಾಕುವ ಕಾರ್ಯಕ್ರಮ ಯೋಜಿಸಿರುವುದಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ|| ಬಿ.ಎಂ. ಚಂದ್ರಶೇಖರ್ ತಿಳಿಸಿದ್ದಾರೆ.

ಬುಧವಾರ ತಮ್ಮ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಅವರು, ತುಮಕೂರು ಜಿಲ್ಲೆಯಲ್ಲಿ ಈಗಾಗಲೇ ಪೋಲಿಯೋ ನಿವಾರಣೆಯಾಗಿದೆ. ಆದರೂ ಮುನ್ನೆಚ್ಚರಿಕೆ ಕ್ರಮವಾಗಿ ದೇಶಾದ್ಯಂತ ಜೂನ್ 28ರಂದು ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ ನಡೆಯುತ್ತಿದ್ದು, ತುಮಕೂರು ಜಿಲ್ಲೆಯಲ್ಲಿ ಆಂದೋಲನ ರೂಪದಲ್ಲಿ ಕಾರ್ಯಕ್ರಮ ರೂಪಿಸಿರುವುದಾಗಿ ಅವರು ತಿಳಿಸಿದರು.

5 ವರ್ಷದೊಳಗಿನ 1,86,831 ಮಕ್ಕಳನ್ನು ಗುರುತಿಸಲಾಗಿದ್ದು, 1219 ಲಸಿಕಾ ಕೇಂದ್ರಗಳು ಹಾಗೂ 60 ಟ್ರಾನ್ಸಿಟ್ ಕೇಂದ್ರಗಳಲ್ಲಿ 5,122 ಲಸಿಕಾ ಸಿಬ್ಬಂದಿಯನ್ನು ನೇಮಿಸಲಾಗಿದೆ. ಅಲ್ಲದೆ, 265 ಮೇಲ್ವಿಚಾರಕರನ್ನು ಲಸಿಕಾ ಕಾರ್ಯಕ್ರಮಕ್ಕೆ ನೇಮಿಸಿರುವುದಾಗಿ ಅವರು ತಿಳಿಸಿದರು.

ಜಿಲ್ಲೆಯಾದ್ಯಂತ ಜೂನ್ 28ರಂದು ಲಸಿಕಾ ಭಾನುವಾರವಾಗಿದ್ದು, ಎಲ್ಲಾ ಕೇಂದ್ರಗಳಲ್ಲಿ ಪಲ್ಸ್ ಪೋಲಿಯೋ ಲಸಿಕೆ ಹಾಕಲಾಗುತ್ತದೆ. ನಂತರ ಗ್ರಾಮಾಂತರ ಪ್ರದೇಶದಲ್ಲಿ ಹೆಚ್ಚುವರಿಯಾಗಿ 2 ದಿನ ಹಾಗೂ ನಗರ ಪ್ರದೇಶದಲ್ಲಿ 3 ದಿನಗಳ ಕಾಲ ಮನೆ-ಮನೆಗೆ ಭೇಟಿ ನೀಡಿ ಯಾವ ಮಕ್ಕಳು ಬಿಟ್ಟು ಹೋಗದಂತೆ ಲಸಿಕೆ ನೀಡುವ ಯೋಜನೆಯನ್ನು ರೂಪಿಸಿರುವುದಾಗಿ ಅವರು ತಿಳಿಸಿದರು.

ಲಸಿಕಾ ಕಾರ್ಯಕ್ರಮ ಇರುವ ಮಾಹಿತಿಯನ್ನು ಸಾರ್ವಜನಿಕ ಶಿಕ್ಷಣ ಇಲಾಖೆ ಮೂಲಕ ಮುನ್ನಾ ದಿನ ಶನಿವಾರ ವ್ಯಾಪಕ ಜಾಥಾ ಹಾಗೂ ಪ್ರಾರ್ಥನಾ ಸಭೆಯಲ್ಲಿ ಶಾಲಾ ಅವಧಿಯಲ್ಲಿ ಮಾಹಿತಿಯನ್ನು ನೀಡುವ ಕಾರ್ಯಕ್ರಮವನ್ನು ರೂಪಿಸಲಾಗಿದೆ. ಅಲ್ಲದೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮೂಲಕ ಅಂಗನವಾಡಿ ಕಾರ್ಯಕರ್ತೆಯರ ಮೂಲಕ ವಿವಿಧ ಪ್ರಚಾರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಅಲ್ಲದೆ, ಮಹಾನಗರಪಾಲಿಕೆ, ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲೂ ವ್ಯಾಪಕ ಪ್ರಚಾರ ಹಾಗೂ ಕಾರ್ಯಕ್ರಮಕ್ಕಾಗಿ ವಿಶೇಷ ವ್ಯವಸ್ಥೆಗಳನ್ನು ರೂಪಿಸಲಾಗಿದೆ ಎಂದರು. ಬೆಸ್ಕಾಂ ವತಿಯಿಂದ ಲಸಿಕೆ ಶೇಖರಣೆ ಶೀಥಲೀಕರಣ ಘಟಕ ನಿರಂತರವಾಗಿ ಕಾರ್ಯನಿರ್ವಹಿಸಬೇಕಿರುವುದರಿಂದ ನಿರಂತರ ವಿದ್ಯುತ್ ವ್ಯವಸ್ಥೆಗೆ ಈಗಾಗಲೇ ಜಿಲ್ಲಾಧಿಕಾರಿಗಳು ಇಲಾಖೆಗೆ ಸೂಚನೆ ನೀಡಿದ್ದಾರೆ. ಅಲ್ಲದೆ, ಸಾರಿಗೆ, ಕಾರ್ಮಿಕ ಇಲಾಖೆ ಹಾಗೂ ರೋಟರಿ ಸಂಸ್ಥೆ ಸೇರಿದಂತೆ ಸ್ವಯಂ ಸೇವಾ ಸಂಸ್ಥೆಗಳು ಕಾರ್ಯಕ್ರಮದ ಯಶಸ್ಸಿಗೆ ಸಹಕರಿಸಲಿದ್ದಾರೆ ಎಂದು ಅವರು ತಿಳಿಸಿದರು.



ಮಾರಿಷಸ್ ದೇಶದಲ್ಲಿ ನಡೆಯಲಿರುವ ಮೂರು ದಿನದ ವಿಶ್ವ ಧಾರ್ಮಿಕ ನಾಯಕರ ಸಮಾವೇಶದಲ್ಲಿ ಪಾಲ್ಗೊಳ್ಳಲು, ಪೂಜ್ಯ ಶ್ರೀ ಪುತ್ತಿಗೆ ಶ್ರೀಗಳು ಆಗಮಿಸಿದಾಗ, ಮಾರಿಷಸ್ ದೇಶದ ಅಧ್ಯಕ್ಷರಾದ ಧರಮ್ ಬೀರ್ ಗೋಕುಲ್ ಅವರು ಹೃತ್ಪೂರ್ವಕವಾಗಿ ಸ್ವಾಗತಿಸಿದರು. ಸುಮಾರು ಎಂಬತ್ತಕ್ಕೂ ಅಧಿಕ ದೇಶಗಳಿಂದ ಆಗಮಿಸಿರುವ ಧಾರ್ಮಿಕ ಮತ್ತು ಸಾಮಾಜಿಕ ಸೇವಾ ಸಂಸ್ಥೆಗಳ ನಾಯಕರ ಸಮ್ಮುಖದಲ್ಲಿ ನಾಳೆಯ ದಿನ, ವಿಶ್ವದ ಸಮಕಾಲೀನ ಸವಾಲುಗಳೆನಿಸಿರುವ "ಹವಾಮಾನ ವೈಪರಿತ್ಯ, ಸಂಘರ್ಷ ಮತ್ತು ಋಣಭಾರ" ಎಂಬ ವಿಷಯದಲ್ಲಿ ಪೂಜ್ಯ ಶ್ರೀ ಪುತ್ತಿಗೆ ಶ್ರೀಗಳು ದಿಕ್ಸೂಚಿ ಭಾಷಣದಲ್ಲಿ ಮಾತನಾಡಲಿರುವರು.

## ಚಿಂತಾಮಣಿಯಲ್ಲಿ ನಕಲಿ ಕ್ಲಿನಿಕ್ ಪತ್ತೆ



ಬೆಂಗಳೂರು

ತಾಲೂಕಿನ ಬಟ್ಲಹಳ್ಳಿ ಗ್ರಾಮದಲ್ಲಿ ಯಾವುದೇ ವೈದ್ಯಕೀಯ ವಿದ್ಯಾರ್ಹತೆ ಇಲ್ಲದೆ ಸಾರ್ವಜನಿಕರಿಗೆ ಚಿಕಿತ್ಸೆ ನೀಡುತ್ತಿದ್ದ ಹಾಗೂ ಗರ್ಭಿಣಿಯರಿಗೆ ಅಬಾರ್ಶನ್ ಮಾತ್ರೆಗಳನ್ನು ನೀಡುತ್ತಿದ್ದ ಆರೋಪದ ಮೇಲೆ ಆರೋಗ್ಯ ಇಲಾಖೆ ಅಧಿಕಾರಿಗಳು ದಾಳಿ ನಡೆಸಿ ನಕಲಿ ಕ್ಲಿನಿಕ್‌ಗೆ ಬೀಗ ಜಡಿಸಿರುವ ಘಟನೆ ನಡೆದಿದೆ.

ಬಿ.ನಾರಾಯಣರೆಡ್ಡಿ (54) ಎಂಬವರು ವೈದ್ಯಕೀಯ ಅರ್ಹತೆ ಇಲ್ಲದೇ ಚಿಕಿತ್ಸೆ ನೀಡುತ್ತಿದ್ದರೆಂದು ಆರೋಪಿಸಲಾಗಿದೆ. ಗರ್ಭಿಣಿ ಮಹಿಳೆಯೊಬ್ಬರು ಚಿಂತಾಮಣಿಯ ತಾಯಿ ಮಕ್ಕಳ ಆಸ್ಪತ್ರೆಯಲ್ಲಿ ದಾಖಲಾದ ಸಂದರ್ಭದಲ್ಲಿ, ಆರೋಪಿತರು ಅಬಾರ್ಶನ್‌ಗೆ ಸಂಬಂಧಿಸಿದ ಮಾತ್ರೆಗಳನ್ನು ನೀಡಿದ್ದ ಮಾಹಿತಿ ಆಧಾರವಾಗಿ ಈ ದಾಳಿ ನಡೆದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಮಂಗಳವಾರ ಬೆಳಗ್ಗೆ ಸುಮಾರು 10.50 ಗಂಟೆಗೆ ಬಟ್ಲಹಳ್ಳಿ ಗ್ರಾಮದಲ್ಲಿರುವ ನಾರಾಯಣರೆಡ್ಡಿ ಅವರ ನಿವಾಸದ ಮೇಲೆ ದಾಳಿ ನಡೆಸಿದ ಆರೋಗ್ಯ ಇಲಾಖೆ ಅಧಿಕಾರಿಗಳು ಪರಿಶೀಲನೆ ನಡೆಸಿದಾಗ ರೋಗಿಗಳಿಗೆ ಬಳಸಲಾಗುತ್ತಿದ್ದ ಸೂಜಿ, ಸಿರಿಂಜ್, ಗ್ಲೂಕೋಸ್ ಬಾಟಲಿಗಳು ಹಾಗೂ ವಿವಿಧ ಔಷಧಿಗಳನ್ನು ಪತ್ತೆಹಚ್ಚಿ ವಶಪಡಿಸಿಕೊಂಡಿದ್ದಾರೆ.

ಈ ಸಂಬಂಧ ಆರೋಪಿ ಬಿ. ನಾರಾಯಣರೆಡ್ಡಿ ವಿರುದ್ಧ ಪ್ರಕರಣ ದಾಖಲಿಸಲಾಗಿದ್ದು, ಮುಂದಿನ ಕ್ರಮಕ್ಕಾಗಿ ಜಿಲ್ಲಾಧಿಕಾರಿಗಳ ನ್ಯಾಯಾಲಯಕ್ಕೆ ವರದಿ ಸಲ್ಲಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಪ್ರತೀ ಶುಕ್ರವಾರ ಫೋನ್-ಇನ್ ಕಾರ್ಯಕ್ರಮ

ಬೆಂಗಳೂರು

ಉತ್ತರ ನಗರ ಪಾಲಿಕೆ ವ್ಯಾಪ್ತಿಯ ಸಾರ್ವಜನಿಕ ಅಹವಾಲುಗಳನ್ನು ನೇರವಾಗಿ ಆಲಿಸುವ ಉದ್ದೇಶದಿಂದ ಆಯುಕ್ತರಾದ ಪೊಮ್ಮಲ ಸುನೀಲ್ ಕುಮಾರ್ ಅವರು ಪ್ರತೀ ಶುಕ್ರವಾರ ಫೋನ್-ಇನ್ ಕಾರ್ಯಕ್ರಮವನ್ನು ಆರಂಭಿಸಿದ್ದಾರೆ. ಈ ಕ್ರಮದ ಮೂಲಕ ನಾಗರಿಕರು ತಮ್ಮ ದೈನಂದಿನ ಸಮಸ್ಯೆಗಳನ್ನು ನೇರವಾಗಿ ಅಧಿಕಾರಿಗಳ ಗಮನಕ್ಕೆ ತರಲು ಅವಕಾಶ ಕಲ್ಪಿಸಲಾಗಿದ್ದು, ಸಾರ್ವಜನಿಕ ಸೇವೆಯಲ್ಲಿ ವೇಗ ಮತ್ತು ಪಾರದರ್ಶಕತೆ ಹೆಚ್ಚಿಸುವ ಉದ್ದೇಶವನ್ನು ಹೊಂದಿದೆ.

ಈ ವಾರದ ಫೋನ್-ಇನ್ ಕಾರ್ಯಕ್ರಮವು 2026ರ ಜೂನ್ 26ರಂದು ಶುಕ್ರವಾರ ಬೆಳಿಗ್ಗೆ 7.00ರಿಂದ 9.00 ಗಂಟೆಯವರೆಗೆ ನಡೆಯಲಿದೆ. ಈ ಅವಧಿಯಲ್ಲಿ ನಾಗರಿಕರು ತಮ್ಮ ವಾರ್ಡ್‌ಗಳಲ್ಲಿ ಎದುರಾಗುತ್ತಿರುವ ವಿವಿಧ ಸಮಸ್ಯೆಗಳ ಕುರಿತು ನೇರವಾಗಿ ಆಯುಕ್ತರೊಂದಿಗೆ ಸಂವಾದ ನಡೆಸಬಹುದು. ರಸ್ತೆ ಗುಂಡಿಗಳ ದುರಸ್ತಿ, ಬೀದಿ ದೀಪಗಳ ನಿರ್ವಹಣೆ, ಮನೆಮನೆ ಕಸ ಸಂಗ್ರಹಣೆ ಮತ್ತು ವಿಲೇವಾರಿ ವ್ಯವಸ್ಥೆ, ಅಪಾಯಕಾರಿಯಾದ ಮರಗಳು ಹಾಗೂ ಕೊಂಬೆಗಳ ತೆರವು, ಸೊಳ್ಳೆ ನಿಯಂತ್ರಣ ಕ್ರಮಗಳು, ಬೀದಿ ನಾಯಿಗಳ ನಿಯಂತ್ರಣ, ಉದ್ಯಾನವನಗಳ ಅಭಿವೃದ್ಧಿ ಮತ್ತು ಸಂರಕ್ಷಣೆ, ಅನಧಿಕೃತ ಬ್ಯಾನರ್ ಹಾಗೂ ಪೋಸ್ಟರ್ ತೆರವು, ಪಾದಚಾರಿ ಮಾರ್ಗಗಳ ಮೇಲಿನ ಒತ್ತುವರಿ ನಿವಾರಣೆ ಹಾಗೂ ಇ-ಖಾತಾ ಸಂಬಂಧಿತ ಸಮಸ್ಯೆಗಳು ಸೇರಿದಂತೆ ಅನೇಕ ನಾಗರಿಕ ಸಮಸ್ಯೆಗಳನ್ನು ಈ ವೇದಿಕೆಯಲ್ಲಿ ಪ್ರಸ್ತಾಪಿಸಬಹುದಾಗಿದೆ.

ಈ ಫೋನ್-ಇನ್ ವ್ಯವಸ್ಥೆಯ ಪ್ರಮುಖ ಉದ್ದೇಶ ನಾಗರಿಕರ ಸಮಸ್ಯೆಗಳನ್ನು ಮಧ್ಯವರ್ತಿಗಳಿಲ್ಲದೆ ನೇರವಾಗಿ ಅಧಿಕಾರಿಗಳ ಗಮನಕ್ಕೆ ತರುವುದು. ಅನೇಕ ಬಾರಿ ಸ್ಥಳೀಯ ಮಟ್ಟದಲ್ಲಿ ದೂರುಗಳು ವಿಳಂಬವಾಗುವುದು ಅಥವಾ ಸೂಕ್ತವಾಗಿ ಪರಿಹಾರವಾಗದಿರುವುದು ಕಂಡುಬರುತ್ತದೆ. ಇಂತಹ ಸಂದರ್ಭಗಳಲ್ಲಿ ನೇರ ಸಂವಹನದ ಮೂಲಕ ತ್ವರಿತ ಪರಿಹಾರ ದೊರಕುವ ಸಾಧ್ಯತೆ ಹೆಚ್ಚುತ್ತದೆ. ನಾಗರಿಕರು ತಮ್ಮ ಸಮಸ್ಯೆಗಳನ್ನು ಸ್ಪಷ್ಟವಾಗಿ ವಿವರಿಸಲು ಈ ವೇದಿಕೆ ಸಹಾಯಕವಾಗುತ್ತದೆ.

ಫೋನ್-ಇನ್ ಕಾರ್ಯಕ್ರಮದಲ್ಲಿ ಸ್ವೀಕರಿಸಲಾದ ಎಲ್ಲಾ ಅಹವಾಲುಗಳನ್ನು ‘ಸಹಾಯ 2.0’ ಪೋರ್ಟಲ್‌ನಲ್ಲಿ ದಾಖಲಿಸಲಾಗುತ್ತದೆ. ನಂತರ ಅವುಗಳನ್ನು ಸಂಬಂಧಿಸಿದ ಇಲಾಖಾ ಅಧಿಕಾರಿಗಳಿಗೆ ತಕ್ಷಣವೇ ಕಳುಹಿಸಿ ಕ್ರಮ ಕೈಗೊಳ್ಳಲಾಗುತ್ತದೆ. ಈ ಪ್ರಕ್ರಿಯೆಯ ಮೂಲಕ ದೂರುಗಳ ನಿರ್ವಹಣೆ ವ್ಯವಸ್ಥಿತವಾಗಿ ನಡೆಯುವಂತೆ ಮಾಡಲಾಗುತ್ತಿದೆ. ಜೊತೆಗೆ ದೂರು ದಾಖಲಾದ ವಿವರಗಳು ಮತ್ತು ಸಂಬಂಧಿತ ಅಧಿಕಾರಿಗಳ ಮಾಹಿತಿಯನ್ನು ನಾಗರಿಕರಿಗೆ ಎಸ್.ಎಂ.ಎಸ್ ಮೂಲಕ ತಿಳಿಸಲಾಗುವುದು, ಇದರಿಂದ ಪಾರದರ್ಶಕತೆ ಮತ್ತು ಹೊಣೆಗಾರಿಕೆ ಹೆಚ್ಚಲಿದೆ.

ನಗರದ ವೇಗವಾದ ಬೆಳವಣಿಗೆಯ ಹಿನ್ನೆಲೆಯಲ್ಲಿ ನಾಗರಿಕ ಸೌಲಭ್ಯಗಳ ನಿರ್ವಹಣೆ ದೊಡ್ಡ ಸವಾಲಾಗಿ ಪರಿಣಮಿಸಿದೆ. ಇಂತಹ ಸಂದರ್ಭದಲ್ಲಿ ಫೋನ್-ಇನ್ ಕಾರ್ಯಕ್ರಮವು ಸಾರ್ವಜನಿಕ ಮತ್ತು ಆಡಳಿತದ ನಡುವಿನ ಅಂತರವನ್ನು ಕಡಿಮೆ ಮಾಡುವ ಮಹತ್ವದ ಹೆಜ್ಜೆಯಾಗಿದೆ. ಜನರ ಭಾಗವಹಿಸುವಿಕೆಯನ್ನು ಹೆಚ್ಚಿಸುವ ಮೂಲಕ ನಗರ ಆಡಳಿತವನ್ನು ಹೆಚ್ಚು ಪರಿಣಾಮಕಾರಿಯಾಗಿ ರೂಪಿಸುವ ಪ್ರಯತ್ನ ಇದಾಗಿದೆ.

## ಮಾವು ಬೆಳೆಗಾರರ ಸಂಕಷ್ಟ; ಕೇಂದ್ರದ ಕೃಷಿ ಸಚಿವರನ್ನು ಭೇಟಿಯಾದ ಹೆಚ್.ಡಿ.ಕುಮಾರಸ್ವಾಮಿ

ಬೆಂಗಳೂರು

ಹವಾಮಾನ ವೈಪರೀತ್ಯ ಹಾಗೂ ಬೆಲೆ ಕುಸಿತದಿಂದ ತೀವ್ರ ಸಂಕಷ್ಟಕ್ಕೆ ಗುರಿಯಾಗಿರುವ ರಾಜ್ಯದ ಮಾವು ಬೆಳೆಗಾರರ ನೆರವಿಗೆ ಧಾವಿಸುವುದಾಗಿ ಕೇಂದ್ರದ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರು ಭರವಸೆ ನೀಡಿದರು.

ನವದೆಹಲಿಯಲ್ಲಿ ಬುಧವಾರ ಸಂಜೆ ಚೌಹಾಣ್ ಅವರ ನಿವಾಸಕ್ಕೆ ತೆರಳಿ ಮಾವು ಬೆಳೆಗಾರರ ಸಂಕಷ್ಟದ ಬಗ್ಗೆ ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಅವರು ಚರ್ಚೆ ನಡೆಸಿದರು.

ಕುಮಾರಸ್ವಾಮಿ ಅವರ ಮನವಿಗೆ ಅತ್ಯಂತ ಸಕಾರಾತ್ಮಕವಾಗಿ ಸ್ಪಂದಿಸಿದ ಚೌಹಾಣ್ ಅವರು, ತಕ್ಷಣವೇ ಮಾವು ಬೆಳೆಗಾರರಿಗೆ ಅನುಕೂಲವಾಗುವ ನಿರ್ಧಾರ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಪ್ರಸಕ್ತ ಹಂಗಾಮಿನಲ್ಲಿ ರೈತರು ಎದುರಿಸುತ್ತಿರುವ ಬೆಲೆ ಕುಸಿತ ಸಂಕಷ್ಟವನ್ನು ತಗ್ಗಿಸಲು ಮಾರುಕಟ್ಟೆ ಮಧ್ಯಸ್ಥಿಕೆ ಯೋಜನೆ (ಎಂಐಎಸ್) ಮೂಲಕ ನೆರವಾಗಬೇಕು



ಹಾಗೂ ಬೆಲೆ ಕೊರತೆ ಪಾವತಿ ಯೋಜನೆ (ಪಿಡಿಪಿಎಸ್) ಅಡಿಯಲ್ಲಿ ಬೆಂಬಲ ಬೆಲೆ ನೀಡಬೇಕು ಎಂದು ಕೇಂದ್ರ ಕೃಷಿ ಸಚಿವರನ್ನು ಸಚಿವ ಕುಮಾರಸ್ವಾಮಿ ಅವರು ಕೋರಿದರು. ಕೋಲಾರ, ಚಿಕ್ಕಬಳ್ಳಾಪುರ, ರಾಮನಗರ, ಬೆಂಗಳೂರು ಗ್ರಾಮಾಂತರ, ತುಮಕೂರು, ಹಾವೇರಿ ಸೇರಿದಂತೆ ರಾಜ್ಯದ ನಾನಾ ಜಿಲ್ಲೆಗಳಲ್ಲಿ ಮಾವು ಬೆಳೆಗಾರರು ಎದುರಿಸುತ್ತಿರುವ ಸಂಕಷ್ಟದ ಬಗ್ಗೆ ಅವರು ಕೃಷಿ ಸಚಿವರಿಗೆ ವಿವರಿಸಿದರು.

ನಿರಂತರ ಬೆಲೆ ಕುಸಿತ ಮತ್ತು ಹೆಚ್ಚಾಗುತ್ತಿರುವ ಕೃಷಿ ವೆಚ್ಚಗಳಿಂದಾಗಿ ಮಾವು ಬೆಳೆಗಾರರು ಈ ವರ್ಷವೂ ಸಂಕಷ್ಟಕ್ಕೆ ತುತ್ತಾಗಿದ್ದಾರೆ. ರೈತರು ಮತ್ತು ತೋಟಗಾರಿಕೆ ಕ್ಷೇತ್ರವನ್ನು ರಕ್ಷಿಸುವ ಉದ್ದೇಶದಿಂದ ತಾವು ಈ ಬಗ್ಗೆ ಸಹಾನುಭೂತಿಯಿಂದ ಪರಿಶೀಲಿಸಿ ನಿರ್ಧಾರ ಕೈಗೊಳ್ಳಬೇಕು ಎಂದು ಕುಮಾರಸ್ವಾಮಿ ಅವರು ಮನವಿ ಮಾಡಿದರು.

ಮಾವು ಬೆಳೆಗಾರರ ಸಮಸ್ಯೆಗಳ ಬಗ್ಗೆ ಹಾಗೂ ಬೆಲೆಕುಸಿತದ ಕುರಿತಂತೆ ತಾವು ಬರೆದಿರುವ ಪತ್ರವನ್ನು ಈಗಾಗಲೇ ಗಮನಿಸಿದ್ದೇನೆ ಎಂದು ಕೈಗಾರಿಕೆ ಸಚಿವರಿಗೆ ತಿಳಿಸಿದ ಕೃಷಿ ಸಚಿವರು; ರೈತರ ನೆರವಿಗೆ ಧಾವಿಸುವ ಉತ್ತಮ ನಿರ್ಧಾರವನ್ನು ತ್ವರಿತವಾಗಿ ಕೈಗೊಳ್ಳುವದಾಗಿ ಹೇಳಿದರು.

ಕರ್ನಾಟಕವು ಅತಿಹೆಚ್ಚು ಮಾವು ಬೆಳೆಯುವ ಪ್ರಮುಖ ರಾಜ್ಯಗಳಲ್ಲಿ ಒಂದಾಗಿದೆ. ರಾಜ್ಯದಲ್ಲಿ ಸುಮಾರು 1.45 ಲಕ್ಷ ಹೆಕ್ಟೇರ್‌ಗಳಲ್ಲಿ ಮಾವು ಕೃಷಿ ಮಾಡಲಾಗುತ್ತಿದ್ದು, ಪ್ರಸಕ್ತ ಋತುವಿನಲ್ಲಿ ಸುಮಾರು 10 ಲಕ್ಷ ಮೆಟ್ರಿಕ್ ಟನ್ ಮಾವು ಬೆಳೆಯಲಾಗಿದೆ. ಆದರೆ, ಬೆಲೆ ಕುಸಿತ ಹಾಗೂ ಪ್ರತಿಕೂಲಕರ ಹವಾಮಾನದಿಂದ ರೈತರು ಸಂಕಷ್ಟಕ್ಕೆ ತುತ್ತಾಗಿದ್ದಾರೆ ಎಂದು ಸಚಿವರು ಕೃಷಿ ಸಚಿವರ ಗಮನ ಸೆಳೆದರು.

ಕರ್ನಾಟಕದ ಹಲವಾರು ಜಿಲ್ಲೆಗಳಲ್ಲಿ ಮಾವು ಅತ್ಯಂತ ಪ್ರಮುಖ ವಾಣಿಜ್ಯ ತೋಟಗಾರಿಕಾ ಬೆಳೆಯಾಗಿದೆ. ಮಾರುಕಟ್ಟೆಯ ಏರಿಳಿತಗಳು ಮತ್ತು ಅತಿಯಾದ ಪೂರೈಕೆ ಪರಿಸ್ಥಿತಿಗಳಿಂದಾಗಿ ಅನೇಕ ಬೆಳೆಗಾರರು ತಮ್ಮ ಉತ್ಪನ್ನಗಳನ್ನು ಲಾಭದಾಯಕ ಮಟ್ಟಕ್ಕಿಂತ ಕಡಿಮೆ ಬೆಲೆಗೆ ಮಾರಾಟ ಮಾಡುವ ಪರಿಸ್ಥಿತಿ ಸೃಷ್ಟಿಯಾಗಿದೆ ಎಂಬ ಅಂಶವನ್ನು ಎಂದು ಕುಮಾರಸ್ವಾಮಿ ಅವರು ಕೃಷಿ ಸಚಿವರ ಗಮನಕ್ಕೆ ತಂದರು.

ಕರ್ನಾಟಕ ಕೃಷಿ ಬೆಲೆ ಆಯೋಗದ ಅಂದಾಜಿನ ಪ್ರಕಾರ ಮಾವಿನ ಕೃಷಿಯ (ಅ-3) ವೆಚ್ಚವನ್ನು ಕ್ವಿಂಟಲ್‌ಗೆ 3,951 ಎಂದು ಅಂದಾಜಿಸಲಾಗಿದೆ. ಆದರೆ ಚಾಲ್ತಿಯಲ್ಲಿರುವ ಮಾರುಕಟ್ಟೆ ಬೆಲೆಗಳು ಈ ಮಟ್ಟಕ್ಕಿಂತ ಗಣನೀಯವಾಗಿ ಕಡಿಮೆ ಇರುವುದರಿಂದ ನೀರಾವರಿ, ಕಾರ್ಮಿಕರ ವೆಚ್ಚ ಮತ್ತು ಕೊಯ್ಲು ಕಾರ್ಯಾಚರಣೆಗಳಲ್ಲಿ ಗಣನೀಯ ವೆಚ್ಚದ ಹೊರತಾಗಿಯೂ ರೈತರು ದೊಡ್ಡ ಪ್ರಮಾಣದಲ್ಲಿ ಆರ್ಥಿಕ ನಷ್ಟಕ್ಕೆ ಒಳಗಾಗಿದ್ದಾರೆ ಎಂದು ಅವರು ಕೃಷಿ ಸಚಿವರಿಗೆ ವಿವರಿಸಿದರು.

# ಗ್ರಾಮೀಣ ಮೂಲಭೂತ ಸೌಕರ್ಯ ಕಲ್ಪಸುವುದೇ ನಮ್ಮ ಆದ್ಯತೆ : ಅಶ್ವಿಜ ಬಿ.ವಿ

ಬೆಂಗಳೂರು

ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಬುಧವಾರ ವಿಕಸಿತ ಭಾರತ – ಗ್ಯಾರಂಟಿ ಫಾರ್ ರೋಜ್‌ಗಾರ್ ಅಂಡ್ ಆಜೀವಿಕ ಮಿಷನ್(ಗ್ರಾಮೀಣ) ಯೋಜನೆಯ ಕುರಿತ ತರಬೇತಿ ಕಾರ್ಯಾಗಾರವನ್ನು ಹಮ್ಮಿಕೊಂಡಿದ್ದು, ಗಿಡಕ್ಕೆ ನೀರೆರೆಯುವುದರ ಮೂಲಕ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅಶ್ವಿಜ ಬಿ.ವಿ. ಚಾಲನೆ ನೀಡಿದರು.

ತರಬೇತಿ ಕಾರ್ಯಕ್ರಮ ಕುರಿತು ಮಾತನಾಡಿದ ಅವರು, ಜುಲೈ 01 ರಿಂದ VB G RAM G ಯೋಜನೆ ಜಾರಿಗೆ ಬರಲಿದೆ. ಈ ಹಿನ್ನೆಲೆಯಲ್ಲಿ ಸರ್ಕಾರದ ಎಲ್ಲಾ ಮಾರ್ಗಸೂಚಿಗಳನ್ವಯ ಯೋಜನೆಯನ್ನು ಜಿಲ್ಲೆಯಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನ ಮಾಡುವ ಉದ್ದೇಶದಿಂದ ಎಲ್ಲಾ ವರ್ಗದ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ ತರಬೇತಿಯನ್ನು ನೀಡಲಾಗುತ್ತಿದೆ. ಸದರಿ ತರಬೇತಿಯಲ್ಲಿ ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ಸಹಾಯಕ ನಿರ್ದೇಶಕರು, ಆಡಳಿತ ಅಧಿಕಾರಿಗಳು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಹಾಗೂ ತಾಂತ್ರಿಕ ಸಿಬ್ಬಂದಿ ಹಾಜರಾಗಿದ್ದು, ತರಬೇತಿಯ ಎಲ್ಲಾ ಅಂಶಗಳನ್ನು ತಿಳಿದುಕೊಳ್ಳಬೇಕು ಎಂದರು.

ಜಿಲ್ಲೆಯಲ್ಲಿ ವಿಕಸಿತ ಭಾರತ– ಗ್ಯಾರಂಟಿ ಫಾರ್ ರೋಜ್‌ಗಾರ್ ಅಂಡ್ ಆಜೀವಿಕ ಮಿಷನ್ (ಗ್ರಾಮೀಣ) ಯೋಜನೆಯನ್ನು ಯಶಸ್ವಿಯಾಗಿ ಅನುಷ್ಠಾನ ಮಾಡುವ ಉದ್ದೇಶದಿಂದ ಈಗಾಗಲೇ ಎಲ್ಲಾ ರೂಪುರೇಷೆಗಳನ್ನು ಸಿದ್ಧ ಮಾಡಿಕೊಳ್ಳಲಾಗುತ್ತಿದ್ದು, ಗ್ರಾಮೀಣ ಜನರಿಗೆ ಉದ್ಯೋಗ ಕಲ್ಪಿಸುವುದರ ಜೊತೆಗೆ ಮೂಲಭೂತ ಸೌಕರ್ಯ ಅಭಿವೃದ್ಧಿ ಕಾಮಗಾರಿಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಲಾಗುವುದು ಎಂದರು.

ಮೈಸೂರಿನ ಅಬ್ದುಲ್ ನಜೀರ್ ಸಾಬ್ ಮಾತನಾಡಿ, ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯಿಂದ ತರಬೇತಿ ಪಡೆದ ನಾಲ್ಕು ಜನ ಮಾಸ್ಟರ್ ಟ್ರೈನರ್‌ಗಳಿಂದ ತರಬೇತಿ ನೀಡಲಾಗುತ್ತಿದ್ದು, ಯೋಜನೆಯ ಕುರಿತ ಹಾಗೂ ಅನುಷ್ಠಾನದ ಕುರಿತ ಎಲ್ಲಾ ಅಂಶಗಳನ್ನು ಹಾಗೂ ಮಾಹಿತಿಯನ್ನು ಅನುಷ್ಠಾನಾಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ತಿಳಿಸಲಾಗುವುದು ಎಂದರು.

ಜುಲೈ 1 ರಿಂದ ಆರಂಭವಾಗುತ್ತಿರುವ **VB G RAM G** ಯೋಜನೆಯಲ್ಲಿ ಒಂದು ಅರ್ಹ ಗ್ರಾಮೀಣ ಕುಟುಂಬಕ್ಕೆ ಒಂದು ಆರ್ಥಿಕ ವರ್ಷದಲ್ಲಿ 125 ದಿನಗಳ ಉದ್ಯೋಗ ಕಲ್ಪಿಸಲಾಗುವುದು. ಈ ಯೋಜನೆಯು ಭಾರತ ಸರ್ಕಾರದ ಒಂದು ಮಹತ್ವಾಕಾಂಕ್ಷೆಯ ದೃಷ್ಟಿಕೋನವಾಗಿದ್ದು, ಸ್ವಾತಂತ್ರ್ಯದ 100 ವರ್ಷಗಳ ನೆನಪಿಗಾಗಿ 2047ರ ವೇಳೆಗೆ ಭಾರತವನ್ನು ಸಂಪೂರ್ಣ ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡುವ ಗುರಿಯನ್ನು ಹೊಂದಿದೆ. ಈ ಉಪಕ್ರಮವು ಎಲ್ಲರನ್ನೂ ಒಳಗೊಂಡ ಬೆಳವಣಿಗೆ, ನಾವೀನ್ಯತೆ, ಸುಸ್ಥಿರತೆ ಮತ್ತು ಉತ್ತಮ ಆಡಳಿತಕ್ಕೆ ಒತ್ತು ನೀಡುತ್ತದೆ, ಸಮಾಜದ ಎಲ್ಲಾ ವರ್ಗಗಳಿಗೂ ಸಮೃದ್ಧಿಯನ್ನು ಖಚಿತಪಡಿಸುತ್ತದೆ ಎಂದರು.

# ಜನ ಸಂಪರ್ಕ ಸಭೆ ಯಶಸ್ವಿ

ಬೆಂಗಳೂರು

ಪಟ್ಟಣದ ತಾಲ್ಲೂಕು ಕಚೇರಿಯ ಮುಂಭಾಗ ತಾಲ್ಲೂಕು ಆಡಳಿತದ ವತಿಯಿಂದ ಶಾಸಕ ಡಾ.ರಂಗನಾಥ್ ಅಧ್ಯಕ್ಷತೆಯಲ್ಲಿ ಜನ ಸಂಪರ್ಕ ಸಭೆಯನ್ನು ಹಮ್ಮಿಕೊಳ್ಳಲಾಗಿತ್ತು.

ಸಭೆ ಉದ್ಘಾಟಿಸಿ ಮಾತನಾಡಿದ ಶಾಸಕರು, ಸಾರ್ವಜನಿಕರಿಗೆ ಕಂದಾಯ ಇಲಾಖೆಯಲ್ಲಿನ ಸಮಸ್ಯೆಗಳನ್ನು ಬಗೆಹರಿಸುವ ನಿಟ್ಟಿನಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ತಾಲ್ಲೂಕಿಗೆ ಕರೆಸಿ ಕುಂದು ಕೊರತೆ ಆಲಿಸಲಾಗುತ್ತಿದೆ ಎಂದರು.

ಬಹುದಿನಗಳಿಂದ ರೈತರಿಗೆ ಕಂದಾಯ ಇಲಾಖೆಯಿಂದ ಆಗಬೇಕಿರುವ ಕೆಲಸ ಕಾರ್ಯಗಳನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸ ಬೇಕು. ಗ್ರಾಮ ಲೆಕ್ಕಾಧಿಕಾರಿಗಳು ಮತ್ತು ಕಂದಾಯ ನಿರೀಕ್ಷಕರು ಮನೆ ಮನೆಗೆ ತೆರಳಿ ಬಾಕಿ ಉಳಿದಿರುವ ಪೌತಿ ಖಾತೆಗಳನ್ನು ರೈತರಿಂದ ದಾಖಲೆ ಪಡೆದು ಪೂರ್ಣಗೊಳಿಸುವಂತೆ ಸೂಚಿಸಿದರು. ಈ ವೇಳೆ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಮಾತನಾಡಿ, ಜಿಲ್ಲೆಯ ಎಲ್ಲ ತಾಲ್ಲೂಕಿನಲ್ಲಿ ಮಾರ್ಚ್ ಮತ್ತು ಏಪ್ರಿಲ್‌ನಲ್ಲಿ ಜನಸಂಪರ್ಕ ಸಭೆ ಮಾಡಲಾಗಿದೆ. ಕುಣಿಗಲ್‌ನಲ್ಲಿ ಇಂದ ಮೂನ್ನೂರು ಅರ್ಜಿಗಳು ಸ್ವೀಕೃತವಾಗಿವೆ ಎಂದರು.

ನಾವು ಸತತವಾಗಿ ಸಭೆಗಳನ್ನು ಮಾಡಿ ಉಪವಿಭಾಗಾಧಿಕಾರಿ ಮತ್ತು ತಹಶೀಲ್ದಾರ್ ಗಳಿಗೆ ಸೂಚನೆಗಳನ್ನು ನೀಡಲಾಗಿದೆ. ಖಾಸಗಿ ಸಮಸ್ಯೆಗಳು, ನ್ಯಾಯಾಲಯದ ಪ್ರಕರಣಗಳನ್ನು ಹೊರತುಪಡಿಸಿ ಕೋರ್ಟ್ ಆದೇಶದಂತೆ ಖಾತೆ, ಸರ್ವೆ ಸಮಸ್ಯೆ, ದಾರಿ ಸಮಸ್ಯೆ ಮತ್ತು ಪೌತಿ ಖಾತೆಗಳನ್ನು ಮಾಡುವಲ್ಲಿ ಜಿಲ್ಲೆ ಪ್ರಗತಿ ಸಾಧಿಸಿದೆ ಎಂದರು.

ಮತ್ತು ಇಪ್ಪತ್ತೈದು ಸಾವಿರ ಹಕ್ಕು ಪತ್ರ ವಿತರಣೆ ಮಾಡಲಾಗಿದೆ. ಹಲವು ವರ್ಷಗಳಿಂದ ನೆನೆಗುದಿಗೆ ಬಿದ್ದಿದ್ದ ಸಮಸ್ಯೆಗಳನ್ನು ಸವಾಲಾಗಿ ತೆಗೆದುಕೊಂಡು ಪೂರ್ಣಗೊಳಿಸಿದ್ದೇವೆ ಕಂದಾಯ ಸಚಿವರು ಹೊಸ ಗುರಿಯನ್ನು ನೀಡಿದ್ದಾರೆ ಎಂದರು.

ಜಿಲ್ಲೆಯಲ್ಲಿ ಬಾಕಿ ಉಳಿದಿರುವ ಒಟ್ಟು 3 ಲಕ್ಷ ಪೌತಿ ಖಾತೆಗಳನ್ನು ಡಿಸೆಂಬರ್ ಒಳಗಾಗಿ ರೈತರ ಮನೆ ಬಾಗಿಲಿಗೆ ತೆರಳಿ ಅರ್ಜಿ ತೆಗೆದುಕೊಂಡು ಕೆಲಸ ಮಾಡುವಂತೆ ನಿರ್ದೇಶನ ನೀಡಿದ್ದಾರೆ. ಕಂದಾಯ ಇಲಾಖೆಯ ಅಧಿಕಾರಿಗಳು ಮನೆ ಮನೆಗೆ ಭೇಟಿ ನೀಡಲಿದ್ದಾರೆ ಎಂದು ತಿಳಿಸಿದರು. ಈ ವೇಳೆ ಸಾರ್ವಜನಿಕರು ತಮ್ಮಲ್ಲಿ ಇರುವ ಅಗತ್ಯ ದಾಖಲೆಗಳನ್ನು ನೀಡಿ ಸಹಕಾರ ನೀಡಬೇಕು. ಪಹಣಿಯಲ್ಲಿ ಮರಣ ಹೊಂದಿದವರ ಮರಣ ಪ್ರಮಾಣ ಪತ್ರ ಲಭ್ಯ ಇರದಿದ್ದರೆ ಸ್ಥಳಿಯವಾಗಿ ಪರಿಶೀಲನೆ ಮಾಡಿ ಗ್ರಾಮ ಆಡಳಿತ ಅಧಿಕಾರಿಗಳು ವರದಿ ನೀಡಿದರೆ ಅದನ್ನು ಪರಿಗಣಿಸಿ ಪೌತಿ ಖಾತೆ ಬದಲವಣೆ ಮಾಡಲಾಗುವುದು. ಡಿಸೆಂಬರ್ ಒಳಗೆ ಒಂದುವರೆ ಲಕ್ಷ ಪೌತಿ ಖಾತೆಗಳನ್ನು ಪೂರ್ಣಗೊಳಿಸಲು ಯೋಜನೆ ರೂಪಿಸಲಾಗಿದೆ ನಾವು ಸತತವಾಗಿ ಸಭೆಗಳನ್ನು ಮಾಡಿ ಉಪವಿಭಾಗಾಧಿಕಾರಿ ಮತ್ತು ತಹಶೀಲ್ದಾರ್ ಗಳಿಗೆ ಸೂಚನೆಗಳನ್ನು ನೀಡಲಾಗಿದೆ. ಖಾಸಗಿ ಸಮಸ್ಯೆಗಳು, ನ್ಯಾಯಾಲಯದ ಪ್ರಕರಣಗಳನ್ನು ಹೊರತುಪಡಿಸಿ ಕೋರ್ಟ್ ಆದೇಶದಂತೆ ಖಾತೆ, ಸರ್ವೆ ಸಮಸ್ಯೆ, ದಾರಿ ಸಮಸ್ಯೆ ಮತ್ತು ಪೌತಿ ಖಾತೆಗಳನ್ನು ಮಾಡುವಲ್ಲಿ ಜಿಲ್ಲೆ ಪ್ರಗತಿ ಸಾಧಿಸಿದೆ ಎಂದರು.

ಸಭೆಯಲ್ಲಿ ಎ ಡಿ ಸಿ ತಿಪ್ಪೇಸ್ವಾಮಿ, ಉಪವಿಭಾಗಾಧಿಕಾರಿ ನಾಹೀದಜಮ್.ಜಮ್, ಭೂಮಾಪನ ಇಲಾಖೆಯ ಉಪ ನಿರ್ದೇಶಕಿ ಭಾವನ, ತಹಶೀಲ್ದಾರ್ ಕರಿಯಾನಾಯ್ಕ, ತಾಪಂ ಇಒ ವಸಂತ್ ಕುಮಾರ್, ಕೃಷಿ ಸಹಾಯಕ ನಿರ್ದೇಶಕ ರಂಗನಾಥ್, ಸಿಡಿಪಿಒ ಕಮಲ, ಬಿಇಒ ಮಮತಮಣಿ, ತಾಲ್ಲೂಕು ಮಟ್ಟದ ಅಧಿಕಾರಿಗಳು, ಕಂದಾಯ ಇಲಾಖೆಯಸಿಬ್ಬಂದಿವರ್ಗಭಾಗಿಯಾಗಿದ್ದರು.

# 1 ಲಕ್ಷ ಪೌತಿ ಖಾತೆ, 28 ಸಾವಿರ ಹಕ್ಕುಪತ್ರ ವಿತರಣೆ

ಬೆಂಗಳೂರು



ಜಿಲ್ಲೆಯಲ್ಲಿ ಕಂದಾಯ ಇಲಾಖೆಯು ಮೇ ಅಂತ್ಯದವರೆಗೆ ರೈತರ ಒಂದು ಲಕ್ಷ ಪೌತಿ ಖಾತೆಗಳನ್ನು ಮಾಡಿದ್ದು, 25 ಸಾವಿರ ಹಕ್ಕುಪತ್ರಗಳನ್ನು ವಿತರಿಸಲಾಗಿದೆ ಎಂದು ಜಿಲ್ಲಾಧಿಕಾರಿ ಶುಭಕಲ್ಯಾಣ ತಿಳಿಸಿದರು.

ತಾಲೂಕು ಆಡಳಿತ ಸೌಧ ಮುಂಭಾಗ ಶಾಸಕ ಡಾ. ಎಚ್.ಡಿ. ರಂಗನಾಥ್ ಅಧ್ಯಕ್ಷತೆಯಲ್ಲಿ ನಡೆದ ಜನಸಂಪರ್ಕ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಕಂದಾಯ ಮತ್ತು ಸರ್ವೆ ಇಲಾಖೆಗಳು ರೈತರ ಅರ್ಜಿಗಳಿಗೆ ತ್ವರಿತವಾಗಿ ಸ್ಪಂದಿಸುತ್ತಿದ್ದು, ಈಗಾಗಲೇ ಒಂದು ಲಕ್ಷ ಪೌತಿ ಖಾತೆಗಳನ್ನು ಪೂರ್ಣಗೊಳಿಸಲಾಗಿದೆ. ಜೊತೆಗೆ 28 ಸಾವಿರಕ್ಕೂ ಹೆಚ್ಚು ಜನರಿಗೆ ಹಕ್ಕುಪತ್ರ ವಿತರಿಸಲಾಗಿದೆ ಎಂದು ಅವರು ಹೇಳಿದರು.

ಉಳಿದಂತೆ ಸುಮಾರು ಮೂರು ಲಕ್ಷ ಫಲಾನುಭವಿ ರೈತರಿಗೆ ಗ್ರಾಮ ಲೆಕ್ಕಾಧಿಕಾರಿಗಳು ಮತ್ತು ಕಂದಾಯ ಅಧಿಕಾರಿಗಳು ಹಳ್ಳಿಗಳಿಗೆ ತೆರಳಿ ಖಾತೆ ಪಹಣಿ ಕಾರ್ಯವನ್ನು ಮನೆಮನೆಗೆ ಭೇಟಿ ನೀಡಿ ನಡೆಸಲಾಗುತ್ತಿದೆ ಎಂದು ಅವರು ತಿಳಿಸಿದರು. ಉಪವಿಭಾಗಾಧಿಕಾರಿಗಳಿಗೆ ಈ ಕುರಿತು ವಿಶೇಷ ಗಮನಹರಿಸಲು ಸೂಚನೆ ನೀಡಲಾಗಿದ್ದು, ನಿನ್ನೆ ಒಂದೇ ದಿನ 600 ಅರ್ಜಿಗಳನ್ನು ಇತ್ಯರ್ಥಪಡಿಸಲಾಗಿದೆ ಎಂದು ಅವರು ಹೇಳಿದರು. ಮುಂದಿನ ದಿನಗಳಲ್ಲಿ ಪ್ರತಿದಿನ ಕನಿಷ್ಠ ಸಾವಿರ ಅರ್ಜಿಗಳನ್ನು ಪರಿಹರಿಸುವ ಗುರಿ ನಿಗದಿಪಡಿಸಲಾಗಿದೆ ಎಂದು ತಿಳಿಸಿದರು.

ಶಾಸಕ ಡಾ. ಎಚ್.ಡಿ. ರಂಗನಾಥ್ ಮಾತನಾಡಿ, ತಾಲೂಕಿನಲ್ಲಿ ರೈತರ ಜಮೀನುಗಳ ಒನ್ ಟು ಫೈವ್ ಖಾತೆಗಳು ಬಾಕಿಯಿದ್ದು, ಸರ್ವೇ ನಕ್ಷೆ ತಯಾರಿಕೆಯಲ್ಲಿ ಸರ್ವೇಯರ್ ಕೊರತೆ ಉಂಟಾಗಿದೆ. ಗುತ್ತಿಗೆ ಸರ್ವೇಯರ್‌ಗಳ ಮುಷ್ಕರದಿಂದ ಸಮಸ್ಯೆ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ತಕ್ಷಣ ವಿಶೇಷ ಸರ್ವೇ ತಂಡ ರಚಿಸಿ ಸಮಸ್ಯೆ ಪರಿಹರಿಸಬೇಕು ಎಂದು ಅವರು ಹೇಳಿದರು.

ಕೆರೆಗಳ ಒತ್ತುವರಿ ಪ್ರಕರಣಗಳನ್ನು ತಕ್ಷಣ ಸರ್ವೇ ನಡೆಸಿ ಕ್ರಮ ಕೈಗೊಳ್ಳಬೇಕು ಹಾಗೂ ಜಮೀನುಗಳ ಚೆಕ್‌ಬಂದಿ, ವಂಶಸ್ಥರ ಖಾತೆಗಳನ್ನು ಸರಳಗೊಳಿಸಿ ರೈತರಿಗೆ ಅನುಕೂಲ ಮಾಡಿಕೊಡಬೇಕು ಎಂದು ಅವರು ಸೂಚಿಸಿದರು. ಕಂದಾಯ ಇಲಾಖೆಯಲ್ಲಿ ಸುಮಾರು 30 ಗ್ರಾಮ ಲೆಕ್ಕಾಧಿಕಾರಿ ಹುದ್ದೆಗಳು ಖಾಲಿಯಾಗಿದ್ದು, ಅವುಗಳ ಭರ್ತಿಗೆ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದರು.

ರೈತರು ಮತ್ತು ಸಾರ್ವಜನಿಕರು ಯಾವುದೇ ಕೆಲಸಕ್ಕಾಗಿ ಅಧಿಕಾರಿಗಳಿಗೆ ಹಣ ನೀಡಬಾರದು ಎಂದು ಎಚ್ಚರಿಸಿದ ಅವರು, ಪೋಡಿ ಕಾರ್ಯಕ್ಕಾಗಿ ಲಂಚ ಪಡೆದ ಆರೋಪದ ಬಗ್ಗೆ ಜಿಲ್ಲಾಧಿಕಾರಿಗಳು ತನಿಖೆಗೆ ಸೂಚಿಸಿರುವುದನ್ನು ಸಭೆಯಲ್ಲಿ ಉಲ್ಲೇಖಿಸಿದರು.

ಸಭೆಯಲ್ಲಿ ಹೆಚ್ಚುವರಿ ಜಿಲ್ಲಾಧಿಕಾರಿ ತಿಪ್ಪೇಸ್ವಾಮಿ, ಉಪವಿಭಾಗಾಧಿಕಾರಿ ನಾಹಿದ ಜಮ್ ಜಮ್, ಸರ್ವೇ ಇಲಾಖೆಯ ಸಹಾಯಕ ನಿರ್ದೇಶಕ ಭಾವನ, ತಹಸೀಲ್ದಾರ್ ಕರಿಯ ನಾಯಕ್ ಸೇರಿದಂತೆ ಹಲವು ಅಧಿಕಾರಿಗಳು ಉಪಸ್ಥಿತರಿದ್ದರು.

# ಶಿಕ್ಷಕರ ಕೊರತೆ: ಪೋಷಕರು, ಹಳೆಯ ವಿದ್ಯಾರ್ಥಿಗಳಿಂದ ನೇಮಕಾತಿ ಒತ್ತಾಯ

ಬೆಂಗಳೂರು

ಹೋಬಳಿಯ ದೊಡ್ಡಲಂಬಾಣಿಹಟ್ಟಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಕಳೆದ ಮೂರು ವರ್ಷಗಳಿಂದ ಶಿಕ್ಷಕರ ಕೊರತೆಯಿಂದ ಬಳಲುತ್ತಿದ್ದು, ತಕ್ಷಣವೇ ಶಿಕ್ಷಕರನ್ನು ನೇಮಿಸುವಂತೆ ಪೋಷಕರು ಹಾಗೂ ಹಳೆಯ ವಿದ್ಯಾರ್ಥಿಗಳು ಒತ್ತಾಯಿಸಿದ್ದಾರೆ.

ಮರಿದಾಸನಹಳ್ಳಿ ಕ್ಲಸ್ಟರ್ ವ್ಯಾಪ್ತಿಯ ಈ ಶಾಲೆಯಲ್ಲಿ 1 ರಿಂದ 5ನೇ ತರಗತಿ ವಿದ್ಯಾರ್ಥಿಗಳಿಗೆ ಒಬ್ಬರೇ ಶಿಕ್ಷಕರು ಎಲ್ಲಾ ಪಾಠಗಳನ್ನು ಬೋಧಿಸುತ್ತಿದ್ದಾರೆ. ಇದರಿಂದ ಶಾಲೆ ಏಕೋಪಾಧ್ಯಾಯ ಶಾಲೆಯಾಗಿ ಕಾರ್ಯನಿರ್ವಹಿಸುತ್ತಿದೆ.

ಒಂದೇ ಕೊಠಡಿಯಲ್ಲಿ ಪಾಠ ನಡೆಯುವಾಗ ಉಳಿದ ತರಗತಿಗಳ ಮಕ್ಕಳು ಸ್ವಯಂ ಅಧ್ಯಯನ ಮಾಡಬೇಕಾದ ಪರಿಸ್ಥಿತಿ ಉಂಟಾಗಿದ್ದು, ಬಿಸಿಯೂಟ, ಹಾಜರಾತಿ, ಆರೋಗ್ಯ ತಪಾಸಣೆ ಸೇರಿದಂತೆ ಎಲ್ಲಾ ಆಡಳಿತಾತ್ಮಕ ಕೆಲಸಗಳನ್ನೂ ಒಬ್ಬ ಶಿಕ್ಷಕರೇ ನಿರ್ವಹಿಸಬೇಕಾಗಿದೆ. ಇದರಿಂದ ವಿದ್ಯಾರ್ಥಿಗಳ ಕಲಿಕಾ ಗುಣಮಟ್ಟದ ಮೇಲೆ ಪರಿಣಾಮ ಬೀರುತ್ತಿದೆ ಎಂದು ಪೋಷಕರು ತಿಳಿಸಿದ್ದಾರೆ.

ಈ ಶಾಲೆಗೆ ಮೊದಲಿನಿಂದ ಇಬ್ಬರು ಶಿಕ್ಷಕರು ನಿಯೋಜನೆಗೊಂಡಿದ್ದರೂ, ಕ್ಲಸ್ಟರ್‌ನ ಬಿ.ಹೊಸಹಳ್ಳಿ ಶಾಲೆಯಲ್ಲಿ ಶಿಕ್ಷಕರ ಕೊರತೆ ಇರುವ ಕಾರಣ ಒಬ್ಬರನ್ನು ಅಲ್ಲಿಗೆ ನಿಯೋಜಿಸಿರುವುದರಿಂದ ದೊಡ್ಡಲಂಬಾಣಿಹಟ್ಟಿ ಶಾಲೆ ಸಂಪೂರ್ಣ ಏಕಶಿಕ್ಷಕ ಶಾಲೆಯಾಗಿ ಮಾರ್ಪಟ್ಟಿದೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.

ಶಾಶ್ವತ ಶಿಕ್ಷಕರನ್ನು ನೇಮಿಸಲು ಸಾಧ್ಯವಾಗದಿದ್ದರೆ ಅತಿಥಿ ಶಿಕ್ಷಕರನ್ನು ತಕ್ಷಣ ನೇಮಿಸಬೇಕು ಅಥವಾ ನಿಯೋಜಿತ ಶಿಕ್ಷಕರನ್ನು ಹಿಂದಿರುಗಿಸಬೇಕು ಎಂದು ಪೋಷಕರು ಆಗ್ರಹಿಸಿದ್ದಾರೆ.

ಕಳೆದ ಮೂರು ವರ್ಷಗಳಿಂದ ಸಿಆರ್‌ಪಿ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸಮಸ್ಯೆ ತಿಳಿಸಿದರೂ ಪರಿಹಾರ ಸಿಕ್ಕಿಲ್ಲ ಎಂದು ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ತಕ್ಷಣ ಕ್ರಮ ಕೈಗೊಳ್ಳದಿದ್ದರೆ ಪ್ರತಿಭಟನೆ ನಡೆಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ.

ಹಳೆ ವಿದ್ಯಾರ್ಥಿ ಪಿ. ನಂದೀಶ್ ನಾಯ್ಕ ಮಾತನಾಡಿ, ಹಿಂದೆ ಶಾಲೆಯಲ್ಲಿ ಇಬ್ಬರು ಶಿಕ್ಷಕರಿದ್ದಾಗ ಉತ್ತಮ ಶಿಕ್ಷಣ ದೊರೆಯುತ್ತಿತ್ತು. ಆದರೆ ಈಗ ಏಕಶಿಕ್ಷಕ ಶಾಲೆಯಾಗಿ ಮುಂದಿನ ಪೀಳಿಗೆ ಶಿಕ್ಷಣದಿಂದ ವಂಚಿತವಾಗುತ್ತಿರುವುದು ನೋವುಂಟುಮಾಡುತ್ತಿದೆ ಎಂದು ಹೇಳಿದರು.

## 133 ಪ್ರಧಾನಮಂತ್ರಿ ಜನೌಷಧಿ ಕೇಂದ್ರಗಳಿಗೆ ಕಾರಣ ಕೇಳುವ ನೋಟಿಸ್

ಬೆಂಗಳೂರು

ನಿಯಮಗಳ ಉಲ್ಲಂಘನೆ ಮತ್ತು ಕಾರ್ಯನಿರ್ವಹಣೆಯಲ್ಲಿನ ಲೋಪಗಳ ಹಿನ್ನೆಲೆಯಲ್ಲಿ ದೇಶದ ವಿವಿಧ ಭಾಗಗಳಲ್ಲಿರುವ 133 ಪ್ರಧಾನಮಂತ್ರಿ ಜನೌಷಧಿ ಕೇಂದ್ರಗಳಿಗೆ ಕಾರಣ ಕೇಳುವ ನೋಟಿಸ್ ಜಾರಿಗೊಳಿಸಲಾಗಿದೆ.

ಜನಸಾಮಾನ್ಯರಿಗೆ ಕಡಿಮೆ ದರದಲ್ಲಿ ಗುಣಮಟ್ಟದ ಔಷಧಗಳನ್ನು ಒದಗಿಸುವ ಉದ್ದೇಶದಿಂದ ಕಾರ್ಯನಿರ್ವಹಿಸುತ್ತಿರುವ ಈ ಕೇಂದ್ರಗಳ ಮೇಲೆ ನಡೆದ ಪರಿಶೀಲನೆಯ ವೇಳೆ ಕೆಲವು ಅಕ್ರಮಗಳು ಹಾಗೂ ನಿಯಮ ಉಲ್ಲಂಘನೆಗಳು ಬೆಳಕಿಗೆ ಬಂದಿವೆ ಎನ್ನಲಾಗಿದೆ. ಈ ಹಿನ್ನೆಲೆಯಲ್ಲಿ ಸಂಬಂಧಿತ ಕೇಂದ್ರಗಳ ನಿರ್ವಾಹಕರಿಗೆ ವಿವರಣೆ ನೀಡುವಂತೆ ಅಧಿಕಾರಿಗಳು ಸೂಚಿಸಿದ್ದಾರೆ.

ನೋಟಿಸ್ ಪಡೆದ ಕೇಂದ್ರಗಳು ನಿಗದಿತ ಅವಧಿಯೊಳಗೆ ತಮ್ಮ ಉತ್ತರವನ್ನು ಸಲ್ಲಿಸಬೇಕಿದ್ದು, ಸಮರ್ಪಕ ವಿವರಣೆ ನೀಡದಿದ್ದಲ್ಲಿ ಮುಂದಿನ ಕ್ರಮ ಕೈಗೊಳ್ಳುವ ಸಾಧ್ಯತೆ ಇದೆ.

# ದೌರ್ಜನ್ಯ ಪ್ರಕರಣಗಳಿಗೆ ತ್ವರಿತ ಕಾನೂನು ಕ್ರಮ

ಬೆಂಗಳೂರು



ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದವರ ಮೇಲಿನ ಶೋಷಣೆ ಹಾಗೂ ದೌರ್ಜನ್ಯ ಪ್ರಕರಣಗಳು ನಡೆಯದಂತೆ ಕಾಲ ಕಾಲಕ್ಕೆ ತಾಲ್ಲೂಕು ಮಟ್ಟದಲ್ಲಿ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಗಳನ್ನು ಕಡ್ಡಾಯವಾಗಿ ನಡೆಸಿ, ದೌರ್ಜನ್ಯ ಪ್ರಕರಣಗಳ ತಪ್ಪಿತಸ್ಥರ ವಿರುದ್ಧ ತ್ವರಿತ ಕಾನೂನು ಕ್ರಮ ಜರುಗಿಸಬೇಕು ಎಂದು ಜಿಲ್ಲಾಧಿಕಾರಿ ಡಾ. ಕೆ.ಎನ್. ಅನುರಾಧ ಅವರು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ನ್ಯಾಯಾಲಯ ಸಭಾಂಗಣದಲ್ಲಿ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನಡೆದ 2ನೇ ತ್ರೈಮಾಸಿಕ ಜಿಲ್ಲಾ ಮಟ್ಟದ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆ, ಎಸ್.ಸಿ.ಎಸ್.ಪಿ ಮತ್ತು ಟಿ.ಎಸ್.ಪಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ದೌರ್ಜನ್ಯ ಕಾಯ್ದೆಯಡಿಯಲ್ಲಿ ದಾಖಲಾಗುವ ಪ್ರಕರಣಗಳಿಗೆ ತ್ವರಿತವಾಗಿ ಸ್ಪಂದಿಸಿ, ಸೂಕ್ತ ನ್ಯಾಯ ದೊರಕಿಸಿಕೊಡುವುದರ ಜೊತೆಗೆ ನೊಂದವರಿಗೆ ಸಕಾಲದಲ್ಲಿ ವಿಳಂಬವಿಲ್ಲದೆ ಪರಿಹಾರಧನ ಮಂಜೂರಾತಿಗೆ ಕ್ರಮ ವಹಿಸಲು ನಿರ್ದೇಶನ ನೀಡಿದರು.

ಗ್ರಾಮೀಣ ಪ್ರದೇಶಗಳ ಜನರಲ್ಲಿ ಪೊಲೀಸ್ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಕಾನೂನಿನ ಅರಿವು ಮೂಡಿಸುವ ಮೂಲಕ ದೌರ್ಜನ್ಯ ಪ್ರಕರಣಗಳ ಸಂಖ್ಯೆ ಕಡಿಮೆ ಮಾಡುವಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಏರ್ಪಡಿಸಬೇಕು. ಸುಳ್ಳು ದೌರ್ಜನ್ಯ ಪ್ರಕರಣ ದಾಖಲಿಸುವ ವ್ಯಕ್ತಿಗಳ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳುವಂತೆ ಪೊಲೀಸ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

**09 ದೌರ್ಜನ್ಯ ಪ್ರಕರಣ ದಾಖಲು:** ಜಿಲ್ಲೆಯಲ್ಲಿ ಏಪ್ರಿಲ್ 1 ರಿಂದ ಇಲ್ಲಿಯವರೆಗೂ ಒಟ್ಟು 09 ದೌರ್ಜನ್ಯ ಪ್ರಕರಣಗಳು ದಾಖಲಾಗಿದ್ದು, ಪರಿಹಾರ ಧನದ ಮಂಜೂರಾತಿ ವಿವರಗಳ ಪರಿಶೀಲನೆ ನಡೆಸಿ 09 ಪ್ರಕರಣಗಳಲ್ಲಿ ನೊಂದ ಸಂತ್ರಸ್ತರಿಗೆ ಒಟ್ಟು 2.50 ಲಕ್ಷ ರೂ.ಗಳ ಪರಿಹಾರ ಧನವನ್ನು ಬಿಡುಗಡೆ ಮಾಡಲಾಗಿದೆ ಎಂದು ಸಮಾಜ ಕಲ್ಯಾಣ ಉಪನಿರ್ದೇಶಕರು ಸಭೆಗೆ ಮಾಹಿತಿ ನೀಡಿದರು.


**ಅನುದಾನ ಅರ್ಹರಿಗೆ ತಲುಪಿಸಿ:** ಸರ್ಕಾರವು ಪರಿಶಿಷ್ಟ ಜಾತಿ ಹಾಗೂ ಪಂಗಡಗಳ ಅಭಿವೃದ್ಧಿಗೆ ಇಲಾಖೆಗಳಿಗೆ ಒದಗಿಸಿದ ಅನುದಾನವನ್ನು ಸಂಪೂರ್ಣವಾಗಿ ಅರ್ಹರಿಗೆ ತಲುಪಿಸುವ ಮೂಲಕ ಅನುದಾನ ಪರಿಶಿಷ್ಟರ ಅಭಿವೃದ್ಧಿಗೆ ಸಮರ್ಪಕವಾಗಿ ಸದ್ಬಳಕೆ ಆಗಬೇಕು. ಜಿಲ್ಲೆಯ ನಾಲ್ಕು ತಾಲೂಕು ಸರ್ಕಾರಿ ಆಸ್ಪತ್ರೆಗಳಲ್ಲಿ ಸ್ವಚ್ಛತೆಯನ್ನು ಕಾಪಾಡಬೇಕು. ಆಸ್ಪತ್ರೆ ಬಂದ ರೋಗಿಗಳಿಗೆ ಯಾವುದೇ ತೊಂದರೆ ಆಗದಂತೆ ನೋಡಿಕೊಳ್ಳಲು ಆರೋಗ್ಯಾಧಿಕಾರಿಗಳಿಗೆ ಜಿಲ್ಲಾಧಿಕಾರಿ ಸೂಚನೆ ನೀಡಿದರು.

ಹೊರಗುತ್ತಿಗೆ ಪೌರ ಕಾರ್ಮಿಕರಿಗೆ ಸರಿಯಾದ ಸಮಯಕ್ಕೆ ವೇತನವನ್ನು ಪಾವತಿಸಬೇಕು. ಕಸ ವಿಂಗಡಣೆ ಮಾಡಲು ಸುರಕ್ಷಿತ ಪರಿಕರಗಳನ್ನು ಒದಗಿಸಬೇಕು ಎಂದು ನಗರಾಭಿವೃದ್ದಿ ಅಧಿಕಾರಿಗಳಿಗೆ ತಿಳಿಸಿದರು. ಜಿಲ್ಲಾ ವ್ಯಾಪ್ತಿಯ ವಿದ್ಯಾರ್ಥಿನಿಲಯ ಹಾಗೂ ಹಾಸ್ಟೆಲ್ ಗಳಲ್ಲಿ 15 ದಿನಕ್ಕೊಮ್ಮೆ ಜಿಲ್ಲಾ ಮಟ್ಟದ ನೂಡಲ್ ಅಧಿಕಾರಿಗಳು ವಾಸ್ತವ್ಯ ಇದ್ದು, ಅಲ್ಲಿನ ಸ್ಥಿತಿಗತಿ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿ ಕುರಿತು ವರದಿ ನೀಡಲು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಸಿಇಒ ಡಾ. ವಾಸಂತಿ ಅಮರ, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಚಂದ್ರಕಾಂತ ಎಂ.ವಿ, ಅಪರ ಜಿಲ್ಲಾಧಿಕಾರಿ ಸೈಯಿದಾ ಆಯಿಷಾ, ಜಿ.ಪಂ ಉಪಕಾರ್ಯದರ್ಶಿ ಶಿವಕುಮಾರ್, ಮುಖ್ಯಯೋಜನಾಧಿಕಾರಿ ರಾಮಕೃಷ್ಣಯ್ಯ, ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕರಾದ ಟಿ.ಎಲ್.ಎಸ್. ಪ್ರೇಮ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ಜಾಗೃತಿ ಸಮಿತಿಯ ಸದಸ್ಯರು

# ಶ್ರೀಪರ್ತಗಾಳಿ ಜೀವೋತ್ತಮ ಕೇಂದ್ರ ಮಠದಲ್ಲಿ “ಜೀವೋತ್ತಮ ವಿದ್ಯಾಪೀಠಂ” ಉದ್ಘಾಟನೆ

ಬೆಂಗಳೂರು



ಪ್ರಧಾನಿ ನರೇಂದ್ರ ಮೋದಿ ಅವರಿಂದ ಲೋಕಾರ್ಪಣೆಗೊಂಡ 77 ಅಡಿ ಎತ್ತರದ ಕಂಚಿನ ಶ್ರೀರಾಮ ಪ್ರತಿಮೆಯುಳ್ಳ ಪವಿತ್ರ ಶ್ರೀಗೋಕರ್ಣ ಪರ್ತಗಾಳಿ ಜೀವೋತ್ತಮ ಕೇಂದ್ರ ಮಠದಲ್ಲಿ, ಪರಾಭವ ನಾಮ ಸಂವತ್ಸರದ ನಿಜ ಜ್ಯೇಷ್ಠ ಶುಕ್ಲ ದಶಮಿಯ ಶುಭಸಂದರ್ಭವಾದ 24–06–2026 ರ ಬುಧವಾರ ಪರಮಪೂಜ್ಯ ಶ್ರೀಮದ್ ಶ್ರೀಶ್ರೀಶ್ರೀ ವಿದ್ಯಾಧೀಶತೀರ್ಥ ಶ್ರೀಪಾದ ವಡೆಯರ್ ಸ್ವಾಮೀಜಿಯವರ ದಿವ್ಯ ಸಾನ್ನಿಧ್ಯದಲ್ಲಿ ಹೊಸ ವೇದಾಧ್ಯಯನ ಕೇಂದ್ರವಾದ “ಜೀವೋತ್ತಮ ವಿದ್ಯಾಪೀಠಂ” ಉದ್ಘಾಟನೆಗೊಂಡಿತು.

ಕ್ರಿ.ಶ. 1475 ರಲ್ಲಿ ಶ್ರೀಪಲಿಮಾರು ಮಠದ ಶ್ರೀಶ್ರೀಶ್ರೀ ರಾಮಚಂದ್ರತೀರ್ಥ ಶ್ರೀಪಾದಂಗಳವರಿಂದ ಸನ್ಯಾಸಾಶ್ರಮವನ್ನು ಸ್ವೀಕರಿಸಿದ ಶ್ರೀಶ್ರೀಶ್ರೀ ನಾರಾಯಣತೀರ್ಥ ಶ್ರೀಪಾದಂಗಳವರಿಂದ ಶ್ರೀಗೋಕರ್ಣ ಪರ್ತಗಾಳಿ ಜೀವೋತ್ತಮ ಮಠವು ಸ್ಥಾಪನೆಯಾಯಿತು.

ಸುಮಾರು 550 ವರ್ಷಗಳ ನಿರಂತರ ಗುರುಪರಂಪರೆಯ ಮೂಲಕ ಶ್ರೀಮಧ್ವಾಚಾರ್ಯರ ದ್ವೈತ ಸಿದ್ಧಾಂತವನ್ನು ಪೋಷಿಸಿ, ಪ್ರಸಾರ ಮಾಡುತ್ತಿರುವ ಈ ಮಠವು ಪ್ರಸ್ತುತ ದೇಶಾದ್ಯಂತ 34 ಶಾಖಾ ಮಠಗಳನ್ನು ಹೊಂದಿದೆ. ಮಠದ ಆರಾಧ್ಯ ದೇವರಾದ ಶ್ರೀರಾಮದೇವ ವೀರವಿಠ್ಠಲ ದೇವರ ಅನುಗ್ರಹ ಹಾಗೂ ಸರ್ವ ಗುರುಪರಂಪರೆಯ 23 ಯತಿಗಳ ಆಶೀರ್ವಾದದಿಂದ ವೈಷ್ಣವ ಸಂಪ್ರದಾಯದಂತೆ ಪ್ರತಿದಿನ ತಂತ್ರಸಾರೋಕ್ತ ತ್ರಿಕಾಲ ಪೂಜೆ ನಡೆಯುತ್ತಿದೆ.

ಸಾಂಪ್ರದಾಯಿಕ ಗುರುಕುಲ ಪದ್ಧತಿಯ ಮೂಲಕ ವೇದ ಹಾಗೂ ಶಾಸ್ತ್ರಗಳ ಅಧ್ಯಯನವು ಶತಮಾನಗಳಿಂದ ನಿರಂತರವಾಗಿ ನಡೆಯುತ್ತಾ ಬಂದಿದೆ. ಮಠದ 18ನೇ ಯತಿವರ್ಯರಾದ ಶ್ರೀಮದ್ ಶ್ರೀಶ್ರೀಶ್ರೀ ಪೂರ್ಣಪ್ರಜ್ಞತೀರ್ಥ ಶ್ರೀಪಾದಂಗಳವರು ವಿದ್ಯಾದಾನದ ಉದ್ದೇಶದಿಂದ ವಿಶೇಷ ಗುರುಕುಲವನ್ನು ಸ್ಥಾಪಿಸಿ ಸಮಾಜಕ್ಕೆ ಅನೇಕ ವಿದ್ವಾಂಸರು ಹಾಗೂ ಪಂಡಿತರನ್ನು ನೀಡುವ ಮೂಲಕ ಸಮಾಜದ ಏಳಿಗೆಯಲ್ಲಿ ಮಹತ್ತರ ಸೇವೆ ಸಲ್ಲಿಸಿದ್ದರು.

1953ರಲ್ಲಿ ಮಠದ 22ನೇ ಯತಿವರ್ಯರಾದ ಶ್ರೀಮದ್ ಶ್ರೀಶ್ರೀಶ್ರೀದ್ವಾರಕಾನಾಥತೀರ್ಥ ಶ್ರೀಪಾದಂಗಳವರು ಗೋವಾದ ಡಿಚೋಲಿಯ ವ್ಯಾಸಾಶ್ರಮದಲ್ಲಿ ಪ್ರಾಚೀನ ಗುರುಕುಲ ಪದ್ಧತಿಯನ್ನು ಅನುಸರಿಸಿ “ಶ್ರೀಇಂದಿರಾಕಾಂತ ತೀರ್ಥ ಸಂಸ್ಕೃತ ಪಾಠಶಾಲೆ” ಯನ್ನು ಸ್ಥಾಪಿಸಿದರು. ಬಳಿಕ ಅದನ್ನು ಕರ್ನಾಟಕದ ವೆಂಕಟಾಪುರಕ್ಕೆ ಸ್ಥಳಾಂತರಿಸಲಾಯಿತು. ಈ ಪಾಠಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಸಂಸ್ಕೃತ ಸಾಹಿತ್ಯ, ಕಾವ್ಯ, ವ್ಯಾಕರಣ, ವೇದ ಹಾಗೂ ದ್ವೈತಸಿದ್ಧಾಂತ ಸೇರಿದಂತೆ ವಿವಿಧ ಸಾಂಪ್ರದಾಯಿಕ ವಿಷಯಗಳನ್ನು ಬೋಧಿಸಲಾಗುತ್ತಿದ್ದು, ವಿದ್ಯಾರ್ಥಿಗಳ ಸಂಪೂರ್ಣ ವೆಚ್ಚವನ್ನು ಮಠವೇ ಭರಿಸುತ್ತಿತ್ತು.

ನಂತರ 1972ರಲ್ಲಿ ಮಠದ 23ನೇ ಯತಿವರ್ಯರಾದ ಶ್ರೀಮದ್ ಶ್ರೀಶ್ರೀಶ್ರೀ ವಿದ್ಯಾಧಿರಾಜತೀರ್ಥ ಶ್ರೀಪಾದಂಗಳವರು ಪಾಠಶಾಲೆಯನ್ನು ಪರ್ತಗಾಳಿಗೆ ಸ್ಥಳಾಂತರಿಸಿ “ಜೀವೋತ್ತಮ ವೈದಿಕ ಸಂಸ್ಕೃತ ಪಾಠಶಾಲೆ” ಎಂದು ನಾಮಕರಣ ಮಾಡಿದರು. ಈ ಸಂಸ್ಥೆಯ ಮೂಲಕ ಐನೂರಕ್ಕೂ ಅಧಿಕ ವಿದ್ಯಾರ್ಥಿಗಳು ಶಿಕ್ಷಣ ಪಡೆದು ಸಮಾಜದಲ್ಲಿ ಗೌರವಯುತ ಜೀವನವನ್ನು ನಡೆಸಿದ್ದಾರೆ. ಆದರೆ ಆಧುನಿಕ ಶಿಕ್ಷಣದ ಪ್ರಭಾವದಿಂದ ವಿದ್ಯಾರ್ಥಿಗಳ ಸಂಖ್ಯೆ ಕ್ರಮೇಣ ಕಡಿಮೆಯಾಗುತ್ತಾ ಬಂದ ಪರಿಣಾಮ, 2016ರ ವೇಳೆಗೆ ಪ್ರವೇಶ ಪ್ರಕ್ರಿಯೆ ಸಂಪೂರ್ಣ ಸ್ಥಗಿತಗೊಂಡಿತ್ತು.

ಇತ್ತೀಚಿನ ದಿನಗಳಲ್ಲಿ ವೇದಾಧ್ಯಯನದ ಬಗ್ಗೆ ಸಮಾಜದಲ್ಲಿ ಪುನಃ ಆಸಕ್ತಿ ಮೂಡುತ್ತಿರುವ ಹಿನ್ನೆಲೆಯಲ್ಲಿ, ಮಠದ 24ನೇ ಯತಿವರ್ಯರಾದ ಪರಮಪೂಜ್ಯ ಶ್ರೀಮದ್ ಶ್ರೀಶ್ರೀಶ್ರೀ ವಿದ್ಯಾಧೀಶತೀರ್ಥ ಶ್ರೀಪಾದ ವಡೆಯರ್ ಸ್ವಾಮೀಜಿಯವರು “ಜೀವೋತ್ತಮ ವಿದ್ಯಾಪೀಠಂ” ಎಂಬ ಹೆಸರಿನಲ್ಲಿ ಈ ವಿದ್ಯಾಸಂಸ್ಥೆಯನ್ನು ಪುನಶ್ಚೇತನಗೊಳಿಸುವ ಮೂಲಕ ನವಚೈತನ್ಯ ತುಂಬಿದ್ದಾರೆ.

ಉದ್ಘಾಟನಾ ಸಂದರ್ಭದಲ್ಲಿ ಶ್ರೀಪಾದರು ವಿದ್ಯಾರ್ಥಿಗಳು ಹಾಗೂ ಭಕ್ತಾದಿಗಳನ್ನು ಉದ್ದೇಶಿಸಿ ಅನುಗ್ರಹ ಆಶೀರ್ವಚನ ನೀಡಿ ಈ ವಿದ್ಯಾಪೀಠವು ಹಿಂದೂ ಸನಾತನ ಧರ್ಮದ ಸಂರಕ್ಷಣೆಯ ದೃಷ್ಟಿಯಿಂದ ಶ್ರೀಮಧ್ವ ಸಿದ್ಧಾಂತವನ್ನು ಅನುಸರಿಸುವ ವೇದಾಧ್ಯಯನದ ಕೇಂದ್ರಬಿಂದುವಾಗಿದೆ. ಐದು ವರ್ಷಗಳ ಪಠ್ಯಕ್ರಮದಲ್ಲಿ ಸಂಸ್ಕೃತ, ವೇದ, ಕರ್ಮಾಂಗ ಹಾಗೂ ಜ್ಯೋತಿಷ್ಯ ವಿಷಯಗಳಿಗೆ ಪ್ರಾಧಾನ್ಯ ನೀಡಲಾಗುವುದು. ಹತ್ತು ವರ್ಷಗಳ ಪಠ್ಯಕ್ರಮದಲ್ಲಿ ಸಂಸ್ಕೃತ, ವೇದ, ಕರ್ಮಾಂಗ, ಜ್ಯೋತಿಷ್ಯ, ನ್ಯಾಯ, ವ್ಯಾಕರಣ ಹಾಗೂ ವೇದಾಂತ ವಿಷಯಗಳ ಸಮಗ್ರ ಅಧ್ಯಯನಕ್ಕೆ ಅವಕಾಶ ಕಲ್ಪಿಸಲಾಗುವುದು ಎಂದು ತಿಳಿಸಿದರು.

ವಿದ್ಯಾಪೀಠದ ಸಂಸ್ಕೃತ ವಿಭಾಗಕ್ಕೆ ಗಣೇಶ್ ಭಟ್ ಗೋಕರ್ಣ ಹಾಗೂ ರಘೋತ್ತಮ ಆಚಾರ್ಯ ಬೆಂಗಳೂರು ಅವರನ್ನು, ವೇದ ವಿಭಾಗಕ್ಕೆ ಅಥರ್ವ ಭಾಂಡೇಕರ್ ಅವರನ್ನು ಹಾಗೂ ಮುಖ್ಯೋಪಾಧ್ಯಾಯರಾಗಿ ಜ್ಯೋತಿಷ್ಯ ಮತ್ತು ಕರ್ಮಾಂಗ ವಿಭಾಗಕ್ಕೆ ಹೊನ್ನಾವರದ ಇಡಗುಂಜಿಯ ಲಕ್ಷ್ಮೀಕಾಂತ ಭಟ್ ಅವರನ್ನು ನಿಯೋಜಿಸಲಾಗಿದೆ.

ಈ ಪಾಠಶಾಲೆಯ ಮೂಲಕ ವಿದ್ವತ್ ಹಾಗೂ ವಿದ್ವಾನ್ ಶಿಕ್ಷಣವನ್ನು ಪಡೆದು ಶ್ರೀಮಧ್ವ ಸಿದ್ಧಾಂತದ ಪ್ರಚಾರ ಹಾಗೂ ಸಾರಸ್ವತ ಸಮಾಜದ ಸೇವೆಯಲ್ಲಿ ತೊಡಗುವ ಉತ್ತಮ ಪಂಡಿತರನ್ನು ರೂಪಿಸುವ ಗುರಿಯನ್ನು ಹೊಂದಲಾಗಿದೆ.

ಇದು ಕೇವಲ ಒಂದು ಶಿಕ್ಷಣ ಸಂಸ್ಥೆಯ ಆರಂಭವಲ್ಲ. ಸನಾತನ ವೈದಿಕ ಪರಂಪರೆ, ಶ್ರೀಮಧ್ವ ಸಿದ್ಧಾಂತ ಹಾಗೂ ಗುರುಪರಂಪರೆಯ ಜ್ಞಾನಸಂಪತ್ತನ್ನು ಮುಂದಿನ ಪೀಳಿಗೆಗೆ ಸಂರಕ್ಷಿಸಿ ಪಸರಿಸುವ ಮಹತ್ವದ ಹೆಜ್ಜೆಯಾಗಿದೆ. ಗುರುಪರಂಪರೆಯಿಂದ ಪಾವನಗೊಂಡ ಶ್ರೀಪರ್ತಗಾಳಿ ಕ್ಷೇತ್ರದಲ್ಲಿ ಆರಂಭಗೊಂಡಿರುವ ಈ ವಿದ್ಯಾಪೀಠವು ಭವಿಷ್ಯದಲ್ಲಿ ಅನೇಕ ವೇದಪಂಡಿತರು, ಶಾಸ್ತ್ರಪಾರಂಗತರು ಹಾಗೂ ಸಮಾಜಮುಖಿ ವ್ಯಕ್ತಿತ್ವಗಳನ್ನು ರೂಪಿಸುವ ಕೇಂದ್ರವಾಗಿ ಬೆಳೆಯಲಿ ಎಂದು ಶ್ರೀಪಾದರು ಆಶೀರ್ವದಿಸಿದರು.

ಶ್ರೀಹರಿ ಗುರು ಮತ್ತು ಸರಸ್ವತಿ ಪೂಜೆಯ ಬಳಿಕ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕಗಳು ಹಾಗೂ ಅಗತ್ಯ ಶಿಕ್ಷಣೋಪಕರಣಗಳನ್ನು ವಿತರಿಸುವ ಮೂಲಕ ವಿದ್ಯಾಪೀಠದ ಶುಭಾರಂಭಕ್ಕೆ ಅನುಗ್ರಹ ನೀಡಲಾಯಿತು.

ಈ ಸಂದರ್ಭದಲ್ಲಿ ಪದ್ಮಶ್ರೀ ಪುರಸ್ಕೃತ ಮೋಹನದಾಸ್ ಪೈ, ಆರ್.ಎಸ್.ಶಾನುಭಾಗ್ ಬೆಂಗಳೂರು, ಶ್ರೀಮಠದ ಕೇಂದ್ರ ಸಮಿತಿಯ ಅಧ್ಯಕ್ಷ ಶ್ರೀನಿವಾಸ್ ವಿ. ದೆಂಪೋ, ಉಪಾಧ್ಯಕ್ಷ ರಾಮಚಂದ್ರ ಆರ್.ಕಾಮತ್, ಪರ್ತಗಾಳಿ ಚಾತುರ್ಮಾಸ್ಯ ಸಮಿತಿಯ ಅಧ್ಯಕ್ಷ ಅನಿಲ್ ಪೈ, ಸಮಿತಿ ಸದಸ್ಯರಾದ ದಿನೇಶ್ ಪೈ, ಯೋಗೀಶ್ ಕಾಮತ್, ವಿದ್ವಾನ್ ರಾಮಕೃಷ್ಣ ಭಟ್, ಪಾಠಶಾಲೆಯ ಹಳೆಯ ವಿದ್ಯಾರ್ಥಿಗಳು, ಶ್ರೀಜೀವೋತ್ತಮ ವೈದಿಕ ಸಂಘದ ಸದಸ್ಯರು, ವೈದಿಕ ವೃಂದ ಹಾಗೂ ಸಮಾಜಬಾಂಧವರು ಉಪಸ್ಥಿತರಿದ್ದರು.

26/06/2026

# ಭಾರತ ಸಾರಥಿ

BHARATHA SARATHI KANNADA DAILY NEWS PAPER

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಹಕ್ಕು ಉಳಿಸಿಕೊಳ್ಳಲು ಎಚ್ಚರಿಕೆಯಿಂದ ಅರ್ಜಿ ಭರ್ತಿ ಮಾಡಲು ಮನವಿ

ಬೆಂಗಳೂರು

ಚುನಾವಣಾ ಆಯೋಗದ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಹಿನ್ನೆಲೆಯಲ್ಲಿ ನಗರದ ಮತದಾರರು ತಮ್ಮ ಹಕ್ಕುಗಳನ್ನು ಕಾಪಾಡಿಕೊಳ್ಳಲು ಅಗತ್ಯ ಎಚ್ಚರಿಕೆ ವಹಿಸಬೇಕು ಎಂದು ಮಾಜಿ ಶಾಸಕ ಹಾಗೂ ಎಐಸಿಸಿ ಅಲ್ಪಸಂಖ್ಯಾತರ ಘಟಕದ ಸಂಚಾಲಕ ಡಾ. ರಫೀಕ್ ಅಹಮದ್ ಮನವಿ ಮಾಡಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ದಲಿತರು, ಅಲ್ಪಸಂಖ್ಯಾತರು ಹಾಗೂ ಹಿಂದುಳಿದ ವರ್ಗಗಳ ಮತದಾರರು ವಿಶೇಷವಾಗಿ ಜಾಗರೂಕರಾಗಿರಬೇಕು ಎಂದು ಸಲಹೆ ನೀಡಿದ್ದಾರೆ. ಮತದಾರರ ಪಟ್ಟಿಯ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಈಗಾಗಲೇ ಹೆಸರು ಇರುವವರೂ ಸಹ ನೂತನ ನೊಂದಣಿ ಫಾರಂಗಳನ್ನು ಕಡ್ಡಾಯವಾಗಿ ಭರ್ತಿ ಮಾಡಬೇಕಾಗಿರುವ ಹಿನ್ನೆಲೆಯಲ್ಲಿ ಯಾವುದೇ ತಪ್ಪುಗಳಾಗದಂತೆ ಎಚ್ಚರಿಕೆ ಅಗತ್ಯವಾಗಿದೆ ಎಂದು ತಿಳಿಸಿದ್ದಾರೆ.

ಚುನಾವಣಾ ಆಯೋಗವು 2002ರ ಮತದಾರರ ಪಟ್ಟಿ ಹಾಗೂ 2025ರ ಪಟ್ಟಿ ನಡುವಿನ ವ್ಯತ್ಯಾಸಗಳನ್ನು ಸರಿಪಡಿಸುವ ಉದ್ದೇಶದಿಂದ ಈ ವಿಶೇಷ ಪರಿಷ್ಕರಣೆ ಕೈಗೊಂಡಿದೆ ಎಂದು ಅವರು ವಿವರಿಸಿದ್ದಾರೆ. ಈ ಅವಧಿಯಲ್ಲಿ ಬೂತ್ ಲೆವೆಲ್ ಅಧಿಕಾರಿಗಳು ಮನೆಮನೆಗೆ ಭೇಟಿ ನೀಡಿ ಅರ್ಜಿಗಳನ್ನು ಸಂಗ್ರಹಿಸಲಿದ್ದಾರೆ ಎಂದು ತಿಳಿದುಬಂದಿದೆ.

ಜೂನ್ 30ರಿಂದ ಜುಲೈ 29ರವರೆಗೆ ನಡೆಯಲಿರುವ ಈ ಪ್ರಕ್ರಿಯೆಯಲ್ಲಿ ಮತದಾರರು ಅಗತ್ಯ ದಾಖಲೆಗಳನ್ನು ಸಿದ್ಧವಾಗಿಟ್ಟುಕೊಂಡು ಅರ್ಜಿಗಳನ್ನು ಸರಿಯಾಗಿ ಭರ್ತಿ ಮಾಡಬೇಕು ಎಂದು ಅವರು ಮನವಿ ಮಾಡಿದ್ದಾರೆ. ವಿಶೇಷವಾಗಿ 2002ರ ಪಟ್ಟಿಯಲ್ಲಿ ತಮ್ಮ ಹೆಸರು ಇದ್ದ ಸ್ಥಳ ಹಾಗೂ 2025ರ ಪಟ್ಟಿಯಲ್ಲಿನ ವಿವರಗಳನ್ನು ಸರಿಯಾಗಿ ಪರಿಶೀಲಿಸಿ, ಯಾವುದೇ ವ್ಯತ್ಯಾಸಗಳಿದ್ದರೆ ಸೂಕ್ತ ದಾಖಲೆಗಳನ್ನು ಸಲ್ಲಿಸುವುದು ಅಗತ್ಯ ಎಂದು ಹೇಳಿದ್ದಾರೆ.

ಅರ್ಜಿಯನ್ನು ಭರ್ತಿ ಮಾಡುವ ವೇಳೆ ಪ್ರತಿಯೊಂದು ಮಾಹಿತಿಯನ್ನು ಓದಿ ಅರ್ಥಮಾಡಿಕೊಂಡು, ಅಗತ್ಯವಿದ್ದರೆ ತಿಳಿದವರ ಸಹಾಯ ಪಡೆದು ತಪ್ಪಿಲ್ಲದಂತೆ ಭರ್ತಿ ಮಾಡಬೇಕು ಎಂದು ಡಾ. ರಫೀಕ್ ಅಹಮದ್ ಸಲಹೆ ನೀಡಿದ್ದಾರೆ. ಸಣ್ಣ ತಪ್ಪಿನಿಂದಲೂ ಮತದಾರರ ಪಟ್ಟಿಯಿಂದ ಹೆಸರು ಕೈ ತಪ್ಪುವ ಸಾಧ್ಯತೆ ಇರುವುದರಿಂದ ಎಚ್ಚರಿಕೆ ಅಗತ್ಯ ಎಂದು ಅವರು ತಿಳಿಸಿದ್ದಾರೆ.

ಮತದಾನದ ಹಕ್ಕು ಪ್ರಜಾಪ್ರಭುತ್ವದ ಅತ್ಯಂತ ಪ್ರಮುಖ ಹಕ್ಕುಗಳಲ್ಲಿ ಒಂದಾಗಿದ್ದು, ಅದನ್ನು ಕಾಪಾಡಿಕೊಳ್ಳುವುದು ಪ್ರತಿಯೊಬ್ಬರ ಜವಾಬ್ದಾರಿ ಎಂದು ಅವರು ಮತದಾರರಿಗೆ ಮನವಿ ಮಾಡಿದ್ದಾರೆ.

# ಪ್ರದೀಪ್ ಈಶ್ವರ್‌ಗೆ ತರಾಟೆ

ಬೆಂಗಳೂರು

ಸಿಂಗಾರಕದಿರೇನಹಳ್ಳಿ ಗ್ರಾಮದ ದಲಿತ ರೈತರ ಜಮೀನು ವಿವಾದಕ್ಕೆ ಸಂಬಂಧಿಸಿದಂತೆ ಚಿಕ್ಕಬಳ್ಳಾಪುರ ಶಾಸಕ ಪ್ರದೀಪ್ ಈಶ್ವರ್ ವಿರುದ್ಧ ದಲಿತ ಸಂಘರ್ಷ ಸಮಿತಿ ತೀವ್ರ ಅಸಮಾಧಾನ ವ್ಯಕ್ತಪಡಿಸಿದೆ. ಮಾತನಾಡುವುದಕ್ಕಿಂತ ಸಮಸ್ಯೆ ಪರಿಹಾರಕ್ಕೆ ಆದ್ಯತೆ ನೀಡಿ ದಲಿತರಿಗೆ ನ್ಯಾಯ ಒದಗಿಸಬೇಕು ಎಂದು ಸಮಿತಿಯ ಜಿಲ್ಲಾ ಸಂಚಾಲಕ ಬಿ.ವಿ. ವೆಂಕಟರಮಣ ಆಗ್ರಹಿಸಿದರು.

ಪಟ್ಟಣದ ಕಾರ್ಯನಿರತ ಪತ್ರಕರ್ತರ ಸಂಘದಲ್ಲಿ ದಲಿತ ಸಂಘರ್ಷ ಸಮಿತಿ ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 1972–73ರ ಅವಧಿಯಲ್ಲೇ ಸಿಂಗಾರಕದಿರೇನಹಳ್ಳಿ ಗ್ರಾಮದ ದಲಿತರಿಗೆ ಜಮೀನು ಮಂಜೂರಾಗಿದ್ದು, ಖಾತೆ ಹಾಗೂ ನಕ್ಷೆ ಸೇರಿದಂತೆ ಎಲ್ಲಾ ದಾಖಲೆಗಳು ಕಂದಾಯ ಇಲಾಖೆಯಿಂದ ನೀಡಲಾಗಿದೆ ಎಂದು ತಿಳಿಸಿದರು. ಕಳೆದ ಐದು ದಶಕಗಳಿಂದ ದಲಿತ ರೈತರು ಆ ಜಮೀನಿನಲ್ಲಿ ಕೃಷಿ ಮಾಡಿಕೊಂಡು ಬರುತ್ತಿದ್ದರೂ, ಇದೀಗ ಅರಣ್ಯ ಇಲಾಖೆ ಆ ಭೂಮಿ ತನ್ನ ವ್ಯಾಪ್ತಿಗೆ ಸೇರಿದೆ ಎಂದು ಹೇಳಿ ತೊಂದರೆ ನೀಡುತ್ತಿದೆ ಎಂದು ಆರೋಪಿಸಿದರು.

ದಲಿತ ರೈತರ ವಿರುದ್ಧ ಸುಳ್ಳು ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ, ಬೆದರಿಕೆ ಹಾಗೂ ದೌರ್ಜನ್ಯ ನಡೆಯುತ್ತಿದೆ ಎಂದು ದೂರಿದ ಅವರು, ಈ ವಿಚಾರದಲ್ಲಿ ಶಾಸಕ ಪ್ರದೀಪ್ ಈಶ್ವರ್ ಅರಣ್ಯ ಇಲಾಖೆಯ ಕ್ರಮಗಳಿಗೆ



ಬೆಂಬಲ ನೀಡುತ್ತಿರುವುದು ದಲಿತರಿಗೆ ಅನ್ಯಾಯವಾಗುತ್ತಿದೆ ಎಂದು ಆರೋಪಿಸಿದರು.

"ಜಮೀನು ಕಂದಾಯ ಇಲಾಖೆಯದ್ದೋ ಅಥವಾ ಅರಣ್ಯ ಇಲಾಖೆಯದ್ದೋ ಎಂಬುದು ನಮ್ಮ ಮುಖ್ಯ ಪ್ರಶ್ನೆಯಲ್ಲ. ಸರ್ಕಾರವೇ ಈ ಭೂಮಿಯನ್ನು ದಲಿತರಿಗೆ ಮಂಜೂರು ಮಾಡಿ ದಾಖಲೆಗಳನ್ನು ನೀಡಿದೆ. ಐವತ್ತು ವರ್ಷಗಳಿಂದ ರೈತರು ಆ ಜಮೀನಿನಲ್ಲಿ ಕೃಷಿ ನಡೆಸುತ್ತಿರುವಾಗ ಈಗ ಅದನ್ನು ಅರಣ್ಯ ಭೂಮಿ ಎಂದು ಹೇಳುವುದು ಹೇಗೆ?" ಎಂದು ಪ್ರಶ್ನಿಸಿದರು.

ಅರಣ್ಯ ಇಲಾಖೆ ವಿವಿಧ ಉದ್ದೇಶಗಳಿಗೆ ಭೂಮಿಯನ್ನು ಹಂಚಿಕೆ ಮಾಡಿರುವ ಉದಾಹರಣೆಗಳನ್ನು ಉಲ್ಲೇಖಿಸಿದ ಅವರು, ಖಾಸಗಿ ಸಂಸ್ಥೆಗಳು ಹಾಗೂ ಶಿಕ್ಷಣ ಸಂಸ್ಥೆಗಳಿಗೆ ಭೂಮಿ ನೀಡಿರುವ ಪ್ರಕರಣಗಳನ್ನೂ ಸಮಗ್ರವಾಗಿ ತನಿಖೆ ಮಾಡಬೇಕು ಎಂದು ಆಗ್ರಹಿಸಿದರು.

ಇದೇ ವೇಳೆ ಶಾಸಕ ಪ್ರದೀಪ್ ಈಶ್ವರ್ ಅವರಿಗೆ ನೇರವಾಗಿ ಸಂದೇಶ ನೀಡಿದ ವೆಂಕಟರಮಣ, "ಕಳೆದ ಚುನಾವಣೆಯಲ್ಲಿ ನಾವು ನಿಮ್ಮ ಬೆಂಬಲಕ್ಕೆ ನಿಂತಿದ್ದೆವು. ಈಗ ಚುನಾವಣೆ ಸಮೀಪಿಸುತ್ತಿರುವ ಸಂದರ್ಭದಲ್ಲಿ ದಲಿತ ಸಂಘಟನೆಗಳ ವಿರೋಧವನ್ನು ಕಟ್ಟಿಕೊಳ್ಳಬೇಡಿ. ಸಂಬಂಧಿತ ಇಲಾಖೆಗಳೊಂದಿಗೆ ಚರ್ಚಿಸಿ ದಲಿತ ರೈತರಿಗೆ ನ್ಯಾಯ ಒದಗಿಸಿ" ಎಂದು ಒತ್ತಾಯಿಸಿದರು.

ಪತ್ರಿಕಾಗೋಷ್ಠಿಯಲ್ಲಿ ದಲಿತ ಮುಖಂಡರಾದ ಪ್ರಕಾಶ್, ಚೌಡಪ್ಪ, ನಂಜುಂಡಪ್ಪ, ಸೂರ್ಯನಾರಾಯಣ, ಆಚೇಪಲ್ಲಿ ಶ್ರೀನಿವಾಸ, ಸತೀಶ್, ಬಾಬು, ರಾಜು ಸೇರಿದಂತೆ ಹಲವರು

## ರಾಮಪ್ಪ ಬಿ. ಗುತ್ತೇರರಿಗೆ ಡಿಜಿ-ಐಜಿಪಿ ಪ್ರಶಂಸನಾ ಪದಕ

ಬೆಂಗಳೂರು

ಪೊಲೀಸ್ ಸೇವೆ ಎಂದರೆ ಕೇವಲ ಕಾನೂನು ಸುವ್ಯವಸ್ಥೆ ಕಾಪಾಡುವುದಲ್ಲ, ಸಮಾಜದಲ್ಲಿ ನ್ಯಾಯ, ಭದ್ರತೆ ಹಾಗೂ ವಿಶ್ವಾಸವನ್ನು ನಿರ್ಮಿಸುವ ಮಹತ್ವದ ಜವಾಬ್ದಾರಿಯೂ ಆಗಿದೆ ಎಂಬುದನ್ನು ಸಾಬೀತುಪಡಿಸಿದ ಮಾಲೂರು ಪೊಲೀಸ್ ಇನ್ಸ್‌ಪೆಕ್ಟರ್ ರಾಮಪ್ಪ ಬಿ. ಗುತ್ತೇರ ಅವರಿಗೆ 2025–26ನೇ ಸಾಲಿನ ಪ್ರತಿಷ್ಠಿತ ಡಿಜಿ–ಐಜಿಪಿ ಪ್ರಶಂಸನಾ ಪದಕ ದೊರೆತಿದೆ. ಈ ಗೌರವದಿಂದ ಮಾಲೂರು ತಾಲ್ಲೂಕಿನಲ್ಲಿ ಸಂತೋಷದ ವಾತಾವರಣ ನಿರ್ಮಾಣವಾಗಿದೆ.



2003ರಲ್ಲಿ ಪೊಲೀಸ್ ಇಲಾಖೆಗೆ ಸೇರ್ಪಡೆಯಾದ ರಾಮಪ್ಪ ಗುತ್ತೇರ ಅವರು ತಲಘಟ್ಟಪುರ ಠಾಣೆಯಿಂದ ತಮ್ಮ ಸೇವೆ ಆರಂಭಿಸಿ ಶಿಡ್ಲಘಟ್ಟ, ನಂದಗುಡಿ, ತಿರುಮಲಶೆಟ್ಟಿಹಳ್ಳಿ ಸೇರಿದಂತೆ ವಿವಿಧ ಠಾಣೆಗಳಲ್ಲಿ ಕರ್ತವ್ಯ ನಿರ್ವಹಿಸಿದ್ದಾರೆ. ನಂತರ ಇನ್ಸ್‌ಪೆಕ್ಟರ್ ಹುದ್ದೆಗೆ ಪದೋನ್ನತಿ ಪಡೆದು ತಲಘಟ್ಟಪುರ, ಕೆಂಗೇರಿ, ತಾವರೆಕೆರೆ ಹಾಗೂ ಕಗ್ಗಲಿಪುರ ಠಾಣೆಗಳಲ್ಲಿ ದಕ್ಷತೆಯಿಂದ ಸೇವೆ ಸಲ್ಲಿಸಿದ್ದಾರೆ.

ಮಹಿಳೆಯರು ಮತ್ತು ಮಕ್ಕಳಿಗೆ ಸಂಬಂಧಿಸಿದ ಸಂಕೀರ್ಣ ಅಪರಾಧ ಪ್ರಕರಣಗಳ ತನಿಖೆಯಲ್ಲಿ ಅವರು ನೀಡಿದ ಗಮನಾರ್ಹ ಸೇವೆಯನ್ನು ಇಲಾಖೆಯ ಹಿರಿಯ ಅಧಿಕಾರಿಗಳು ಗುರುತಿಸಿದ್ದಾರೆ. ಅಪರಾಧಿಗಳನ್ನು ಪತ್ತೆಹಚ್ಚಿ ಕಾನೂನು ಕ್ರಮಕ್ಕೆ ಒಳಪಡಿಸುವಲ್ಲಿ ಅವರ ಪಾತ್ರ ಮಹತ್ವದ್ದಾಗಿದೆ ಎಂದು ತಿಳಿದುಬಂದಿದೆ.

ಈ ಹಿಂದೆ ಅವರು 2017ರಲ್ಲಿ ಮುಖ್ಯಮಂತ್ರಿ ಪದಕ, 2023ರಲ್ಲಿ ಕೇಂದ್ರ ಗೃಹ ಸಚಿವರ ಪ್ರಶಂಸಾ ಪದಕ ಹಾಗೂ ರಾಷ್ಟ್ರಪತಿ ಪದಕಕ್ಕೂ ಭಾಜನರಾಗಿದ್ದು, ಇದೀಗ ಡಿಜಿ–ಐಜಿಪಿ ಪ್ರಶಂಸನಾ ಪದಕವು ಅವರ ಸೇವಾ ದಾಖಲೆಗಳಿಗೆ ಮತ್ತೊಂದು ಮಹತ್ವದ ಸೇರ್ಪಡೆಯಾಗಿದೆ.

ಸಾರ್ವಜನಿಕರ ಅಹವಾಲುಗಳಿಗೆ ತ್ವರಿತ ಸ್ಪಂದನೆ, ಅಪರಾಧ ತಡೆ ಕ್ರಮಗಳು ಹಾಗೂ ಜನಸ್ನೇಹಿ ಪೊಲೀಸ್ ವ್ಯವಸ್ಥೆ ಬಲಪಡಿಸುವಲ್ಲಿ ವಿಶೇಷ ಗಮನ ಹರಿಸಿದ್ದಾರೆ. ಇದರಿಂದ ಠಾಣೆಯ ಬಗ್ಗೆ ಸಾರ್ವಜನಿಕರಲ್ಲಿ ವಿಶ್ವಾಸ ಹೆಚ್ಚಾಗಿದೆ ಎಂದು ಸ್ಥಳೀಯರು ತಿಳಿಸಿದ್ದಾರೆ.

ಅವರ ಶಿಸ್ತುಬದ್ಧ ಕಾರ್ಯವೈಖರಿ, ನಿಷ್ಪಕ್ಷಪಾತ ನಿಲುವು ಮತ್ತು ಕರ್ತವ್ಯನಿಷ್ಠೆ ಪೊಲೀಸ್ ಇಲಾಖೆಯ ಯುವ ಅಧಿಕಾರಿಗಳಿಗೆ ಪ್ರೇರಣೆಯಾಗಿದ್ದು, ಈ ಗೌರವವನ್ನು ಇಲಾಖೆಯೂ

# ಬಿರಿಯಾನಿಯಲ್ಲಿ ಹಲ್ಲಿ ಪತ್ತೆ ಆರೋಪ: ಪರಿಶೀಲನೆ



ತುಮಕೂರು

ನಗರದ ಬಿಜಿಟಿ ಮಾಂಸಹಾರಿ ಹೋಟೆಲ್‌ನಲ್ಲಿ ನೀಡಲಾದ ಮಟನ್ ಬಿರಿಯಾನಿಯಲ್ಲಿ ಸತ್ತುಹೋಗಿದ್ದ ಹಲ್ಲಿ ಪತ್ತೆಯಾದ ಘಟನೆ ಸಾರ್ವಜನಿಕರಲ್ಲಿ ಆತಂಕ ಮೂಡಿಸಿದೆ. ಘಟನೆಯ ನಂತರ ಮಹಿಳಾ ಗ್ರಾಹಕ ಅಸ್ವಸ್ಥಗೊಂಡು ಆಸ್ಪತ್ರೆಗೆ ದಾಖಲಾಗಿದ್ದು, ಪ್ರಕರಣದ ತನಿಖೆಗಾಗಿ ಆಹಾರ ಭದ್ರತಾ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಆಹಾರ ಭದ್ರತಾ ಅಧಿಕಾರಿ ಪ್ರತೀಶ್ ರೆಡ್ಡಿ ನೇತೃತ್ವದ ತಂಡವು ಹೋಟೆಲ್‌ಗೆ ಭೇಟಿ ನೀಡಿ ಆಹಾರ ತಯಾರಿ ಪ್ರದೇಶ, ಸಂಗ್ರಹಣಾ ವ್ಯವಸ್ಥೆ ಹಾಗೂ ಸಿಸಿಟಿವಿ ದಾಖಲೆಗಳನ್ನು ಪರಿಶೀಲಿಸಲು ಮುಂದಾಗಿದೆ. ಈ ವೇಳೆ ಅಧಿಕಾರಿಗಳು ಹಾಗೂ ಹೋಟೆಲ್ ಮಾಲೀಕ ರವಿ ನಡುವೆ ವಾಗ್ವಾದ ನಡೆದಿರುವುದಾಗಿ ತಿಳಿದುಬಂದಿದೆ.

ತನಿಖೆ ಪೂರ್ಣಗೊಳ್ಳುವವರೆಗೆ ಹೋಟೆಲ್ ಹಾಗೂ ಅದರ ಆಹಾರ ತಯಾರಿಕಾ ಘಟಕವನ್ನು ಮುಚ್ಚುವಂತೆ ಅಧಿಕಾರಿಗಳು ಸೂಚಿಸಿದ್ದಾರೆ. ಆದರೆ ಆರಂಭದಲ್ಲಿ ಮಾಲೀಕರು ಹೋಟೆಲ್ ಮುಚ್ಚಲು ವಿರೋಧ ವ್ಯಕ್ತಪಡಿಸಿದರೂ, ಕಾನೂನು ನಿಯಮಗಳ ಪ್ರಕಾರ ಕ್ರಮ ಕೈಗೊಳ್ಳಲಾಗಿರುವುದಾಗಿ ಅಧಿಕಾರಿಗಳು ತಿಳಿಸಿದ್ದಾರೆ.

ಪರಿಶೀಲನೆಯ ವೇಳೆ ಸಿಸಿಟಿವಿ ಕ್ಯಾಮೆರಾ ಕಳೆದ ಒಂದು ವಾರದಿಂದ ಕಾರ್ಯನಿರ್ವಹಿಸುತ್ತಿಲ್ಲ ಎಂದು ಮಾಲೀಕರು ನೀಡಿದ ಮಾಹಿತಿ ಅಧಿಕಾರಿಗಳಲ್ಲಿ ಅನುಮಾನಕ್ಕೆ ಕಾರಣವಾಗಿದೆ. ಘಟನೆಯ ಹಿನ್ನೆಲೆ ಹಾಗೂ ಆಹಾರ ತಯಾರಿಕಾ ಪ್ರಕ್ರಿಯೆಯ ಬಗ್ಗೆ ಹೆಚ್ಚಿನ ತನಿಖೆ ಮುಂದುವರಿದಿದೆ.

ಘಟನೆ ಮಂಗಳವಾರ ಸಂಜೆ ಬೆಳಕಿಗೆ ಬಂದಿದೆ ಎಂದು ತಿಳಿದುಬಂದಿದ್ದು, ನೇರಳಕೆರೆ ಗ್ರಾಮದ ಲಲಿತಾ ಎಂಬ ಮಹಿಳೆ ಹೋಟೆಲ್‌ನಲ್ಲಿ ಮಟನ್ ಬಿರಿಯಾನಿ ಸೇವಿಸಿದ ವೇಳೆ ಆಹಾರದಲ್ಲಿ ಹಲ್ಲಿ ಇರುವುದನ್ನು ಗಮನಿಸಿದ್ದಾರೆ. ಇದರಿಂದ ಅವರು ತಕ್ಷಣ ಅಸ್ವಸ್ಥಗೊಂಡು ವಾಂತಿ–ಬೇದಿ ಅನುಭವಿಸಿ ಮೊದಲು ಸ್ಥಳೀಯ ಆಸ್ಪತ್ರೆಗೆ ದಾಖಲಾಗಿ, ಬಳಿಕ ಹೆಚ್ಚಿನ ಚಿಕಿತ್ಸೆಗಾಗಿ ಕೋಲಾರದ ಎಸ್.ಎನ್. ಆಸ್ಪತ್ರೆಗೆ ರವಾನಿಸಲ್ಪಟ್ಟಿದ್ದಾರೆ.

ಮಹಿಳೆಯ ಪ್ರಕಾರ, ಹಲ್ಲಿಯನ್ನು ಗಮನಿಸಿದ ಬಳಿಕ ಹೋಟೆಲ್ ಸಿಬ್ಬಂದಿಗೆ ಮಾಹಿತಿ ನೀಡಿದರೂ "ಏನೂ ಆಗುವುದಿಲ್ಲ" ಎಂದು ಹೇಳಿ ಮತ್ತೊಂದು ಬಿರಿಯಾನಿ ನೀಡಲಾಗಿದೆ ಎಂಬ ಆರೋಪವೂ ಕೇಳಿಬಂದಿದೆ. ಘಟನೆಯ ನಂತರ ಹೋಟೆಲ್ ನಿರ್ಲಕ್ಷ್ಯದಿಂದ ತಮ್ಮ ಆರೋಗ್ಯ ಹದಗೆಟ್ಟಿದೆ ಎಂದು ಮಹಿಳೆ ಆರೋಪಿಸಿದ್ದಾರೆ.

ಘಟನೆಯ ಹಿನ್ನೆಲೆಯಲ್ಲಿ ಸ್ಥಳೀಯ ಅಧಿಕಾರಿಗಳು, ಪುರಸಭೆ ಸಿಬ್ಬಂದಿ ಹಾಗೂ ಪೊಲೀಸ್ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿದ್ದಾರೆ. ಸಾರ್ವಜನಿಕ ಆರೋಗ್ಯಕ್ಕೆ ಸಂಬಂಧಿಸಿದ ಗಂಭೀರ ಘಟನೆ ಎಂಬ ಕಾರಣದಿಂದ ಆಹಾರ ಸುರಕ್ಷತಾ ಇಲಾಖೆ ಮುಂದಿನ ಕ್ರಮ ಕೈಗೊಳ್ಳಲಿದೆ ಎಂದು ತಿಳಿದುಬಂದಿದೆ.

ಈ ಘಟನೆ ಬಂಗಾರಪೇಟೆ ಪ್ರದೇಶದಲ್ಲಿ ಆತಂಕ ಮೂಡಿಸಿದ್ದು, ಹೋಟೆಲ್‌ಗಳ ಆಹಾರ ಸ್ವಚ್ಛತೆ ಹಾಗೂ ಗುಣಮಟ್ಟದ ಬಗ್ಗೆ ಕಠಿಣ ನಿಯಂತ್ರಣ ಕ್ರಮಗಳ ಅಗತ್ಯವನ್ನು ಸಾರ್ವಜನಿಕರು ಒತ್ತಾಯಿಸಿದ್ದಾರೆ.

## 'ಯುವಕರಲ್ಲಿ ಮಾದಕ ಸೇವನೆ ಹೆಚ್ಚಳ ಆತಂಕಕಾರಿ ಬೆಳವಣಿಗೆ'

ದೊಡ್ಡಬಳ್ಳಾಪುರ

ಯುವ ಪೀಳಿಗೆಯಲ್ಲಿ ಮಾದಕ ವಸ್ತುಗಳ ಸೇವನೆ ಹೆಚ್ಚುತ್ತಿರುವುದು ಅಪಾಯಕಾರಿ ಬೆಳವಣಿಗೆ ಎಂದು ಗ್ರಾಮಾಂತರ ಪೊಲೀಸ್ ಠಾಣೆಯ ಸರ್ಕಲ್ ಇನ್ಸ್‌ಪೆಕ್ಟರ್ ಡಾ. ಎಂ.ಬಿ. ನವೀನ್ ಕುಮಾರ್ ಹೇಳಿದ್ದಾರೆ.

ಲಾವಣ್ಯ ಸಂಯುಕ್ತ ಪದವಿ ಪೂರ್ವ ಕಾಲೇಜು ಹಾಗೂ ಗ್ರಾಮಾಂತರ ಪೊಲೀಸ್ ಠಾಣೆಯ ಸಂಯುಕ್ತ ಆಶ್ರಯದಲ್ಲಿ "ಮಾದಕ ವಸ್ತುಗಳಿಂದಾಗುವ ದುಷ್ಪರಿಣಾಮಗಳು" ಕುರಿತು ಜಾಗೃತಿ ಕಾರ್ಯಕ್ರಮವನ್ನು ಕಾಲೇಜಿನಲ್ಲಿ ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ವಿದ್ಯಾರ್ಥಿಗಳು ಹಾಗೂ ಯುವಕರು ಮೋಜು–ಮಸ್ತಿ ಮತ್ತು ಆಕರ್ಷಣೆಗೆ ಒಳಗಾಗಿ ಮಾದಕ ವಸ್ತುಗಳ ಬಳಕೆಗೆ ತಿರುಗುತ್ತಿರುವುದು ಆತಂಕಕಾರಿ ಸಂಗತಿ ಎಂದು ಹೇಳಿದರು. ಮಾದಕ ವಸ್ತುಗಳ ಸೇವನೆಯಿಂದ ದೈಹಿಕ ಹಾಗೂ ಮಾನಸಿಕ ಆರೋಗ್ಯ ಕುಗ್ಗುವುದರ ಜೊತೆಗೆ ಜೀವನವನ್ನೇ ಹಾಳುಮಾಡಿಕೊಳ್ಳುವ ಅಪಾಯವಿದೆ ಎಂದು ಎಚ್ಚರಿಸಿದರು.

ಯುವಕರು ಮಾದಕ ವಸ್ತುಗಳಿಂದ ದೂರ ಉಳಿದರೆ ದೇಶದ ಅಭಿವೃದ್ಧಿಗೆ ಸಹಕಾರಿಯಾಗುತ್ತದೆ ಹಾಗೂ ಉತ್ತಮ ಸಮಾಜ ನಿರ್ಮಾಣ ಸಾಧ್ಯವಾಗುತ್ತದೆ ಎಂದು ಅವರು ಹೇಳಿದರು. ವಿದ್ಯಾರ್ಥಿಗಳು ವಿಶೇಷವಾಗಿ ಈ ದುಷ್ಪ್ರವೃತ್ತಿಯಿಂದ ದೂರವಿದ್ದು, ತಮ್ಮ ಭವಿಷ್ಯವನ್ನು ಸುಧಾರಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲ ಎಂ.ಸಿ. ಮಂಜುನಾಥ್, ವಿವಿಧ ವಿಭಾಗಗಳ ಉಪನ್ಯಾಸಕರು ಹಾಗೂ ಪ್ರಥಮ ಮತ್ತು ದ್ವಿತೀಯ ಪಿಯುಸಿ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## 'ತಾಂತ್ರಿಕ ಸಮಸ್ಯೆಗಳನ್ನು ಸರಿಪಡಿಸಬೇಕು'

ಮಾಲೂರು

ಪ್ರಾಥಮಿಕ ಶಾಲಾ ಶಿಕ್ಷಕರ ಕೆಲಸದ ಒತ್ತಡ ಕಡಿಮೆ ಮಾಡಿ ಅಕ್ಷರ ದಾಸೋಹ ದಿನಸಿಗಳನ್ನು ಸಮರ್ಪಕವಾಗಿ ಸರಬರಾಜು ಮಾಡುವ ಮೂಲಕ ಸಾದಿಲ್ವಾರು ವೆಚ್ಚವನ್ನು ಹೆಚ್ಚಿಸುವಂತೆ ಹಾಗೂ ಸೇವಾ ಹಾಗೂ ಆಡಳಿತಾತ್ಮಕ ತಾಂತ್ರಿಕ ಸಮಸ್ಯೆಗಳನ್ನು ಸರಿಪಡಿಸಬೇಕು ಒತ್ತಾಯಿಸಿ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಮಾಲೂರು ಸಂಘದ ವತಿಯಿಂದ ತಾಲೂಕು ಪಂಚಾಯಿತಿ ಇ ಒ ಅಕ್ಷರ ದಾಸೋಹ ಸಹಾಯಕ ನಿರ್ದೇಶಕರು ನಗರದ ಕ್ಷೇತ್ರ ಶಿಕ್ಷಣಾಧಿಕಾರಗಳ ಕಾರ್ಯಾಲಯದಲ್ಲಿ ಬಿಇಓ ಅವರಿಗೆ ಸಂಘದ ಅಧ್ಯಕ್ಷ ಸಿ.ಎಂ.ನಾರಾಯಣಸ್ವಾಮಿ ಅವರ ನೇತೃತ್ವದಲ್ಲಿ ಮನವಿ ಪತ್ರ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು ಇತ್ತೀಚಿನ ದಿನಗಳಲ್ಲಿ ಪ್ರಾಥಮಿಕ ಶಾಲಾಗಳಲ್ಲಿ ಕಾರ್ಯನಿರ್ವಹಿಸುವ ಶಿಕ್ಷಕರಿಗೆ ಪಾಠ ಪ್ರವಚನಗಳಿಗಿಂತ ಹೆಚ್ಚುವರಿ ಕೆಲಸಗಳೆ ಒತ್ತಡವಾಗಿದೆ, ಅಕ್ಷರ ದಾಸೋಹ ನಿರ್ವಹಣೆ ಗಣತಿ ಕಾರ್ಯ ಬಿ.ಎಲ್.ಓ ಕೆಲಸ ಸ್ಯಾಟ್ಸ್‌ನಲ್ಲಿ ಹಾಜರಾತಿ ಕೆಲವು ಶಾಲೆಗಳಲ್ಲಿ ನೆಟ್ವರ್ಕ್ ಇಲ್ಲದೆ ಗೊಂದಲವಾಗಿದೆ. ವೈದ್ಯಕೀಯ ವೆಚ್ಚದ ಬಿಲ್ಲುಗಳು ಬಾಕಿ ಉಳಿದಿವೆ, ಗುರುಸ್ಪಂದನ ಕಾರ್ಯಕ್ರಮ ಕ್ಷೇತ್ರ ಶಿಕ್ಷಣಾಧಿಕಾರಿಗಳು ಆಯೋಜಿಸಬೇಕು.



ಅಕ್ಷರ ದಾಸೋಹದಲ್ಲಿ ಮೊಟ್ಟೆ ಬಾಳೆಹಣ್ಣು ಇನ್ನಿತರೆ ಆಹಾರ ಪದಾರ್ಥಗಳ ಸರಬರಾಜು ಸಮರ್ಪಕವಾಗಿಲ್ಲದೆ, ಶಿಕ್ಷಕರೇ ಅದರ ವೆಚ್ಚವನ್ನು ಬರಿಸಬೇಕಾಗಿದೆ, ಶಿಕ್ಷಕರ ಸೇವಾ ಮತ್ತು ಆಡಳಿತಾತ್ಮಕ ತಾಂತ್ರಿಕ ಸಮಸ್ಯೆಗಳನ್ನು ಸರಿಪಡಿಸಬೇಕು, ಎಚ್‌ಆರ್‌ಎಂಎಸ್ ನಲ್ಲಿರುವ ಗೊಂದಲಗಳನ್ನು ಸರಿಪಡಿಸಬೇಕು.

ವೇತನ ಭತ್ಯಗಳನ್ನು ಮಂಜೂರು ಮಾಡಲು ಗಳಿಕೆ ರಜೆಯನ್ನು ಸೇವಾ ಪುಸ್ತಕದಲ್ಲಿ ನಮೂದಿಸಿ ಎಚ್‌ಆರ್‌ಎಂಎಸ್‌ನಲ್ಲಿ ಅಪ್ಡೇಟ್ ಮಾಡಬೇಕು, ಜಿಪಿಟಿ ಶಿಕ್ಷಕರು ಸಮಸ್ಯೆಗಳು ಪರಿಹರಿಸಲು ಮುಂದಾಗುವಂತೆ ಒತ್ತಾಯಿಸಿ ಕ್ಷೇತ್ರ ಶಿಕ್ಷಣಾಧಿಕಾರಿ ಬಿಪಿ ಕೆಂಪಯ್ಯ ಅವರಿಗೆ ಮನವಿ ಪತ್ರ ಸಲ್ಲಿಸಿದರು.

ಸರ್ಕಾರಿ ನೌಕರರ ಸಂಘದ ಕಾರ್ಯದರ್ಶಿ ಎಂ.ರವಿ, ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕು ಸಂಘದ ಪ್ರಧಾನ ಕಾರ್ಯದರ್ಶಿ ರವಿಕುಮಾರ್, ಖಜಾಂಚಿ ಎಚ್.ಇ.ಸುರೇಶ್, ಜಿಲ್ಲಾ ಖಜಾಂಚಿ ಸುರೇಶ್ ಕುಮಾರ್.ಕೆ, ಬಡ್ತಿ ಮುಖ್ಯ ಶಿಕ್ಷಕರ ಸಂಘದ ಅಧ್ಯಕ್ಷ ಎಂ.ಮುನಿನಾರಾಯಣ, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಕಾಂತಮ್ಮ, ತಾಲೂಕು ಸಂಘದ ಉಪಾಧ್ಯಕ್ಷರು ಜಿ ಮುನಿಯಪ್ಪ, ಕಾಂತಮ್ಮ, ಸಹ ಕಾರ್ಯದರ್ಶಿ ಶಶಿಧರ, ಸಂಘಟನಾ ಕಾರ್ಯದರ್ಶಿ ಶ್ರೀನಾಥ್, ಸಂಘಟನಾ ಕಾರ್ಯದರ್ಶಿ ಲಕ್ಷ್ಮಿ, ತಾಲೂಕು ಸಂಘದ ಕಾರ್ಯಕಾರಿ ಸಮಿತಿ ಸದಸ್ಯರುಗಳಾದ ನಂದೀಶ್, ಎಂ.ಜಿನಾಗರಾಜ್, ಇನ್ನಿತರರು ಹಾಜರಿದ್ದರು.

## ಪಾಕ್‌ಗೆ ತಿರುಗೇಟು

ತುಮಕೂರು

ಕಾಶ್ಮೀರದ ಅಭಿವೃದ್ಧಿ, ಜನರ ಕಲ್ಯಾಣ ಮತ್ತು ಪ್ರಜಾಪ್ರಭುತ್ವದ ಬಲವರ್ಧನೆಗೆ ಭಾರತ ಸರ್ಕಾರ ಹಲವು ಕ್ರಮಗಳನ್ನು ಕೈಗೊಂಡಿದೆ.

ಕೇಂದ್ರಾಡಳಿತ ಪ್ರದೇಶವಾಗಿ ಮರುಸಂಘಟನೆಯಾದ ಬಳಿಕ ಜಮ್ಮು–ಕಾಶ್ಮೀರದಲ್ಲಿ ಮೂಲಸೌಕರ್ಯ ಅಭಿವೃದ್ಧಿ, ಹೂಡಿಕೆ, ಶಿಕ್ಷಣ, ಆರೋಗ್ಯ ಮತ್ತು ಪ್ರವಾಸೋದ್ಯಮ ಕ್ಷೇತ್ರಗಳಲ್ಲಿ ಗಮನಾರ್ಹ ಪ್ರಗತಿ ಸಾಧಿಸಲಾಗಿದೆ ಎಂದು ಭಾರತ ವಿಶ್ವಸಂಸ್ಥೆಯ ಗಮನಕ್ಕೆ ತಂದಿದೆ.

ಭಾರತವು ಹಲವು ಬಾರಿ ಕಾಶ್ಮೀರ ಕುರಿತ ತನ್ನ ನಿಲುವನ್ನು ಜಾಗತಿಕ ವೇದಿಕೆಗಳಲ್ಲಿ ಪುನರುಚ್ಚರಿಸಿದೆ. ಜಮ್ಮು–ಕಾಶ್ಮೀರ ಮತ್ತು ಲಡಾಖ್ ಭಾರತದ ಅವಿಭಾಜ್ಯ ಭಾಗಗಳಾಗಿದ್ದು, ಈ ವಿಷಯದಲ್ಲಿ ಯಾವುದೇ ಸಂಶಯಕ್ಕೆ ಅವಕಾಶವಿಲ್ಲ ಎಂದು ಭಾರತ ಸ್ಪಷ್ಟಪಡಿಸಿದೆ.

ಪಾಕಿಸ್ತಾನ ಎಷ್ಟೇ ಬಾರಿ ಈ ವಿಚಾರವನ್ನು ಅಂತರರಾಷ್ಟ್ರೀಯ ವೇದಿಕೆಗಳಲ್ಲಿ ಎತ್ತಿದರೂ ಭಾರತದ ಸಾರ್ವಭೌಮತ್ವ ಮತ್ತು ಭೌಗೋಳಿಕ ಸಮಗ್ರತೆಯ ಕುರಿತು ಯಾವುದೇ ಬದಲಾವಣೆ ಆಗುವುದಿಲ್ಲ ಎಂದು ಭಾರತ ತಿಳಿಸಿದೆ.

ವಿಶ್ವಸಂಸ್ಥೆಯ ವೇದಿಕೆಯಲ್ಲಿ ಭಾರತದ ಈ ಸ್ಪಷ್ಟ ಮತ್ತು ದೃಢ ನಿಲುವು ಮತ್ತೊಮ್ಮೆ ಗಮನ ಸೆಳೆದಿದ್ದು, ಕಾಶ್ಮೀರ ವಿಷಯದಲ್ಲಿ ದೇಶದ ನಿಲುವು ಅಚಲವಾಗಿದೆ ಎಂಬ ಸಂದೇಶವನ್ನು ಜಗತ್ತಿಗೆ ರವಾನಿಸಿದೆ.

### ಎಷ್ಟು ದಿನ ಕಾಯಬೇಕು...?: ಸಿಎಂ ಗರಂ

ತುಮಕೂರು

ಸಿಎಂ, ಮನೆ ಕಟ್ಟಲು ಸರ್ಕಾರದಿಂದ ಕಡಿಮೆ ದರದಲ್ಲಿ ನಿವೇಶನ ಪಡೆದವರು 3 ಅಥವಾ ಐದು ವರ್ಷದೊಳಗೆ ಮನೆ ನಿರ್ಮಿಸುವ ನಿಯಮ ಪರಿಶೀಲಿಸಲು ಸಲಹೆ ನೀಡಿದರು. ಕೆ.ಎಚ್.ಬಿ.ಯಿಂದ ಯಿಂದ 568 ಯೋಜನೆಗಳನ್ನು ಅನುಮೋದಿಸಲಾಗಿದ್ದು, ಇದರಲ್ಲಿ 280 ಅನುಷ್ಠಾನಗೊಂಡು, 288 ಬಾಕಿ ಇವೆ. ಈ ಬಾಕಿ ಯೋಜನೆಗಳಿಗೆ ಅಡ್ಡಿ ಆಗಿರುವ ತಾಂತ್ರಿಕ ಅಡಚಣೆಗಳ ನಿವಾರಣೆಗೆ ಕ್ರಮ ವಹಿಸಬೇಕು ಮತ್ತು ದುರುಪಯೋಗ ಆಗದಂತೆ ಜಾಗ್ರತೆ ವಹಿಸಬೇಕು. ಯಾವುದೇ ಪ್ರಮುಖ ತೀರ್ಮಾನಗಳ ಬಗ್ಗೆ ನನ್ನ ಜತೆ ಚರ್ಚೆ ಅಗತ್ಯವೆಂದು ಸಿಎಂ ಪ್ರತಿಪಾದಿಸಿದರು. ಸಂಡೂರಿನಲ್ಲಿ ರಾಜೀವ್ ಗಾಂಧಿ ವಸತಿ ಯೋಜನೆಯಡಿ ನಿರ್ಮಿಸಿರುವ ಮನೆಗಳ ಗುಣಮಟ್ಟಕ್ಕೆ ಮೆಚ್ಚುಗೆ ವ್ಯಕ್ತಪಡಿಸಿರುವ ಸಿಎಂ, ಯಾವುದೇ ವಸತಿ ಯೋಜನೆ ಅನುಷ್ಠಾನಕ್ಕೆ ಯೋಜನಾ ವಿಭಾಗಕ್ಕೆ ಮೊದಲು ಹೋಗಲೇಬೇಕು. ಮನೆ ಕಟ್ಟಿದರೆ ಸಾಲದು. ಮೂಲಭೂತ ಸೌಲಭ್ಯಗಳು ಮತ್ತು ಸೂಕ್ತ ಸಂಪರ್ಕ ಕಲ್ಪಿಸುವ ಕಡೆಗೂ ಗಮನ ಹರಿಸಬೇಕು.

ನೈಜ ಫಲಾನುಭವಿಗಳಿಗೇ ಸವಲತ್ತು ಸಿಗಬೇಕು. ಈ ಬಗ್ಗೆ ಎಲ್ಲರೂ ಸ್ಪಷ್ಟತೆ ಇಟ್ಟುಕೊಳ್ಳಿ ಎಂದು ಎಚ್ಚರಿಸಿದರು.

ಲಾಟರಿ ಮೂಲಕ ಮನೆ ಹಂಚುತ್ತೀರೋ, ಹರಾಜಿನ ಮೂಲಕ ಹಂಚುತ್ತೀರೋ ಎನ್ನುವುದಕ್ಕಿಂತ ನೈಜ ಅರ್ಹರಿಗೇ ಮನೆ ಸಿಗಬೇಕು. ಇದಕ್ಕೇನು ವ್ಯವಸ್ಥೆ ಮಾಡಿದ್ದೀರಿ ಎನ್ನುವ ವಿವರ ಸಲ್ಲಿಸಿ ಎಂದು ಅಧಿಕಾರಿಗಳಿಗೆ ತಾಕೀತು ಮಾಡಿದ ಸಿಎಂ ಡಿಕೆ ಶಿವಕುಮಾರ ಅವರು, ಶಿವರಾಮಕಾರಂತ ಬಡಾವಣೆಯ ರಾಜೀವ್ ಗಾಂಧಿ ವಸತಿ ಯೋಜನೆಯ ಮನೆಗಳ ನಿರ್ಮಾಣ ಜವಾಬ್ದಾರಿಯನ್ನು ಬಿಡಿಎಗೆ ವಹಿಸಲು ಸೂಚನೆ ನೀಡಿದರು.

# 'ಅಗತ್ಯ ವಸ್ತುಗಳ ಖರೀದಿ, ಹಸಿವು ನೀಗುವ ಶಕ್ತಿ'

ತುಮಕೂರು

ಯುವಕರ ಕಣ್ಣಿನಲ್ಲಿ ಭಾರತದ ಭವಿಷ್ಯ ಅಡಗಿದೆ. ದೇಶದ ಸಾಮಾನ್ಯ ಜನರಿಗೂ ಅಗತ್ಯ ವಸ್ತುಗಳನ್ನು ಕೊಳ್ಳುವ ಹಾಗೂ ಹಸಿವನ್ನು ನೀಗಿಸಿಕೊಳ್ಳುವ ಶಕ್ತಿ ಬಂದಾಗ ಮಾತ್ರ ನಿಜವಾದ ಅಭಿವೃದ್ಧಿ ಸಾಧ್ಯ. ಇವೆಲ್ಲವೂ ಸಾಕಾರಗೊಳ್ಳಲು ಕೇಂದ್ರ ಸರ್ಕಾರದ ಪಿಎಂ ಉಷಾ ಯೋಜನೆ ಅತ್ಯಂತ ಸಹಕಾರಿಯಾಗಲಿದೆ ಎಂದು ತುಮಕೂರು ವಿವಿ ಪರೀಕ್ಷಾಂಗ ಕುಲಸಚಿವ ಪ್ರೊ. ಹೆಚ್. ಎಸ್. ಮೋಹನ ಹೇಳಿದರು.

ತುಮಕೂರು ವಿಶ್ವವಿದ್ಯಾನಿಲಯದ ವ್ಯಾವಹಾರ ಆಡಳಿತ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ವತಿಯಿಂದ, ಪಿಎಂ ಉಷಾ ಯೋಜನೆಯಡಿ ವಿಶ್ವವಿದ್ಯಾನಿಲಯದ ಜ್ಞಾನಸಿರಿ ಆವರಣದಲ್ಲಿ ಜೂ. 24 ಬುಧವಾರ ದಂದು ಹಮ್ಮಿಕೊಳ್ಳಲಾಗಿದ್ದ "ಸುಸ್ಥಿರ ಅಭಿವೃದ್ಧಿ ಗುರಿಗಳು" ಎಂಬ ವಿಷಯದ ಕುರಿತ ಒಂದು ದಿನದ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಮಾತನಾಡಿದರು.

ವಿದ್ಯಾರ್ಥಿಗಳು ಕೌಶಲ್ಯಗಳನ್ನು ರೂಢಿಸಿಕೊಂಡಾಗ ಮಾತ್ರ ಸಾಧನೆಯ



ಹಾದಿಯಲ್ಲಿ ಸಾಗಲು ಸಾಧ್ಯ. ನಿರಂತರ ಪ್ರಯತ್ನ, ಕಠಿಣ ಶ್ರಮ ಹಾಗೂ ಕಲಿಕೆಯ ಜೊತೆಗೆ ಜೀವನದ ನೋವು–ನಲಿವುಗಳ ಅನುಭವಗಳ ಬಗ್ಗೆ ಅರಿವು ಮೂಡಿಸಿಕೊಂಡಾಗ ಮಾತ್ರ ಯಶಸ್ಸು ಲಭಿಸುತ್ತದೆ. ಸರಿಯಾದ ಬುನಾದಿ ಮತ್ತು ಗುರಿ ಇಲ್ಲದಿದ್ದರೆ ವಿಫಲವಾಗುವುದು ಖಂಡಿತ. ಆದ್ದರಿಂದ ವಿದ್ಯಾರ್ಥಿಗಳು ತಮಗೆ ಸಿಗುವ ಅವಕಾಶಗಳನ್ನು ವಿದ್ಯಾರ್ಥಿ ಜೀವನದಲ್ಲೇ ಸದುಪಯೋಗಪಡಿಸಿಕೊಳ್ಳಬೇಕು, ಅವಕಾಶ ವಂಚಿತರಾಗಿ ನಂತರ ಮರುಗಬಾರದು ಎಂದರು.

ತುಮಕೂರು ವಿಶ್ವವಿದ್ಯಾನಿಲಯದ ಹಿರಿಯ ಪ್ರಾಧ್ಯಾಪಕರು ಹಾಗೂ ಸಂಶೋಧನಾ ನಿರ್ದೇಶಕರಾದ ಪ್ರೊ. ವಿಲಾಸ್ ಕದ್ರೋಲ್ಕರ್ ಅವರು ಮಾತನಾಡಿ ಇತ್ತೀಚಿನ ಜಾಗತಿಕ ಯುದ್ಧದ ಪರಿಸ್ಥಿತಿಯ ನಡುವೆ ನಾವೆಲ್ಲರೂ ಸುಸ್ಥಿರ ಅಭಿವೃದ್ಧಿಯ ಬಗ್ಗೆ ಮಾತನಾಡುತ್ತಿದ್ದೇವೆ. ಜ್ಞಾನ, ನಾವೀನ್ಯತೆ ಮತ್ತು ಜವಾಬ್ದಾರಿಯುತ ನಿರ್ವಹಣೆಯ ಮೂಲಕ ಭಾರತದ ಭವಿಷ್ಯದ ನಾಯಕರನ್ನು ಸಬಲೀಕರಣಗೊಳಿಸುವುದು ಇಂದಿನ ತುರ್ತು ಅಗತ್ಯವಾಗಿದೆ ಎಂದು ಅಭಿಪ್ರಾಯಪಟ್ಟರು.

ಭವಿಷ್ಯದಲ್ಲಿ ನಾವು ಹೇಗೆ ಬಾಳಬೇಕು ಎಂಬುದನ್ನು ಅರಿತುಕೊಳ್ಳುವ ಮಹತ್ವದ ಸ್ಥಿತಿಯಲ್ಲಿ ನಾವಿಂದು ನಿಂತಿದ್ದೇವೆ. ಪ್ರಕೃತಿ ಮತ್ತು ಪರಿಸರದ ಬಗ್ಗೆ ಕಾಳಜಿ ವಹಿಸುವುದು ಹಾಗೂ ಮಹಿಳೆಯರಿಗೆ ಗೌರವ ನೀಡುವ ಕೆಲಸ ನಮ್ಮಿಂದ ಮೊದಲಾಗಬೇಕು ಎಂದರು.

ಭಾರತವು ಸುಸ್ಥಿರ ಅಭಿವೃದ್ಧಿಗಾಗಿ ಈಗಾಗಲೇ ಹಲವು ಪ್ರಮುಖ ಅಂಶಗಳನ್ನು ಅಳವಡಿಸಿಕೊಂಡಿದೆ. ಸೌರ ಮತ್ತು ಪವನ ವಿದ್ಯುತ್ ಉತ್ಪಾದನೆಗೆ ಹೆಚ್ಚಿನ ಒತ್ತು ನೀಡಲಾಗಿದ್ದು, ಅಂತರರಾಷ್ಟ್ರೀಯ ಸೌರ ಒಕ್ಕೂಟದ ಮೂಲಕ ಭಾರತ ಜಾಗತಿಕ ಮಟ್ಟದಲ್ಲಿ ನಾಯಕತ್ವ ಸಾಧಿಸಿದೆ. ದೇಶದ ಪ್ರತಿ ಪ್ರಜೆಗೂ ನೈರ್ಮಲ್ಯ ಮತ್ತು ಸುರಕ್ಷಿತ ಕುಡಿಯುವ ನೀರನ್ನು ತಲುಪಿಸುವ ನಿಟ್ಟಿನಲ್ಲಿ ಉತ್ತಮ ಮೂಲಸೌಕರ್ಯಗಳನ್ನು ಅಭಿವೃದ್ಧಿಪಡಿಸಲಾಗಿದೆ. ರಾಸಾಯನಿಕ ಮುಕ್ತ ನೈಸರ್ಗಿಕ ಕೃಷಿ ಹಾಗೂ ಸಾವಯವ ಕೃಷಿಯನ್ನು ಪ್ರೋತ್ಸಾಹಿಸಲಾಗುತ್ತಿದ್ದು, ನಗರ ಪ್ರದೇಶಗಳಲ್ಲಿ ಮಾಲಿನ್ಯ ನಿಯಂತ್ರಿಸಲು ಎಲೆಕ್ಟ್ರಿಕ್ ವಾಹನಗಳ ಬಳಕೆಗೆ ಉತ್ತೇಜನ ನೀಡಲಾಗುತ್ತಿದೆ.

ಆ ಮೂಲಕ ಇಂಗಾಲದ ಹೊರಸೂಸುವಿಕೆಯನ್ನು ತಗ್ಗಿಸುವ ಪ್ರಮುಖ ಗುರಿಗಳನ್ನು ದೇಶ ಹೊಂದಿದೆ ಎಂದರು.

ಭಾರತವು ಇಂದಿಗೂ ಸುಸ್ಥಿರ ಅಭಿವೃದ್ಧಿಯಲ್ಲಿ ಹಲವು ಹಿನ್ನಡೆಗಳನ್ನು ಎದುರಿಸುತ್ತಿದೆ. ಕೆಲವು ಹಿಂದುಳಿದ ಜಿಲ್ಲೆಗಳು ಶಿಕ್ಷಣ ಮತ್ತು ಆರೋಗ್ಯ ಸೂಚ್ಯಂಕಗಳಲ್ಲಿ ಹಿಂದೆ ಉಳಿದಿವೆ. ಹೆಚ್ಚುತ್ತಿರುವ ನಗರೀಕರಣ ಮತ್ತು ಕೈಗಾರೀಕರಣದಿಂದಾಗಿ ಅಂತರ್ಜಲದ ಕೊರತೆ ಹಾಗೂ ವಾಯು ಮಾಲಿನ್ಯ ಗಂಭೀರ ಸಮಸ್ಯೆಯಾಗಿದೆ. ಇದರೊಂದಿಗೆ ಬಾಲಕಿಯರ ಬಾಲ್ಯವಿವಾಹ, ಹದಿಹರೆಯದ ಗರ್ಭಧಾರಣೆ ಹಾಗೂ ಉದ್ಯೋಗ ಕ್ಷೇತ್ರದಲ್ಲಿ ಮಹಿಳಾ ಸಮಾನತೆಯ ಕೊರತೆ ದೊಡ್ಡ ಸವಾಲುಗಳಾಗಿವೆ ಎಂದು ಹೇಳಿದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy